ಬೀದರ • ಕಲಬುರಗಿ • ಯಾದಗಿರಿ • ರಾಯಚೂರು • ಕೊಪ್ಪಳ • ಬಳ್ಳಾರಿ • ಬಾಗಲಕೋಟೆ • ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ

Postal Registration No. BDR/054/2024-2026 EMAIL ID:mallammanudi@gmail.com E- Paper WWW.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

Mallammanudi Regional NewsPaper

ಸಂಪಾದಕರು: ರಮೇಶರೆಡ್ಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 336 | PAGE- ಪುಟ 8 | ಭಾನುವಾರ 05.01.2025 ಬೀದರ | RNINO:KARKAN/2011/48371 | RS.ಬೆಲೆ 2/–

# ಸಚಿನ ಆತ್ಮಹತ್ಯೆ:ಸಚಿವ ಪ್ರಿಯಾಂಕ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ



ಮಲ್ಲಮ್ಮನುಡಿ ವಾರ್ತೆ ಬೀದರ. ಕಲಬುರಗಿ:ಜ.4: ಬೀದರ್ ಮೂಲದ ಸಿವಿಲ್ ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷ ಬಿಜೆಪಿ ಶನಿವಾರ ನಗರದಲ್ಲಿ ಪ್ರತಿಭಟನೆ ನಡೆಸಿ ಸಚಿವರ ಮನೆಗೆ ಮುತ್ತಿಗೆ ಹಾಕಲು ಬಿಜೆಪಿ ಮುಖಂಡರು ಯತ್ನಿಸಿದಾಗ ಪೊಲೀಸರು ಅವರನ್ನು ಬಂಧಿಸಿ ಬಿಡುಗಡೆ ಮಾಡಿದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮತ್ತು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಜಗತ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಮಂದಿ ಪಕ್ಷದ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡರು. ಪೊಲೀಸ್ ಬಿಗಿ ಭದ್ರತೆ ನಡುವೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಪ್ರಿಯಾಂಕ್ ಖರ್ಗೆ ನಿವಾಸಕ್ಕೆ ಮುತ್ತಿಗೆ ಹಾಕಲು ತೆರಳುತ್ತಿದ್ದಾಗ ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ನೇತೃತ್ವದಲ್ಲಿ ಬಿಜೆಪಿ ನಾಯಕರನ್ನು ವಶಕ್ಕೆ ಪಡೆಯಲಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಪ್ರಿಯಾಂಕ್ ಖರ್ಗೆ ಅವರ ನಿವಾಸದ ಹೊರಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಪ್ರತಿಭಟನೆಯಿಂದ ಸುಸ್ತಾಗಿ ಬರುವ ಬಿಜೆಪಿ ನಾಯಕರಿಗೆ ತೆಂಗಿನಕಾಯಿ, ಕಾಫಿ, ಟೀ, ಕುಡಿಯುವ ನೀರಿನ ಬಾಟಲಿ ನೀಡುವ ಮೂಲಕ ಉಪಚರಿಸಿದದ್ದು ವಿಶೇಷವಾಗಿ ಗಮನ ಸೆಳೆಯಿತು.

ಈ ಮಧ್ಯೆ ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿರುವ ಪ್ರಿಯಾಂಕ್ ಖರ್ಗೆ, ಪ್ರತಿಪಕ್ಷಗಳ ಬೇಡಿಕೆ ಮತ್ತು ಒತ್ತಡದ ತಂತ್ರಕ್ಕೆ ನಾನಾಗಲೀ ಅಥವಾ ಸರಕಾರವಾಗಲೀ ಮಣಿಯುವುದಿಲ್ಲ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ಸೇರಿದಂತೆ ಬಿಜೆಪಿ ನಾಯಕರ ವಿರುದ್ಧ ಹಲವು ಪ್ರಕರಣಗಳಿವೆ ಎಂದು ಹೇಳಿದರು.

ಡಿಸೆಂಬರ್ 26 ರಂದು ಬೀದರ್ ಜಿಲ್ಲೆಯಲ್ಲಿ ಗುತ್ತಿಗೆದಾರ ಸಚಿನ್ ಪಾಂಚಾಲ್ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಪ್ರಿಯಾಂಕ್ ಖರ್ಗೆ ಅವರ ಆಪ್ತ ಸಹಾಯಕ ರಾಜು ಕಾಪನೂರ ಅವರು ಕಠಿಣ ಕ್ರಮ ಕೈಗೊಳ್ಳುವಂತೆ ಅವರು ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾರೆ ಎನ್ನಲಾಗಿದೆ.

ಕಪನೂರ ಅವರಿಗೆ ಒಂದು ಕೋಟಿ ರೂಪಾಯಿ ನೀಡುವಂತೆ ಕೊಲೆ ಬೆದರಿಕೆ ಹಾಕಲಾಗಿತ್ತು ಎಂದು ಅವರು ಆರೋಪಿಸಿದ್ದಾರೆ. ಡೆತ್ ನೋಟ್ ನಲ್ಲಿ ತಮ್ಮ ಹೆಸರು ಇಲ್ಲದ ಕಾರಣ ನನಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎನ್ನುತ್ತಿರುವ ಪ್ರಿಯಾಂಕ್ ಖರ್ಗೆ, ಈ ಪ್ರಕರಣದ ಸತ್ಯಾಸತ್ಯತೆ ಹೊರಬರಲು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

## ಕಮಲನಗರ ನಿಂದ ರಾಂಪುರೆ ರಸ್ತೆಯಲ್ಲಿ ಗುಂಡಿಗಳ ಹೆಚ್ಚಳ, ವಾಹನ ಸವಾರರ ಪರದಾಟ





ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)

ಕಮಲನಗರ:ಜ.4:ಕಮಲನಗರ ನಿಂದ ರಾಂಪುರೆ ಗ್ರಾಮಕ್ಕೆ ಹೋಗುವ ರಸ್ತೆ ಮದ್ಯದಲ್ಲಿ ಗುಂಡಿ ಸಂಖ್ಯೆ ದಿನದಿನಕ್ಕೆ ಹೆಚ್ಚಾಗುತ್ತಿವೆ ಇದರಿಂದ ವಾಹನ ಸವಾರರು ತಮ್ಮ ಜೀವ ಕೈಯಲ್ಲಿ ಇಟ್ಟಿ-ಕೊಂಡು ಹೋಗುವ ಸ್ಥಿತಿ ನಿರ್ಮಾಣವಾಗಿದೆ.

ಕಮಲನಗರ ನಿಂದ ತಾಲೂಕ ಕೇಂದ್ರ ಔರಾದಗೆ ಹೋಗುವ ಮೂಲ ರಸ್ತೆ ಇದಾಗಿದು ದಿನಾಲೂ ಸಾವಿರಾರು ವಾಹನಗಳು ಸಂಚರಿಸುತ್ತವೆ. ಅದರಲ್ಲಿ ಬೈಕ ಸವಾರ ಗುಂಡಿಯಲ್ಲಿ ಬಿದ್ದು ಕೈ ಕಾಲು ಪೆಟ್ಟಾಗಿರುವ

(2ನೇ ಪುಟ ನೋಡಿ)

## ಪಂಚ ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ: ಚಿಮಕೋಡೆ



ಬೀದರ : ಜ.04: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕೆಂದು ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ತಿಳಿಸಿದರು.


ಅವರು ಇಂದು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಯೋಜನೆಗಳಿಂದ ಬಡವರು, ಕೂಲಿ ಕಾರ್ಮಿಕರು ಹಾಗೂ ನಿರುದ್ಯೋಗ ಯುವಕರ ಬದುಕಿಗೆ ಆಸರೆಯಾಗಿದೆ. ಈ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು.

ಜಿಲ್ಲೆಯಾದ್ಯಂತ ಅನ್ನಭಾಗ್ಯ ಯೋಜನೆಯಡಿ ಆಗಸ್ಟ್.2024 ರವರೆಗೆ 343703 ಪಡಿತರ ಚೀಟಿಗಳಿದ್ದು, ರೂ.188019490 ಕೋಟಿ ಹಣವನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ. ಗೃಹಲಕ್ಷ್ಮೀ ಯೋಜನೆಯಡಿ ಅಕ್ಟೋಬರ್-2024 ರವರೆಗೆ 335429 ಫಲಾನುಭವಿಗಳು

(2ನೇ ಪುಟ ನೋಡಿ)

## ಅಂಬೇಡ್ಕರ್ ಭಾವಚಿತ್ರಕ್ಕೆ ಅವಮಾನ: ಮೂವರು ಅಪ್ರಾಪ್ತರು ಸೇರಿ ನಾಲ್ವರ ಬಂಧನ



ಮಲ್ಲಮ್ಮನುಡಿ ವಾರ್ತೆ ಬೀದರ. ಜ. 04 : ಬಸವಕಲ್ಯಾಣ ತಾಲೂಕಿನ ಕಲಕೋರಾ ಗ್ರಾಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಅವಮಾನ ಮಾಡಿದ ಘಟನೆ ನಡೆದಿದ್ದು, ಮೂವರು ಅಪ್ರಾಪ್ತ ಬಾಲಕರು ಸೇರಿ ನಾಲ್ವರು ಬಂಧನವಾದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಕಲಕೋರಾ ಗ್ರಾಮದ ನಿವಾಸಿಯಾದ ಸಾಗರ್ (18) ಸೇರಿ ಮೂವರು ಅಪ್ರಾಪ್ತರನ್ನು ಬಂಧಿಸಲಾಗಿದೆ ಎಂದು ತಿಳಿದು ಬಂದಿದೆ.

ಡಿಸೆಂಬರ್ ಕೊನೆಯ ವಾರದಲ್ಲಿ ಕಲಕೋರಾ ಗ್ರಾಮದಲ್ಲಿ ಕೆಲ ಯುವಕರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಚಪ್ಪಲಿಯಿಂದ ಹೊಡೆದು, ಕಾಲಿನಿಂದ ತುಳಿಯುವ ಮೂಲಕ ಭಾವಚಿತ್ರ ಹರಿದು ಹಾಕಿ ಅವಮಾನ ಮಾಡಿದ್ದಾರೆ ಎನ್ನಲಾಗಿದೆ.

ಬಳಿಕ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಅವಮಾನ ಮಾಡುತ್ತಿರುವ ವಿಡಿಯೋ

(2ನೇ ಪುಟ ನೋಡಿ)

## ಜ.29 ರಿಂದ ನೀಲಹಳ್ಳಿ ಪ್ರಕೃತಿ ನಗರದಲ್ಲಿ ಭಾರತೀಯ ಸಂಸ್ಕೃತಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4:ಭಾರತ ಅಸ್ಮಿತೆಯನ್ನು ಬಲಪಡಿಸುವ ಮತ್ತು ಹೊಸ ಬೆಳವಣಿಗೆಯನ್ನು ಪ್ರೇರೇಪಿಸುವ ಪ್ರಕೃತಿ ಕೇಂದ್ರಿತ ವಿಕಾಸಕ್ಕಾಗಿ 7 ನೇ ಭಾರತೀಯ ಸಂಸ್ಕೃತಿ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭಾರತ ವಿಕಾಸ ಸಂಗಮದ ಕರ್ನಾಟಕ ಸಂರಕ್ಷಕರಾದ ಬಸವರಾಜ ಪಾಟೀಲ ಸೇಡಂ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಮಿನಿ ಸಭಾಭವನದಲ್ಲಿ ಶನಿವಾರ ಜರುಗಿದ ಭಾರತೀಯ ಸಂಸ್ಕೃತಿ ಉತ್ಸವದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜನವರಿ 29 ರಿಂದ ಫೆಬ್ರವರಿ 6 ರವರೆಗೆ ಶ್ರೀ ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಮಿತಿ ಸೇಡಮ್ ಹಾಗೂ ವಿಕಾಸ ಅಕಾಡೆಮಿ ಮತ್ತು ಭಾರತ ವಿಕಾಸ ಸಂಗಮದ ಆಶ್ರಯದಲ್ಲಿ ಸೇಡಂ-ಕಲಬುರಗಿ ಹೆದ್ದಾರಿಯ ನೀಲಹಳ್ಳಿಯ ಸಮೀಪ ಪ್ರಕೃತಿ ನಗರದಲ್ಲಿ ಕೊತ್ತಲ ಸ್ವರ್ಣ ಜಯಂತಿ ಹಾಗೂ 7ನೇ ಭಾರತೀಯ ಸಂಸ್ಕೃತಿ ಉತ್ಸವ ಜರುಗಲಿದೆ ಎಂದು ತಿಳಿಸಿದರು.

ಭಾರತದ ಸಂಸ್ಕೃತಿಯ ಸಾರವನ್ನು, ಸುಸ್ಥಿರ ಅಭಿವೃದ್ಧಿಯನ್ನು, ಆರ್ಥಿಕ ಮತ್ತು ಸಾಮಾಜಿಕ ಭದ್ರತೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ನಿಟ್ಟಿನಲ್ಲಿ ಈ ಉತ್ಸವ ಮೈಲುಗಲ್ಲಾಗಲಿದೆ, ಸಮುದಾಯದಲ್ಲಿ ಬೇರೂರಿದ ಬುದ್ಧಿವಂತಿಕೆ ಮತ್ತು ಪ್ರಗತಿಯ ಹಂಚಿಕೆಯ ಆಚರಣೆಯೇ ಈ ಹಬ್ಬದ ಮುಖ್ಯ ಧ್ಯೇಯ. ಇದು ಕೇವಲ ಸಂಗಮವಲ್ಲ ಕಲ್ಪನೆಗಳು ಸಂಸ್ಕೃತಿ ಮತ್ತು

(2ನೇ ಪುಟ ನೋಡಿ)

## ದೇಶದ ಬೆನ್ನೆಲುಬು ರೈತರು
## ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ಸಿಗಲಿ:ಸಚಿವ ಈಶ್ವರ ಖಂಡ್ರೆ





ಮಲ್ಲಮ್ಮ ನುಡಿ ವಾರ್ತೆ
(ಮಲ್ಲಪ್ಪಾ ಟಿ ಹಾಸಗೊಂಡ)

ಭಾಲ್ಕಿ:ಜ.4: ದೇಶದ ಬೆನ್ನೆಲುಬು ನಮ್ಮ ರೈತರಾಗಿದ್ದಾರೆ, ಇವರು ಬೆಳೆದ ಬೆಳೆಗೆ ಬೆಂಬಲ ಬೆಲೆ ಸಿಕ್ಕಾಗ ಮಾತ್ರ ರೈತರ ಉದ್ಧಾರ ಸಾಧ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು.

ಪಟ್ಟಣದ ತೋಟಗಾರಿ-ಕೆ ಕಛೇರಿ ಆವರಣದಲ್ಲಿ ಶನಿವಾರ ತೋಟಗಾರಿಕೆ ಇಲಾಖೆಯ ನೂತನ ಕಛೇರಿ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು. ನಮ್ಮ ಜಿಲ್ಲೆಯಲ್ಲಿ ರೈತರಿಗೆ ಬೇಕಾಗುವ ಉತ್ತಮ ವಾತಾವರಣವಿದೆ. ಜಿಲ್ಲೆಯಲ್ಲಿ ಕಾರಂಜಾ, ನಾಂಜರಾ, ಮಾಂಜರಾ ನದಿಗಳು ಹರಿಯುತ್ತವೆ. ಕಪ್ಪು, ಕೆಂಪು ಮಣ್ಣು ರೈತರಿಗೆ ಹವಾಮಾನಕ್ಕೆ ತಕ್ಕಂತೆ ಬೆಳೆ ನೀಡುತ್ತವೆ. ಇಂತಹ ಪರಿಸ್ಥಿತಿಯಲ್ಲಿಯೂ ನಮ್ಮ ರೈತರಿಗೆ ಬೆಂಬಲ ಬೆಲೆ ಸಿಗದ ಕಾರಣ ನಷ್ಟ ಅನುಭವಿಸುತ್ತಾರೆ. ಸ್ವಾತಂತ್ರದ

(2ನೇ ಪುಟ ನೋಡಿ)

## ಮಕ್ಕಳ ಸಮಗ್ರ ಬೆಳವಣಿಗೆಗೆ ಕ್ರೀಡೆಗಳು ಸಹಕಾರಿ: ಡಾ. ಅಬ್ದುಲ್ ಖದೀರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜ.4:ಎರಡು ದಿನಗಳ ಕಲಬುರಗಿ ವಿಭಾಗಮಟ್ಟದ ಮುಕ್ತ ಬ್ಯಾಸ್ಕೆಟ್‌ಬಾಲ್ ಟೂರ್ನಮೆಂಟ್‌ಗೆ ಇಲ್ಲಿಯ ನೆಹರೂ ಕ್ರೀಡಾಂಗಣದಲ್ಲಿ ಶನಿವಾರ ವಿಧ್ಯುಕ್ತ ಚಾಲನೆ ದೊರೆಯಿತು. ಸಸಿಗೆ ನೀರೆರೆದು ಟೂರ್ನಿಯನ್ನು ಉದ್ಘಾಟಿಸಿದ ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ.ಅಬ್ದುಲ್ ಖದೀರ್ ಅವರು, ಪಠ್ಯದ ಜತೆಗೆ ಕ್ರೀಡೆ ಹಾಗೂ ಇತರ ಪಠ್ಯೇತರ ಚಟುವಟಿಕೆಗಳು

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ಸಿಗಲಿ:ಸಚಿವ ಈಶ್ವರ ಖಂಡ್ರೆ

ಸಮಯದಲ್ಲಿ 35 ಕೋಟಿ ಜನಸಂಖೆ ಇರುವ ನಮ್ಮ ದೇಶದಲ್ಲಿ ಆಹಾರದ ಕೊರತೆ ಇತ್ತು. ಜನರು ಹಸುವಿನಿಂದ ಬಳಲುತ್ತಿದ್ದರು. ಆದರೆ ನಮ್ಮ ರೈತರ ಪರಿಶ್ರಮದಿಂದ ಇಂದು ನಾವು ಹೆಚ್ಚಿನ ಆಹಾರ ಉತ್ಪಾದಿಸಿ 142 ಕೋಟಿ ಜನಸಂಖೆಗೆ ಆಹಾರ ಒದಗಿಸುವುದರೊಂದಿಗೆ ಬೇರೆ ದೇಶಕ್ಕೆ ರಫ್ತು ಮಾಡುತ್ತಿದ್ದೇವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನಮ್ಮ ತಾಲೂಕಿನಲ್ಲಿ 10 ಲಕ್ಷ ಎಕರೆ ಭೂಮಿ ಉಳುಮೆ ಮಾಡಲಾಗುತ್ತಿದೆ. ಇಲ್ಲೆಯ ಮಣ್ಣಿನ ಶಕ್ತಿಯಿಂದ ತೇ-ೂಟಗಾರಿಕೆ ಬೆಳೆ ಬೆಳೆಯಲೂ ಸಹಕಾರಿಯಾಗಿದೆ. ತಾಲೂಕಿನಲ್ಲಿ ಕೋಲ್ಡ್ ಸ್ಟೋರೇಜ್ ಯೋಜನೆ ರೂಪಿಸಲಾಗಿದೆ. ಇನ್ನು ಕೆಲವೇ ದಿನಗಳಲ್ಲಿ ಇಲ್ಲಿ ಕೋಲ್ಡ್ ಸ್ಟೋರೇಜ್ ಘಟಕ ಸ್ಥಾಪಿಸಿ, ತೋಟಗಾರಿಕೆ ಬೆಳೆ ಬೆಳೆಯುವ ರೈತರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು. ತಾಲೂಕಿನ ರೈತರಿಗೆ ಅನುಕೂಲ ವಾಗುವ ನಿಟ್ಟಿನಲ್ಲಿ 8 ಕೊಟಿ ರೂ. ಹೆಚ್ಚುವರಿ ಅನುದಾನದಲ್ಲಿ ಸ್ಪಿಂಕಲರ್ ನೀಡಲಾಗಿದೆ. ಕಾಂಗ್ರೆಸ್ ಸರ್ಕಾರ ರೈತರ ಪರ ಸರ್ಕಾರ ಹೀಗಾಗಿ ಪ್ರತಿ ರೈತರ ಪಂಪ್ ಸೆಟ್‌ಗೆ ಉಚಿತ ವಿದ್ಯುತ ನೀಡುತ್ತಲಿದೆ. ಕೇಂದ್ರದಲ್ಲಿ ಮನಮೋಹನ್ ಸಿಂಗ್ ಸರ್ಕಾರದ ಸಮಯದಲ್ಲಿ ರೈತರ 75 ಸಾವಿರ ಕೋಟಿ ರೂ. ಸಾಲ ಮನ್ನಾ ಮಾಡಲಾಗಿತ್ತು. ರಾಜ್ಯದ ಸಿದ್ರಾಮಯ್ಯ ಸರ್ಕಾರದಲ್ಲಿ 50 ಸಾವಿರ ಕೋಟಿ ರೂ. ಸಾಲ ಮಂಜೂರು ಮಾಡಿದ್ದೇವೆ. ಡಿಸಿಸಿ ಬ್ಯಾಂಕ್‌ನ ಕಟ್ ಬಾಕಿ ಬಡ್ಡಿ ಮನ್ನಾ ಮಾಡಲಾಗಿದೆ. ರೈತರು ವೈಜ್ಞಾನಿಕವಾಗಿ ಬೆಳೆ ಬೆಳೆಯುವ ಮೂಲಕ ಕಡಿಮೆ ಖರ್ಚಿನಲ್ಲಿ ಉತ್ತಮ ಬೆಳೆ ಬೆಳೆಯಬೇಕು ಎಂದು ಸಲಹೆ ನೀಡಿದರು. ಇದೇವೇಳೆ ಎನ್‌ಹೆಚ್‌ಎಮ್ ಮತ್ತು ಆರ್‌ಕೆವ್ಹಿವಾಯ್ ಯೋಜನೆ ಅಡಿಯಲ್ಲಿ ಸಹಾಯಧನ ಪಡೆದ ರೈತ ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಿಸಿದರು. ತೋಟಗಾರಿಕೆ ಜಿಲ್ಲಾ ಉಪನಿರ್ದೇಶಕ ವಿಶ್ವನಾಥ ಜಿಳ್ಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕ ಮಾರುತಿ ಜಬನೂರ ತೋಟಗಾರಿಕೆ ಇಲಾಖೆಯ ಕಾರ್ಯವೈಖರಿಯ ಬಗ್ಗೆ ಮಾಹಿತಿ ನೀಡಿದರು. ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂಧನಕೆರೆ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೆರೆ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಹಣಮಂತರಾವ ಚವ್ಹಾಣ, ವಿಜಯಕುಮಾರ ರಾಜಭವನ, ಬಸವರಾಜ ಹುಡಗೆ, ಶಾಲಿವಾನ ಪಾಟೀಲ, ಓಂಪ್ರಕಾಶ ಮೋರೆ, ದೇವಿದಾಸ ಜೊತಿಬಾ, ಸಂದೀಪ, ಪ್ರಶಾಂತ ಸಿರಗಿರೆ ಉಪಸ್ಥಿತರಿದ್ದರು. ಮಾರುತಿ ಜಬನೂರ ಸ್ವಾಗತಿಸಿದರು, ದೀಪಕ ಥಮಕೆ ನಿರೂಪಿಸಿದರು. ಓಂಕಾರ ಮೋರೆ ವಂದಿಸಿದರು.

## ಮಕ್ಕಳ ಸಮಗ್ರ ಬೆಳವಣಿಗೆಗೆ ಕ್ರೀಡೆಗಳು ಸಹಕಾರಿ: ಡಾ. ಅಬ್ದುಲ್ ಖದೀರ್

ಮಕ್ಕಳ ಸಮಗ್ರ ಬೆಳವಣಿಗೆಗೆ ಸಹಕಾರಿಯಾಗಲಿವೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕ್ರೀಡೆಯಲ್ಲಿ ಸಾಧನೆಗೆ ಪ್ರಯತ್ನಿಸಬೇಕು ಎಂದು ಹೇಳಿದರು.

ನಗರಸಭೆಯ ಸ್ಥಾಯಿ ಸಮಿತಿಯ ಅಧ್ಯಕ್ಷ ಪ್ರಶಾಂತ ದೊಡ್ಡಿ ಮಾತನಾಡಿ, ಉತ್ತಮ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಅವಶ್ಯಕ ಎಂದು ತಿಳಿಸಿದರು.ಜಿಲ್ಲಾ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ಸಂತೋಷ ತಾಳಂಪಳ್ಳಿ ಮಾತನಾಡಿ, ಬರುವ ದಿನಗಳಲ್ಲಿ ಬೀದರನಲ್ಲಿ ರಾಜ್ಯಮಟ್ಟದ ಮಹಿಳಾ ಬ್ಯಾಸ್ಕೆಟ್‌ಬಾಲ್ ಟೂರ್ನಿ ಹಮ್ಮಿಕೊಳ್ಳುವ ಉದ್ದೇಶ ಇದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ತಾಂತ್ರಿಕ ಅಧಿಕಾರಿ ವೆಂಕಟೇಶ್, ಜಿಲ್ಲಾ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಕಾರ್ಯದರ್ಶಿ ಶಿವಕುಮಾರ, ನಿರ್ದೇಶಕಿ ಮಂಗಲಾ ಭಾಗವತ್, ಕಲಬುರಗಿ ಜಿಲ್ಲಾ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಕಾರ್ಯದರ್ಶಿ ಡಾ. ಶಂಕರ ಸೂರೆ, ಡಯಟ್ ಉಪನ್ಯಾಸಕಿ ಗೀತಾ ಎಸ್. ಗಡ್ಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಬ್ಯಾಸ್ಕೆಟ್‌ಬಾಲ್ ತರಬೇತುದಾರ ರಾಘವೇಂದ್ರ, ವಾಲಿಬಾಲ್ ತರಬೇತುದಾರ ಜೈಪ್ರಕಾಶ, ನಿವೃತ್ತ ದೈಹಿಕ ಶಿಕ್ಷಕ ಭೀಮಾಶಂಕರ ಮತ್ತಿತರರು ಇದ್ದರು.

ಜಿಲ್ಲಾ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ವತಿಯಿಂದ ಟೂರ್ನಿ ಹಮ್ಮಿಕೊಂಡಿದ್ದು, ಬೀದರ್, ಬಳ್ಳಾರಿಯ ತಲಾ ಎರಡು ಹಾಗೂ ಕಲಬುರಗಿಯ ಮೂರು ತಂಡಗಳು ಸೇರಿ ಒಟ್ಟು ಏಳು ತಂಡಗಳು ಪಾಲ್ಗೊಂಡಿವೆ.

## ಮೂವರು ಅಪ್ರಾಪ್ತರು ಸೇರಿ ನಾಲ್ವರ ಬಂಧನ

ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು ಎನ್ನಲಾಗಿದೆ.

ಘಟನೆಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹರಿಬಿಟ್ಟ ನಂತರ ಜ.1ರಂದು ನಮಗೆ ಮಾಹಿತಿ ಸಿಕ್ಕಿದೆ. ತಕ್ಷಣವೇ ಪ್ರಕರಣ ದಾಖಲಿಸಿಕೊಂಡು ಒಬ್ಬ ಯುವಕ ಮತ್ತು ಮೂವರು ಅಪ್ರಾಪ್ತ ಬಾಲಕರನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸಿದ್ದೇವೆ ಎಂದು ಪೊಲೀಸ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಘಟನೆ ಕುರಿತು ಮುಡಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಭಾರತೀಯ ಸಂಸ್ಕೃತಿ ಉತ್ಸವ

ಜನಸಮುದಾಯದ ಮಹಾ ಸಮ್ಮಿಲನ ಎಂದು ಸೇಡಂ ಹೇಳಿದರು. ರಾಷ್ಟ್ರಾದ್ಯಂತ ಇರುವ ಮಹಾನ್ ದಾರ್ಶನಿಕರು, ಚಿಂತಕರು, ಕುಶಲಕರ್ಮಿಗಳು ಮತ್ತು ಸವೋದ್ಯಮಿಗಳು ಒಂದೇ ಉದ್ದೇಶಕ್ಕಾಗಿ ಒಗ್ಗೂಡಿ ಚಿಂತನ ಮತ್ತು ಚರ್ಚೆಗಳ ಮೂಲಕ ಸಮುದಾಯದ ಸುಸ್ಥಿರ ಅಭಿವೃದ್ಧಿ, ಆರೋಗ್ಯ ಮತ್ತು ಏಕತೆಯ ಭವಿಷ್ಯವನ್ನು ನಿರ್ಮಿಸಲು ಈ ಉತ್ಸವ ವೇದಿಕೆಯಾಗಲಿದೆ, ವಾಣಿಜ್ಯೋದ್ಯಮದ ಸಶಕ್ತಿಕರಣ, ಪರಿಸರ ಸಂರಕ್ಷಣೆ, ಸುಸ್ಥಿರ ಸಮಗ್ರ ಕೃಷಿ, ಶಿಕ್ಷಣ ಹಾಗೂ ಸಮಗ್ರ ಯೋಗಕ್ಷೇಮವನ್ನು ಪೋಷಿಸುವ ಉತ್ಸವವಾಗಲಿದೆ ಎಂದರು.ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಭಾರತ ವಿಕಾಸ ಸಂಗಮವು ಕೆ.ಎನ್. ಗೋವಿಂದಾಚಾರ್ಯರ ಕನಸಿನ ಕೂಸಾಗಿದೆ, ತನ್ಮೂಲಕ ಭಾರತೀಯ ಸಂಸ್ಕೃತಿ ಉತ್ಸವದ ಆಯೋಜನೆಯನ್ನು ಪ್ರಾರಂಭಿಸಿ ಅದನ್ನು 3 ವರ್ಷಗಳಿಗೊಮ್ಮೆ ದೇಶದ ತುಂಬೆಲ್ಲಾ ಆಚರಿಸುತ್ತಾ ಬಂದಿರುವುದು ನಮ್ಮೆಲ್ಲರ ಭಾಗ್ಯವಾಗಿದೆ ಎಂದರು.ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಜಿ ಶಾಸಕ, ಬಿ,ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಭಾರತ ವಿಕಾಸ ಸಂಗಮವೂ ಪ್ರಾಚೀನ ಭಾರತದ ಕಾಲಾತೀತ ಉದಾತ್ತ ಚಿಂತನೆ ಹಾಗೂ ಮೌಲ್ಯಗಳನ್ನು ಅಳವಡಿಸಿಕೊಂಡಿದ್ದು, ಇದು ಸಮಾಜ ಹಾಗೂ ಪ್ರಕೃತಿ ಮಾತೆಯ ನಡುವೆ ಸಂಬಂಧವನ್ನು ಬೆಸೆಯುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಪ್ರಕೃತಿ ಕೇಂದ್ರಿತ ಅಭಿವೃದ್ಧಿಯು ಈ ಸಂಸ್ಥೆಯ ಧ್ಯೇಯವಾಗಿದೆ. ಎಲ್ಲರೂ ಈ ಭಾರತೀಯ ಸಂಸ್ಕೃತಿ ಉತ್ತವಕ್ಕೆ ಸಹಾಯ ಸಹಕಾರ ನೀಡುವುದರ ಜೊತೆಗೆ ಕಾರ್‍ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸೋಣ ಎಂದರು.

ಸಭೆಯಲ್ಲಿ ಸಂಘದ ಗೌರವ ಕಾರ್ಯಧರ್ಶೀ ಮಹೇಶ ಅಥಣಿ, ಸದಸ್ಯರುಗಳು, ಆಡಳಿತ ಮಂಡಳಿ ಕಾರ್ಯಾಧ್ಯಕ್ಷರುಗಳು, ವಿವಿಧ ಮಹಾವಿದ್ಯಾಲಯಗಳ ಪ್ರಾಚಾರ್ಯರು ಇದ್ದರು. ಸಂಘದ ಆಡಳಿತಾಧಿಕಾರಿ ವಿ.ಆರ್.ಶಿರೋಳ ಸ್ವಾಗತಿಸಿದರು, ಪ್ರಸಾರಾಂಗ ವಿಭಾಗದ ನಿರ್ದೇಶಕ ಪಿ.ಎನ್.ಸಿಂಪಿ ವಂದಿಸಿದರು, ರಮೇಶ ಯಾಮನಶೆಟ್ಟಿ ನಿರೂಪಿಸಿದರು.

## ಸದುಪಯೋಗ ಪಡೆದುಕೊಳ್ಳಿ: ಚಿಮಕೋಡೆ

ನೋಂದಾಯಿಸಿಕೊಂಡಿದ್ದು, ಒಟ್ಟು ರೂ. 9298820000 ಗಳನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 376084 ಫಲಾನುಭವಿಗಳಿದ್ದು, ಒಟ್ಟು 231.12 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿಯಲ್ಲಿ ಒಟ್ಟು 62337710 ಅಭ್ಯರ್ಥಿಗಳು ಉಚಿತವಾಗಿ ಪ್ರಯಾಣಿಸುವುದರ ಮೂಲಕ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ. ಹಾಗೂ ಯುವನಿಧಿ ಯೋಜನೆಯಡಿ ಜಿಲ್ಲೆಯಾದ್ಯಂತ ಒಟ್ಟು 5395 ಪದವಿ ಹಾಗೂ 81 ಡಿಪ್ಲೋಮಾ ಪೂರ್ಣಗೊಳಿಸಿದ ನೋಂದಾಯಿತ ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದು, ಒಟ್ಟು ರೂ. 93234000 ಗಳನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕರಿಗಳಾದ ಡಾ.ಗಿರೀಶ ಬದೋಲೆ ಮಾತನಾಡಿ, ಪ್ರಗತಿ ಪರಿಶೀಲನಾ ಸಭೆಗೆ ಸಂಬಂಧಪಟ್ಟ ಯೋಜನೆಗಳ ಅಧಿಕಾರಿಗಳು ಗೈರು ಹಾಜರಾಗಿ ಸರಿಯಾದ ಮಾಹಿತಿ ನೀಡದ ಅಧಿಕಾರಿಗಳಿಗೆ ನೋಟಿಸ ನೀಡಲು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿಗಳಾದ ಕಿಶೋರ ದುಬೆ, ಜಿಲ್ಲಾ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಾದ ಪೂರ್ಜಾ ಚಾರ್ಜ, ಲತಾ ಹಾರಕೂಡೆ, ಮಾರುತಿ ಬಂಗಾರೆ, ಮಹೆರೋಜ್ ಖಾನ್, ಬೀದರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಫೂಲೆಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀಧರ, ಜೇಸ್ಕಾಂ ಕಾರ್ಯಪಾಲಕ ಅಭಿಯಂತರರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಉದ್ಯೋಗ ವಿನಿಮಯ ಇಲಾಖೆಯ ಅಧಿಕಾರಿಗಳು ಮತ್ತು ತಾಲ್ಲೂಕ ಮಟ್ಟದ ಗ್ಯಾರಂಟಿ ಸಮಿತಿ ಸದಸ್ಯರುಗಳು ಸೇರಿದಂತೆ ಎಲ್ಲಾ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಗುಂಡಿಗಳ ಹೆಚ್ಚಳ, ವಾಹನ ಸವಾರರ ಪರದಾಟ

ಘಟನೆಗಳು ನಡಿಯುತ್ತಿವೆ.

ಖತಗಾಂವ ಗ್ರಾಸ ನಿಂದ ರಾಂಪುರ ಗ್ರಾಮದವರೇ ರಸ್ತೆ ಹೆಚ್ಚಿನ ಪ್ರಮಾಣದಲ್ಲಿ ಹಾಳಾಗಿದೆ, ಅಧಿಕಾರಗಳ ಕಳಪೆ ಕಾಮಗಾರಿಯಿಂದ ಇಂದು ಪ್ರಯಾಣಿಕರಿಗೆ ಇಂತಹ ಸ್ಥಿತಿ ಬಂದಿದೆ. ಸಂಬಂಧ ಪಟ್ಟ ಅಧಿಕಾರಿಗಳು ಈ ಬಗ್ಗೆ ಗಮನ ಹರಿಸಿ ಆದಷ್ಟು ಬೇಗನೆ ರಸ್ತೆ ರಿಪೇರಿ ಮಾಡಿ ಸುಲಭ ಸಂಚಾರಕ್ಕೆ ಅನುವ ಮಾಡಿ ಕೂಡಬೇಕೆಂದು ತಮ್ಮ ನೋವನ್ನು ತೋಡಿಕೊಂಡರು.

## ಜ.7 ರಂದು ಬೀದರಗೆ ಸಚಿವ ಸತೀಶ ಜಾರಕಿಹೋಳಿ

ಬೀದರ:ಜ.04:ಲೋಕೋಪಯೋಗಿ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೋಳಿ ಅವರು ಜನವರಿ.7 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಅಂದು ಬೆಳಿಗ್ಗೆ 11 ಗಂಟೆಗೆ ಹುಮನಾಬಾದ ತಾಲ್ಲೂಕಿನ ಜಿಲ್ಲಾ ಮುಖ್ಯ ರಸ್ತೆ ಎನ್‌ಎಚ್.9 ರಲ್ಲಿ ಕಿ.ಮೀ.6.40 ರಿಂದ 9.20 ವರೆಗಿನ ಚಿಟಗುಪ್ಪಾ ವಯಾ ಶಮತಬಾದ್ ರಸ್ತೆಯಲ್ಲಿ ಕೈಗೊಂಡಿರುವ ಕಾಮಗಾರಿಯ ಪರಿವೀಕ್ಷಣೆ ಮಾಡಲಿದ್ದಾರೆ. ನಂತರ ಮಧ್ಯಾಹ್ನ 2 ಗಂಟೆಗೆ ನೌಬಾದ್–ಕಮಲನಗರ–ನಾಬಾದ್ (ಬೀದರ) ಮಹಾರಾಷ್ಟ್ರ ಗಡಿ ಭಾಗದ ರಾಷ್ಟ್ರೀಯ ಹೆದ್ದಾರಿ–50 ರ ಕಿ.ಮೀ. 0.00 ದಿಂದ ಕಿ.ಮೀ. 54.370 ನೌಬಾದವರೆಗಿನ ಕೈಗೊಳ್ಳಲಾಗಿರುವ ರಸ್ತೆ ಕಾಮಗಾರಿಗಳ ಪರಿವೀಕ್ಷಣೆ ನಡೆಸುವರು. ನಂತರ ಮಧ್ಯಾಹ್ನ 3 ಗಂಟೆಗೆ ಬೀದರ್ ಜಿಲ್ಲಾ ಕಾಂಗ್ರೆಸ್ ಕಛೇರಿ ಭೇಟಿ ನೀಡುವರು. ಸಂಜೆ 4 ಗಂ–ಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೀದರ ಜಿಲ್ಲೆಯ ಲೋಕೋಪಯೋಗಿ ವಿಭಾಗದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಸಚಿವರ ಆಪ್ತಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.7 ಲೋಕಾಯುಕ್ತ-ರಿಂದ ಜನಸಂಪರ್ಕ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4:ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಜನವರಿ 7 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ವರೆಗೆ ಗುಳೇದಗುಡ್ಡ ತಾಲೂಕಾ ಪಂಚಾಯತ ಕಾರ್ಯಾಲಯದಲ್ಲಿ ಜನಸಂಪರ್ಕ ಸಭೆ ಹಮ್ಮಿಕೊಂಡಿದ್ದಾರೆ.

ಸರಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿನಾಕಾರಣ ವಿಳಂಬ ಹಾಗೂ ಇನ್ನಿತರೆ ತೊಂದರೆ ಆಗಿದ್ದರೆ ಅಂತಹ ಅಧಿಕಾರಿ ಮತ್ತು ನೌಕರರ ವಿರುದ್ಧ ಸಾರ್ವಜನಿಕರು ಸಭೆಗೆ ಹಾಜರಾಗಿ ತಮ್ಮ ಲಿಖಿತ ದೂರುಗಳನ್ನು ನಿಗದಿತ ಪ್ರಪತ್ರದಲ್ಲಿ ನೀಡಿದಲ್ಲಿ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಬಹುದಾಗಿದೆ.

ದೂರುಗಳನ್ನು ಅಲ್ಲಿನ ಸ್ಥಳೀಯ ಅಧಿಕಾರಿಗಳ ಸಹಕಾರದೊಂದಿಗೆ ಇತ್ಯರ್ಥಪಡಿಸಲಾಗುವುದು ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–236200, 295170 ಗೆ ಸಂಪರ್ಕಿಸಬಹುದಾಗಿದೆ.

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಕಲಬುರಗಿ,ಜ.04:ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಜನವರಿ 5 ರಂದು ಭಾನುವಾರ ರಾತ್ರಿ 8.55 ಗಂಟೆಗೆ ಕಲಬುರಗಿಗೆ ಆಗಮಿಸಿ, ನಂತರ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

## ನೌಕರಿಯಿಂದ ನಿವೃತ್ತರಾದರೂ ಕರ್ಮದಿಂದ ನಿವೃತ್ತಿ ಅಸಾಧ್ಯ: ಉಪ್ಪಿನ



ಬೀದರ: ಜ. 04 : ಮನುಷ್ಯನಿಗೆ ಹುಟ್ಟು ಹಾಗೂ ಸಾವು ಹೇಗೆ ಸಹಜವೋ ಅದೇ ರೀತಿ ನೌಕರಿಯಿಂದ ನಿವೃತ್ತರಾಗುವುದು ಅನಿವಾರ್ಯ. ಆದರೂ ಜೀವನಪೂರ್ತಿ ಸತ್ಕರ್ಮದಿಂದ ಸರ್ವರ ಮನ ಗೆಲ್ಲುವ ಕಾರ್ಯ ಮಾಡಬೇಕಿದೆ ಎಂದು ಜೈ ಹಿಂದ್ ಹಿರಿಯ ನಾಗರಿಕರ ಸಂಘದ ಕಾರ್ಯದರ್ಶಿ ವೀರಭದ್ರಪ್ಪ ಉಪ್ಪಿನ್ ಹೇಳಿದರು,

ಇತ್ತಿಚೀಗೆ ನಗರದ ಕರ್ನಾಟಕ ಐಟಿಐ ಕಾಲೇಜಿನಲ್ಲಿ ವಯೋನಿವರತ್ತಿ ಹೊಂದಿರುವ ವಿರೇಶ ಪಾಟೀಲ ಅವರ ವಯೋ ನಿವೃತ್ತಿ ಅಂಗವಾಗಿ ಹಮ್ಮಿಕೊಂಡ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಡಿದರು.

ಜೀವನದಲ್ಲಿ ಅಂದುಕೊಂಡಿದ್ದನ್ನು ಸಾಧಿಸಲು ನೌಕರಿಯಲ್ಲಿದ್ದಾಗ ಕಷ್ಟ ಸಾಧ್ಯವಾಗಲಿದೆ. ಆದರೆ ನೌಕರಿ ಮುಗಿಸಿ ರಿಟೈರ್ ಆದ ಬಳಿಕ ನಾವು ಏನು ಬೇಕಾದರೂ ಸಾಧಿಸಬಹುದು. ನೆಂಟರಿಷ್ಟರ, ಬಮಧು ಬಳಗದ ಕಾರ್ಯಕ್ರಮಗಳಿಗೆ ಅಟೆ–ಂಡ್ ಆಗಲು ಅನುಕುಲ ಆಗಲಿದೆ. ಅದಕ್ಕೆ ತಾನೇ ಒಳ್ಳೆ ಉದಾಹರಣೆಯಾಗಿರುವೆ. ಗೆಳೆಯರೊಂದಿಗೆ ಬೆರೆಯಲು ಹಾಗೂ ಉತ್ತಮ ಹಾಗೂ ನೆಮ್ಮದಿ ಬದುಕು ಸಾಗಿಸಲು ಸಾಧ್ಯವಾಗಲಿದೆ. ಹಾಗಾಗಿ ವಿರೇಶ ಪಾಟೀಲ ತಮ್ಮ ಬದುಕಿನುದ್ದಕ್ಕೂ ಒಳ್ಳೆ ಸೇವೆ ಮಾಡಿ ನಿವೃತ್ತರಾಗಿದ್ದು, ಮುಂದಿನ ಬದುಕು ಸಮಾಜಕ್ಕಾಗಿ ಮೀಸಲಿಡುವಂತೆ ಕರೆ ಕೊಟ್ಟರು.

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಅಧಿಕಾರಿ ಲಕ್ಷ್ಮಿಕಾಂತ್ ಮಾತನಾಡಿ, ವಿರೇಶ ನಮ್ಮ ಬಾಲ್ಯದ ಗೆಳೆಯರು. ಅವರು ಪಾಠದ ಜೊತೆಗೆ ಆಟಕ್ಕೂ ಮಹತ್ವ ನೀಡುತ್ತಿದ್ದರು. ಹಾಗಾಗಿ ಮುಂದಿನ ಅವರು ಬದುಕು ಆಟಕ್ಕೆ ಮೀಸಲಿಟ್ಟು ಒಳ್ಳೆಯ ಆರೋಗ್ಯವಂತರಾಗಿ ಬದುಕಬಹುದೆಂಬ ವಿಶ್ವಸವಿದೆ ಎಂದರು.

ಸರ್ಕಾರಿ ಐಟಿಐ ಕಾಲೇಜಿನ ತರಬೇತಿ ಅಧಿಕಾರಿ ಪ್ರಶಾಂತ್ ಜಾಂತಿಕರ ಮಾತನಡಿದರು. ಕರ್ನಾಟಕ ಐಟಿಐ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಗಣಪತರಾವ ಕುಲಕರ್ಣಿ ವೇದಿಕೆಯಲ್ಲಿದ್ದರು. ಈ ಸಂದರ್ಭದಲ್ಲಿ ವಯೋನಿವೃತ್ತಿಯಾದ ವಿರೇಶ ಪಾಟೀಲ ದಂಪತಿಗಳನ್ನು ಸನ್ಮಾನಿಸಲಾಯಿತು. ಕಾಲೇಜಿನ ತರಬೇತಿ ಅಧಿಕರಿಗಳಾದ ರವಿ ಪಾಟೀಲ್ ನಿರೂಪಣೆ ಮಾಡಿದರು. ಸತೀಶ್ ಬೆಳಕೋಟೆ ವಂದಿಸಿದರು.

ಸೂರ್ಯಕಾಂತ್, ರಾಮದೇವ್ ಜಾದವ್ ಸುಮಿದಾ ಕುಲಕರ್ಣಿ, ಉಮಾಕಾಂತ್ ಹರಡಿಗೆ, ಎಸ್ತರ್, ರಾಜಕುಮಾರ್ ಸೇರಿದಂತೆ ಕಾಲೇಜಿನ ಇತರೆ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ನೌಕರರ ಸಂಘ: ಬಿರಾದಾರ ಗೌರವಾಧ್ಯಕ್ಷ, ಕಪಲಾಪುರೆ ಕಾರ್ಯಾಧ್ಯಕ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಜ. 04 : ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷರಾಗಿ ಸೂರ್ಯಕಾಂತ ಎ.ಬಿರಾದಾರ ಹಾಗೂ ಕಾರ್ಯಾಧ್ಯಕ್ಷರಾಗಿ ಶಿವರಾಜ ಕಪಲಾಪುರೆ ಅವರನ್ನು ನೇಮಕ ಮಾಡಲಾಗಿದೆ.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಸೂರ್ಯಕಾಂತ ಬಿರಾದಾರ ಕೃಷಿ ಇಲಾಖೆಯ ಉಪ



ನಿರ್ದೇಶಕರಾಗಿದ್ದರೆ, ಶಿವರಾಜ ಕಪಲಾಪುರೆ ಸಿರ್ಸಿ(ಎ) ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ಹಿರಿಯ ಮುಖ್ಯಶಿಕ್ಷಕರಾಗಿದ್ದಾರೆ. ನೌಕರರ ವಿವಿಧ ಸಂಘ ಸಂಸ್ಥೆಗಳೊಂದಿಗೆ



ಒಡನಾಟ ಹೊಂದಿದ್ದಾರೆ.

ಬಿರಾದಾರ ಹಾಗೂ ಕಪಲಾಪುರೆ ಅವರ ನೇಮಕಕ್ಕೆ ಅನೇಕ ನೌಕರರು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

## ಸತತ ಪರಿಶ್ರಮ ವಿದ್ಯಾರ್ಥಿಗಳಿಗೆ ಉನ್ನತ ಸ್ಥಾನಕ್ಕೆ ಒಯ್ಯಬಲ್ಲದು: ಡಾ. ನೌಬಾದೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 04 : ಸತತ ಕಠಿಣ ಪರಿಶ್ರಮ, ಛಲ, ಸಮಯಪಾಲನೆ ಮತ್ತು ಶಿಸ್ತು ವಿದ್ಯಾರ್ಥಿಗಳಿಗೆ ಉನ್ನತ ಸ್ಥಾನಕ್ಕೆ ಒಯ್ಯಬಲ್ಲುದೆಂದು ಕರ್ನಾಟಕ ಫಾರ್ಮಸಿ ಕಾಲೇಜಿನ ಪ್ರಾಚಾರ್ಯರಾದ ಡಾ. ಕಾಶಿನಾಥ ನೌಬಾದೆ ತಿಳಿಸಿದರು.

ನಗರದ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಜ್ಞಾನಗಂಗಾ ಟ್ರಸ್ಟ್ ಅಡಿಯಲ್ಲಿನ ಶ್ರೀ ಶಾಹು ಮಹಾರಾಜ ಫಾರ್ಮಸಿ ಕಾಲೇಜಿನ ಮೊದಲನೇ ವರ್ಷದ ಗ್ರ್ಯಾಜುವೇಶನ್ ಡೇ ಉದ್ಘಾಟಿಸಿ ಮಾತನಾಡಿದರು.

ಶಾಹು ಮಹಾರಾಜ ಫಾರ್ಮಸಿ ಕಾಲೇಜು ಸ್ಪರ್ಧೆಯೊಂದಿಗೆ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕಾರ್ಯ ಮಾಡುತ್ತಿದೆ. ಉತ್ತಮ ಬೋಧನೆ, ಶಿಸ್ತಿನ ಸಿಪಾಯಿಗಳಾದ ಬೋಧಕ ವೃಂದ, ಅಧ್ಯಕ್ಷ ಅನೀಲಕುಮಾರ ಕಾಳೆ ಹಾಗೂ ವೈ ಮಾಧವರಾವ ಅವರ ಸಹಕಾರ ಮಕ್ಕಳ ಜ್ಞಾನ ವೃದ್ಧಿಗೆ ನಾಂದಿ ಹಾಡಿದೆ. ವಿದ್ಯಾರ್ಥಿಗಳು ಸಹಿತ ಪದವಿ ಮುಗಿದ ತಕ್ಷಣ ಜನಸೇವೆ, ಸಮಾಜ ಸೇವೆ ಕಡೆಗೂ ಹೆಚ್ಚು ಒತ್ತು ಕೊಡಬೇಕೆಂದು ಸಲಹೆ ನೀಡಿದರು.

ಜ್ಞಾನಗಂಗಾ ಟ್ರಸ್ಟ್ ನ ಅಧ್ಯಕ್ಷ ಅನೀಲಕುಮಾರ ಕಾಳೆ ಮಾತನಾಡಿ ವಿದ್ಯಾರ್ಥಿಗಳು ತಮ್ಮ ನಿಸ್ವಾರ್ಥ ಸೇವೆ ಹಾಗೂ ಪರಿಶ್ರಮದಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಲಹೆ ನೀಡಿದರು. ಅಲ್ಲದೇ ಮಕ್ಕಳು ಫಾರ್ಮಸಿ ಕೋರ್ಸ್ ಗಾಗಿ ಮೊದಲು ದೂರದ ಬೆಂಗಳೂರು ಮಂಗಳೂರು ಕಡೆಗೆ ಹೋಗುತಿದ್ದರು. ಆದರೆ ಈಗ ನಮ್ಮ ಶಾಹು ಮಹಾರಾಜ ಕಾಲೇಜಿನಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುತ್ತಿದೆ. ಕ.ಕ. ಭಾಗದ ಬೀದರ ಜಿಲ್ಲೆಯೂ ಯಾವುದರಲ್ಲಿಯೂ ಕಡಿಮೆ ಇಲ್ಲ ಎನ್ನುವುದಕ್ಕೆ ನಮ್ಮ ಕಾಲೇಜಿನ 100% ಫಲಿತಾಂಶ ಜ್ವಲಂತ ಉದಾಹರಣೆಯಾಗಿದೆ ಎಂದರು.

ಡೈಮಂಡ್ ಸಮೂಹ ಸಂಸ್ಥೆಯ ಅಧ್ಯಕ್ಷ ವೈ. ಮಾಧವರಾವ ಮಾತನಾಡಿ ನಮ್ಮ ಕಾಲೇಜು 2019 ರಲ್ಲಿ ಆರಂಭಗೊಂಡು 2020 ರಲ್ಲಿ ಫಾರ್ಮಸಿಯ ಕೋರ್ಸ್ ಮೊದಲ ವರ್ಷ ಆರಂಭಗೊಂಡಿತು. ಹಿರಿಯರ ಆಶೀರ್ವಾದಿಂದ ಮತ್ತು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಕಾಲೇಜು ಆರಂಭಿಸಲಾಗಿದೆ ಎಂದರು.

## ವಿಶೇಷ ಚೇತನರ ಉಚಿತ ಸಾಮೂಹಿಕ ವಿವಾಹಕ್ಕೆ ನೊಂದಾಯಿಸಿ

ಮಲ್ಲಮ್ಮನುಡಿ ವಾರ್ತೆ

ಕುಕುನೂರು : ಪಟ್ಟಣದ ಮುಂಡರಗಿ ಶ್ರೀ ಅನ್ನದಾನೇಶ್ವರ ಶಾಖ ಮಠದಲ್ಲಿ ಡಾ. ಮಹದೇವ ಮಹಾಸ್ವಾಮಿಗಳ ದ್ವಿತೀಯ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಯಲಬುರ್ಗಾ ಶ್ರೀ ವೀರಭದ್ರೇಶ್ವರ ವಿಕಲಚೇತನರ ಗ್ರಾಮೀಣ ಅಭಿವೃದ್ಧಿ ಹಾಗೂ ಶಿಕ್ಷಣ ಸಂಸ್ಥೆಯ ಸಯೋಗದಲ್ಲಿ ಜನವರಿ 30 ರಂದು ವಿಶೇಷ ಚೇತನರ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು. ವಿವಾಹವಾಗಲು ಬಯಸುವ ವಿಶೇಷ ಚೇತನ ಜೋಡಿಗಳ ಜನವರಿ 15ನೇ ದಿನಾಂಕ ಒಳಗಾಗಿ ತಮ್ಮ ಹೆಸರು ನೋಂದಾಯಿಸಲು ಈ ಮೂಲಕ ತಿಳಿಸಲಾಗಿದೆ. ವಿವಾಹ ಕಾರ್ಯಕ್ರಮಕ್ಕೆ ದಾನಿಗಳು ಕೂಡ ಕೈಜೋಡಿಸಿ ತಮ್ಮ ಸೇವೆ ಸಲ್ಲಿಸಲು ಕೋರಲಾಗಿದೆ ಹೆಚ್ಚಿನ ಮಾಹಿತಿಗಾಗಿ ಈರಪ್ಪ ಕರೆಕುರಿ, 8762437848- ಕೊಟ್ರಯ್ಯ ಕೆಂಬಾವಿಮಠ-9972518887, ಈರಮ್ಮ ಕವಲೂರ-8660063402, ಇವರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಲಾಗಿದೆ.

## ಮಹಿಳೆ ಮೇಲೆ ಹಲ್ಲೆ :2 ಸಾವಿರ ರೂ ದಂಡ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.4:ಮಹಿಳೆಯೊಬ್ಬರ ಮೇಲೆ ಹಲ್ಲೆ ನಡೆಸಿದ್ದು ಸಾಬೀತಾದ ಹಿನ್ನೆಲೆಯಲ್ಲಿ ಚಿಂಚೋಳಿ ತಾಲೂಕಿನ ಯಲಕಪಳ್ಳಿ ಗ್ರಾಮದ ದತ್ತಾ-ರೆಡ್ಡಿ ಸಂಗಾರೆಡ್ಡಿ ಬಿರಾದಾರ ಎಂಬುವವರಿಗೆ ಚಿಂಚೋಳಿಯ ಜೆಎಂಎಫ್‌ಸಿ ನ್ಯಾಯಾಲಯದ ಪ್ರಧಾನ ಸಿವಿಲ್ ನ್ಯಾಯಾಧೀಶ ದತ್ತಕುಮಾರ ಜವಳಕರ ಅವರು ಅಪರಾಧಿಗೆ 2 ಸಾವಿರ ರೂ ದಂಡ ವಿಧಿಸಿ ಆದೇಶಿಸಿದ್ದಾರೆ.

## ಐ.ಟಿ.ಐ. ಕಾಲೇಜಿನಲ್ಲಿ ಸಾವಿತ್ರಿಬಾಯಿ ಫುಲೆ ಜಯಂತಿ ಆಚರಣೆ: ಶಿಕ್ಷಣದಿಂದ ಮಾತ್ರ ಉಜ್ವಲ ಭವಿಷ್ಯ-ಬಿ.ಫೌಜಿಯಾ ತರನ್ನುಮ್




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೀವನದಲ್ಲಿ ಮುಂದೆ ಏನಾದರು ಸಾಧಿಸಬೇಕು ಮತ್ತು ಸಮಾಜಕ್ಕೆ ಒಳಿತು ಮಾಡಬೇಕೆಂದರೆ ಶಿಕ್ಷಣ ಅತೀ ಅವಶ್ಯಕವಾಗಿದೆ. ಶಿಕ್ಷಣದಿಂದಲೆ ನಿಮ್ಮ ಭವಿಷ್ಯ ಉಜ್ವಲವಾಗಲಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನನುಮ್ ಹೇಳಿದರು.

ಶುಕ್ರವಾರ ಕಲಬುರಗಿ ನಗರದ ಎಂ.ಎಸ್.ಕೆ.ಮಿಲ್ ರಸ್ತೆಯಲ್ಲಿರುನ ಸರ್ಕಾರಿ ಐ.ಟಿ.ಐ.(ಪರುಷ) ಕಾಲೇಜಿನಲ್ಲಿ ಆಯೋಜಿಸಿದ ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ 194ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಕ್ಷರದವ್ವನ ಕೊಡುಗೆಯನ್ನು ಸ್ಮರಿಸಿದರು.ಒಂಭತ್ತನ್ನೇ ವಯಸ್ಸಿನಲ್ಲಿಯೇ ಮದುವೆಯಾದ ಸಾವಿತ್ರಿಬಾಯಿ ಫುಲೆ ಅವರು ಮುಂದೆ ಪತಿ ಜ್ಯೋತಿಭಾ ಫುಲೆ ಅವರ ಸಹಾಯದಿಂದ ಅಕ್ಷರದ ಜ್ಞಾನ ಪಡೆದುಕೊಂಡರು. ಬರೀ ಅವರಷ್ಟೆ ಅಕ್ಷರ ಕಲಿಯಲ್ಲಿಲ್ಲ. ಬದಲಾಗಿ ಪುರುಷ ಪ್ರಧಾನವಾದ ಈ ದೇಶದಲ್ಲಿ ಶಿಕ್ಷಣದಿಂದ ವಂಚಿತ ಶೋಷಿತ, ಹಿಂದುಳಿದ, ದಲಿತ ಸಮುದಾಯದ ಹೆಣ್ಣು ಮಕ್ಕಳಿಗೆ ಅಕ್ಷರದ ಬೆಳಕು ಚೆಲ್ಲಿದ ಶ್ರೇಷ್ಠ ಶಿಕ್ಷಕಿಯಾಗಿ ಹೊರಹೊಮ್ಮಿದ್ದಾರೆ ಎಂದರು.ನೀವೆಲ್ಲ ಐ.ಟಿ.ಐ. ವೃತ್ತಿ ಆಯ್ಕೆ ಮಾಡಿಕೊಂಡಿರುವುದು ಒಳ್ಳೇಯದೆ. ಕೈಗಾರಿಕೆಯಲ್ಲಿ ಕೆಲಸ ಗಿಟ್ಟಿಸಿಕೊಳ್ಳಲು ಕೌಶಲ್ಯದ ಅವಶ್ಯಕತೆ ಇದ್ದು, ಇಲ್ಲಿ ನೀಡಲಾಗುವ ತರಬೇತಿಯ ಸಂಪೂರ್ಣ ಲಾಭ ಪಡೆಯಬೇಕು.

ನೌಕರಿಯಲ್ಲಿ ಸಣ್ಣದು-ದೊಡ್ಡದು ಎನ್ನದೆ ಕಾಯಕದಲ್ಲಿ ವಿಶ್ವಾಸ ಇಟ್ಟು ಮುನ್ನಗ್ಗಬೇಕು ಎಂದು ಪ್ರಶಿಕ್ಷಣಾರ್ಥಿಗಳಿಗೆ ಕರೆ ನೀಡಿದರು. ಗೋದುತಾಯಿ ಪದವಿ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಡಾ.ನೀಲಾಂಬಿಕಾ ಪೊಲೀಸ್ ಪಾಟೀಲ ಮುಖ್ಯ ಭಾಷಣಕಾರರಾಗಿ ಆಗಮಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೌಶಲ್ಯಭಿವೃದ್ಧಿ ಅಧಿಕಾರಿ ಮತ್ತು ಸರ್ಕಾರಿ ಐ.ಟಿ.ಐ (ಪುರುಷ) ಕಾಲೇಜಿನ ಪ್ರಾಂಶುಪಾಲ ಮುರಳಿಧರರಾವ ರತ್ನಗಿರಿ, ಜಿಲ್ಲಾ ಉದ್ಯೋಗ ವಿನಿಮಿಯ ಕಚೇರಿಯ ಸಹಾಯಕ ನಿರ್ದೇಶಕಿ ಭಾರತಿ, ಕಾಲೇಜಿನ ಆಡಳಿತಾಧಿಕಾರಿ ಸುರೇಶ ವಗ್ಗೆ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿದ್ದರು.

## ಜಿಲ್ಲಾ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಒತ್ತು- ಸಚಿವ ಎನ್.ಎಸ್. ಭೋಸರಾಜು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಾಜ್ಯದಲ್ಲಿರುವ ಜಿಲ್ಲಾ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಮನವಿಗಳು ಬರುತ್ತಿದ್ದು ಅವುಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಸಣ್ಣ ನೀರಾವರಿ. ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಹೇಳಿದರು. ಅವರು ಶನಿವಾರ ಕೊಪ್ಪಳ ನಗರದಲ್ಲಿರುವ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿದ ನಂತರ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಶೇ. 50:50 ರ ಅನುದಾನದಲ್ಲಿ ಈಗಾಗಲೇ ರಾಯಚೂರು. ಯಾದಗಿರಿ ಮತ್ತು ಮಂಗಳೂರಿನಲ್ಲಿ ಒಳ್ಳೆಯ ವಿಜ್ಞಾನ ಕೇಂದ್ರಗಳನ್ನು ಮಾಡುತ್ತಿದ್ದೆವೆ. ಅದರಂತೆ ಉತ್ತರ ಕರ್ನಾಟಕದ ಜಿಲ್ಲೆಯ ಎಲ್ಲಾ ಕಡೆ ಪ್ರೌಢ ಶಾಲೆಯ ಮಕ್ಕಳಿಗೆ ಅನುಕೂಲವಾಗುವ ಮತ್ತು ಅವರಿಗೆ ವಿಜ್ಞಾನದ ಕುರಿತು ಮಾಹಿತಿ ನೀಡಲು ಈ ಕೇಂದ್ರಗಳನ್ನು ಅಭಿವೃದ್ಧಿಪಡಿಸಲು ಅನುದಾನವನ್ನು ನೀಡಲಾಗುವುದು ಎಂದರು. ಮೊಬೈಲ್ ವ್ಯಾನಗಳ ಮುಖಾಂತರ ಶಾಲೆಗಳಿಗೆ ತೆರಳಿ ವಿಜ್ಞಾನದ ಮಾಹಿತಿಯನ್ನು ಮಕ್ಕಳಿಗೆ ನೀಡಲಾಗುತ್ತದೆ. ಜಿಲ್ಲಾ ವಿಜ್ಞಾನ ಕೇಂದ್ರದ ಅಧ್ಯಕ್ಷರು ಜಿಲ್ಲಾಧಿಕಾರಿಗಳು ಆಗಿರುವುದರಿಂದ ಆಗಾಗ್ಗೆ ಸಭೆ ನಡೆಸಿ ವಿಜ್ಞಾನ ಕೇಂದ್ರಕ್ಕೆ ಬೇಕಾಗುವ ಸೌಲಭ್ಯಗಳನ್ನು ಒದಗಿಸಬೇಕು. ಇದಕ್ಕೆ ಆಯಾ ಜಿಲ್ಲೆಯ ಸಚಿವರು. ಸಂಸದರು. ಶಾಸಕರು ತಮ್ಮ ಸ್ಥಳೀಯ ಅನುದಾನದಲ್ಲಿ ನೆರವನ್ನು ನೀಡುವ ಮೂಲಕ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಎಲ್ಲರೂ ಸಹಾಯ ಸಹಕಾರ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಮಾಜಿ ಸಂಸದರಾದ ಸಂಗಣ್ಣ ಕರಡಿ, ಕೊಪ್ಪಳ ತಹಶೀಲ್ದಾರ ವಿಠಲ್ಲ ಚೌಗಲೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದಾರ ಸೇರಿದಂತೆ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರದ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೇ ಜನ್ಮ ದಿನಾಚರಣೆ

## ಸಾವಿತ್ರಿಬಾಯಿ ಫುಲೆ ಅವರ ಶ್ರಮ ಅನನ್ಯ: ಬೇಲೂರೆ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕೆಲ ವರ್ಗಕ್ಕೆ ಮಾತ್ರ ಸೀಮಿತವಾಗಿದ್ದ ಶಿಕ್ಷಣವನ್ನು ಸರ್ವರಿಗೂ ಸಿಗುವಂತೆ ಮಾಡಿದ ಕೀರ್ತಿ ಸಾವಿತ್ರಿಬಾಯಿ ಫುಲೆ ಅವರಿಗೆ ಸಲ್ಲುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ರಾಜಕುಮಾರ ಬೇಲೂರೆ ಹೇಳಿದರು. ಪಟ್ಟಣದ ಸರ್ಕಾರಿ ಕನ್ಯಾ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಮಿತಿ ತಾಲ್ಲೂಕು ಘಟಕ ಹಮ್ಮಿಕೊಂಡಿದ್ದ ಸಾವಿತ್ರಿಬಾಯಿ ಫುಲೆ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. 'ದೇಶದಲ್ಲಿ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಪ್ರತ್ಯೇಕ ಶಾಲೆ ಆರಂಭಿಸುವ ಮೂಲಕ ಮಹಿಳಾ ಶಿಕ್ಷಣ ಪದ್ಧತಿಗೆ ಸಾವಿತ್ರಿಬಾಯಿ ಫುಲೆ ಮುನ್ನುಡಿ ಬರೆದರು. ಮಹಿಳೆಯರನ್ನು ಅಡುಗೆ ಮನೆಗೆ ಸೀಮಿತ ಮಾಡಿದ ಕಾಲದಲ್ಲಿ ಶಿಕ್ಷಣ ಕ್ರಾಂತಿ ಮಾಡಿದ ಪರಿಣಾಮ ಇಂದು ಮಹಿಳೆಯರು ಎಲ್ಲ ರಂಗಗಳಲ್ಲಿ ಸಾಧನೆ ಮಾಡಲು ಕಾರಣವಾಗಿದೆ' ಎಂದು ಹೇಳಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ. ಭುವನೇಶ್ವರಿ ಮಾತನಾಡಿ, ಆಗಿನ ಕಾಲದ ಸಾಮಾಜಿಕ ಸಮಾನತೆ, ದೀನ ದಲಿತರ, ಹಿಂದುಳಿದವರ ಶೈಕ್ಷಣಿಕ ಅಭಿವೃದ್ಧಿಗೆ ತಮ್ಮ ಜೀವನವನ್ನೆ ಮುಡಿಪಾಗಿಟ್ಟು ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಸುಧಾರಣೆ ತಂದ ಮಹಾತ್ಮರಲ್ಲಿ ಸಾವಿತ್ರಿಬಾಯಿ ಫುಲೆಯವರು ಅಗ್ರಗಣ್ಯರು. ಅವರ ಆದರ್ಶ ಸರಳ ಜೀವನವು ಎಲ್ಲರಿಗೂ ಮಾದರಿ ಎಂದರು. ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ಮಾತನಾಡಿ, ಭಾರತದ ಮೊದಲ ಮಹಿಳಾ ಶಿಕ್ಷಕರಲ್ಲಿ ಒಬ್ಬರು, ಸಮಾಜ ಸುಧಾರಕಿ ಮತ್ತು ಕವಿ. ಮಹಾರಾಷ್ಟ್ರದಲ್ಲಿ ಅವರ ಪತಿ ಜ್ಯೋತಿಬಾ ಫುಲೆ ಅವರೊಂದಿಗೆ, ಅವರು ಭಾರತದಲ್ಲಿ ಮಹಿಳಾ ಹಕ್ಕುಗಳನ್ನು ಸುಧಾರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಸಾವಿತ್ರಿಬಾಯಿ ಫುಲೆ ಯವರೇ ಮೊದಲ ಗುರುವಾಗಿದ್ದಾರೆ.

> ಸ್ತ್ರೀ ಕುಲಕ್ಕೆ ಕ್ರಾಂತಿಯ ಜ್ಯೋತಿಯಾಗಿ, ಅಕ್ಷರ ನೀಡಿದ ಅವ್ವ, ಸಾವಿತ್ರಿಬಾಯಿ ಫುಲೆಯವರ ಜೀವನ ಅಸಂಖ್ಯಾತ ತ್ಯಾಗಗಳಿಂದ ಕೂಡಿದೆ.
> **-ತಾಲೂಕ ಅಧ್ಯಕ್ಷೆ ಪ್ರೇಮಿಳಾರೆಡ್ಡಿ**

ಎಂದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್ ಮಾತನಾಡಿ, ಸಾವಿತ್ರಿಬಾಯಿ ಫುಲೆಯವರ ಹೋರಾಟದ ಬದುಕು ಬದಲಾವಣೆಯತ್ತ ಅವರು ಇಟ್ಟ ಹೆಜ್ಜೆ ಗುರುತುಗಳಾಗಿವೆ. ಅವಾಚ್ಯ ಬೈಗಳು, ಮೈಮೇಲೆ ಮಣ್ಣು ಕೆಸರು ಸಗಣಿ ಎರಚಿದರು ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಮುನ್ನಡೆದರು. ಶೋಷಣೆ, ದಬ್ಬಾಳಿಕೆ, ಅನ್ಯಾಯ ಜಾತಿ ವ್ಯವಸ್ಥೆಯನ್ನು ಎದುರಿಸಿದರು ಎಂದರು. ತಾಲೂಕ ಅಧ್ಯಕ್ಷೆ ಪ್ರೇಮಿಳಾರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಅವರು, ಸ್ತ್ರೀ ಕುಲಕ್ಕೆ ಕ್ರಾಂತಿಯ ಜ್ಯೋತಿಯಾಗಿ, ಅಕ್ಷರ ನೀಡಿದ ಅವ್ವ, ಸಾವಿತ್ರಿಬಾಯಿ ಫುಲೆ ಅವರ ಜೀವನ ಅಸಂಖ್ಯಾತ ತ್ಯಾಗಗಳಿಂದ ಕೂಡಿದೆ. ತವರು ಮನೆ, ಗಂಡನ ಮನೆಯ ಸಂಬಂಧಗಳಿಂದ ದೂರವಾಗಿ ತನ್ನ ಪತಿಯ ಬೆಂಬಲ ಮತ್ತು ಆಶ್ರಯ ಜೊತೆಗೆ ರಾಷ್ಟಕ್ಕೆ ಅಕ್ಷರ ಮಾತೆಯಾಗಿ ಬದುಕನ್ನು ಕಟ್ಟಿ-ಕೊಂಡ ಧೀಮಂತ ಮಹಿಳೆ ಸಾವಿತ್ರಿಬಾಯಿ ಫುಲೆ, ಅನೇಕ ಸಮಾಜ ಸುಧಾರಕರಿಗೆ ದಾರಿ ದೀಪವೇ ಜ್ಯೋತಿಭಾ ಮತ್ತು ಸಾವಿತ್ರಿಬಾಯಿ ಫುಲೆ ದಂಪತಿಗಳು. ಮೂಢನಂಬಿಕೆಗಳನ್ನು ಕಿತ್ತಿಸೆದು, ಅಂಧಕಾರದಲ್ಲಿ ಮುಳುಗಿದ ಸ್ತ್ರೀ ಕುಲವನ್ನು ಮೇಲೆತ್ತಿ ಅಕ್ಷರವನ್ನು ನೀಡಿ, ಸ್ವಾಭಿಮಾನದ ಬದುಕನ್ನು ಕಟ್ಟಿಕೊಡುವಲ್ಲಿ ಅವರ ಶ್ರಮ ಅಪಾರವಾದುದು. ಆದ್ದರಿಂದ ಪ್ರತಿ ಸಾಧಕ ಹೆಣ್ಣು ಮಕ್ಕಳಿಗೆ ಅವರ ಆದರ್ಶ ಜೀವನದ ಪಥವನ್ನು ನಾವು ನೀವೆಲ್ಲರೂ ಅನುಸರಿಸಿ ಅಕ್ಷರದ ಕ್ರಾಂತಿಗೆ ಕೈಜೋಡಿಸಿ ಶಿಕ್ಷಣವಂತರಾಗೋಣ. ಶಿಕ್ಷಣದಿಂದ ಯಾವ ಹೆಣ್ಣು ಮಕ್ಕಳು ವಂಚಿತರಾಗಬಾರದೆಂಬುದೇ ಅವರ ಮಹದಾಸೆ ಆ ಮಹಾತಾಯಿಯ ಕನಸನ್ನು ಸಾಕಾರಗೊಳಿಸಲು ಕೈಜೋಡಿಸಿ ಶಿಕ್ಷಣ ಕ್ರಾಂತಿಯ ಜ್ಯೋತಿಯನ್ನು ಬೆಳಗೋಣ ಎಂದು ಹೇಳಿದರು. ಜಿಲ್ಲಾ ಕೋಶಾಧ್ಯಕ್ಷೆ ಶರಣಮ್ಮಾ ನಾರಾಯಣಪೇಟಕ್ಕರ್ ವಿಶೇಷ ಉಪನ್ಯಾಸ ನೀಡಿದರು. ರಮೇಶ ಸಲಗರ್ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಅಶೋಕಕುಮಾರ ಮಹಿಂದ್ರಕರ, ಪಂಡಿತ ಕಲ್ಯಾಣಿ, ಕಾಶಪ್ಪ ಅಮ್ಮಗೊಂಡ, ರಾಮಲು, ರಾಮಚಂದ್ರ ಟಿಲೇಕರ್, ಶ್ರೀಮತಿಬಾಯಿ ರೆಡ್ಡಿ, ಮಾರುತಿ ಜಟಗೊಂಡ, ರಮೇಶ ಖ್ಯಾತ, ಮಂಜುಳಾ, ಸುನೀತಾ, ವಸೀಮ್ ಸುಲ್ತಾನಾ, ಸಂಜೀವನ ಭೋಸ್ಲೆ, ಗುಂಡಪ್ಪ ಕೋರಿ, ಹಸನ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ನಾಗಪ್ಪ ಈರಬಾಯಿ ಪ್ರಾರ್ಥನೆ ಗೀತೆ ಹಾಡಿದರು. ಸಾವಿತ್ರಿ ಹುಡಗಿಕರ್ ಸ್ವಾಗತಿಸಿದರು.

ರಾಜೇಶ್ವರಿ ಹೂಗರ್ ನಿರೋಪಿಸಿದರು. ಸಂಗೀತಾ ಕುಲಕರ್ಣಿ ವಂದಿಸಿದರು. ಇದೇ ಸಂದರ್ಭದಲ್ಲಿ ದೀಪಿಕಾ, ಗೀತಾ ಪಡಗಿ, ತಸ್ಲೀಮ್ ಬೇಗಂ, ಸಂಘದಲ್ಲಿ ಸೇರ್ಪಡೆಯಾದರು. ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ಆಂತರಿಕ ಮಾನಸಿಕ ಶಕ್ತಿ ಹೆಚ್ಚಿಸಿಕೊಳ್ಳಲು ಅಧ್ಯಾತ್ಮ ಜ್ಞಾನ ತುಂಬಾ ಮುಖ್ಯ : ಬ್ರಹ್ಮಕುಮಾರಿ ಯೋಗಿನಿ ಅಕ್ಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಹೊಸ ವರ್ಷದಲ್ಲಿ ಸಕಾರಾತ್ಮಕವಾಗಿ ಪರಿವರ್ತನೆಯಾಗುವ ದೃಢಸಂಕಲ್ಪ ಮಾಡೋಣ ಎಂದು ಬ್ರಹ್ಮಕುಮಾರಿ ಯೋಗಿನಿ ಅಕ್ಕ ತಿಳಿಸಿದರು. ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿದ ಹೊಸ ವರ್ಷ ಆಚರಣೆ ಕಾರ್ಯಕ್ರಮವನ್ನು ಹೊಸ ವರ್ಷದ ಪಾಕೆಟ್ ಕ್ಯಾಲೆಂಡರ್ ಅನಾವರಣಗೊಳಿಸಿ ಮಾತನಾಡುತ್ತಾ ವರ್ಷ ಹೇಗೆ ಬದಲಾಗುತ್ತದೆಯೋ ಹಾಗೆ ನಾವು ಸಹ ನಮ್ಮ ಮನಸ್ಸಿನ ವಿಚಾರಗಳನ್ನು ನೆಗೆಟಿವ್ ನಿಂದ ಪಾಸಿಟಿವ್ ಗೆ ಬದಲಾವಣೆ ಮಾಡಿಕೊಳ್ಳಲೇಬೇಕು ಸಿಟ್ಟು, ಈರ್ಷೆ, ದ್ವೇಷ, ಅಸೂಯೆ, ಅಹಂಕಾರ ತುಂಬಿದ ವಿಚಾರಗಳು ಪರಿವರ್ತನೆಯಾಗಿ ಆತ್ಮಿಕ ಸ್ನೇಹ, ಪ್ರೀತಿ, ಶಾಂತಿ, ಸದ್ಭಾವನೆ ತುಂಬಿದ ವಿಚಾರಗಳು ನಮ್ಮಲ್ಲಿ ಬರಬೇಕು ಇನ್ನೊಬ್ಬರಿಂದ ಗೌರವ ಪ್ರೀತಿಯನ್ನು ನಿರೀಕ್ಷಿಸುವ ಬದಲು ಮೊದಲು ನಾನೇ ಅವರಿಗೆ ಗೌರವ ಪ್ರೀತಿಯನ್ನು ನೀಡುವ ದಾತನ ಗುಣವನ್ನು ಈ ಹೊಸ ವರ್ಷದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ನಾವೆಲ್ಲಾ ಹಳೆ ವರ್ಷಕ್ಕೆ ಹೇಗೆ ವಿದಾಯವನ್ನು ನೀಡುತ್ತಿದ್ದೇವೆಯೋ ಹಾಗೆಯೇ ಹಳೆ ವರ್ಷದ ದು-ಃಖದ ಮಾತು ಘಟನೆಗಳಿಗೂ ವಿದಾಯವನ್ನು ನೀಡಿ ಮನಸ್ಸು ಪ್ರಶ್ನೆ ಚಿತ್ತವಾಗುವ ಬದಲು ಪ್ರಸನ್ನ ಚಿತ್ತವಾಗಿರಲಿ ಎಂದರು ನಮ್ಮ ಮನಸ್ಸಿನ ಖುಷಿಯನ್ನು ಯಾವುದೇ ವ್ಯಕ್ತಿ ವಸ್ತುಗಳಿಗೆ ಅವಲಂಬನೆ ಮಾಡಿಕೊಳ್ಳಬಾರದು ನಮ್ಮ ಮನಸ್ಸಿನ ರಿಮೋಟ್ ಕಂಟ್ರೋಲ್ ನಮ್ಮ ಕೈಯಲ್ಲಿಯೇ ಇರಬೇಕು ಎಂದರು.

ಆಂತರಿಕ ಮಾನಸಿಕ ಶಕ್ತಿ ಹೆಚ್ಚಿಸಿಕೊಳ್ಳಲು ಪ್ರತಿನಿತ್ಯ ಅಧ್ಯಾತ್ಮ ಜ್ಞಾನ ಮತ್ತು ಮೆಡಿಟೇಶನ್ ಅತ್ಯವಶ್ಯಕ ಆದ್ದರಿಂದ ಜನವರಿ 5ನೇ ತಾರೀಖಿನಿಂದ ಒಂದು ವಾರ ಸಂಜೆ 5:30 ಗಾಗಿ ರಾ-ಜಯೋಗ ಶಿಬಿರ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ, ಸಾರ್ವಜನಿಕರು ಇದರ ಲಾಭವನ್ನು ಪಡೆದುಕೊಳ್ಳಬೇಕೆಂದು ಕರೆ ನೀಡಿದರು. ವೇದಿಕೆಯಲ್ಲಿ ಡಾ|| ಶಿಲ್ಪಾ ಬಾಚಲಾಪುರ್, ಹೇಮಾ, ಉಮೇಶ್ ಮುಂಡರಗಿ, ವೀರಯ್ಯ, ಮಹಾಬಲೇಶ್ವರ್, ಶರ್ಮ ಉಪಸ್ಥಿತರಿದ್ದರು. ಬಿಕೆ ಸ್ನೇಹ ಸ್ವಾಗತಿಸಿದರು ಸಾಮೂಹಿಕ ಧ್ಯಾನದೊಂದಿಗೆ ಕಾರ್ಯಕ್ರಮ ಶಾಂತಿಯಿಂದ ಸಂಪನ್ನಗೊಂಡಿತು.

## ತಾಂಡದಲ್ಲಿ ನೂತನ ತರಕಾರಿ ಮಾರುಕಟ್ಟೆ ಉದ್ಘಾಟಿಸಿದ : ಪಿ.ಎಸ್.ಐ. ರಾಜಶೇಖರ ರಾಠೋಡ



ಮಲ್ಲಮ್ಮ ನುಡಿ ವಾರ್ತೆ

ಮಾರನಾಳ ತಾಂಡ. ಜ.04: (ಮಾರನಾಳ ತಾಂಡಾ) ರಾಮರಾವ್ ನಗರ ಕ್ರಾಸ್ ಬಳಿ ತರಕಾರಿ ಮಾರುಕಟ್ಟೆ ಉದ್ಘಾಟನೆಯನ್ನು ನಾರಾಯಣಪುರ ಪಿಎಸ್ಐ ರಾಜಶೇಖರ್ ರಾಠೋಡ ನೆರವೇರಿಸಿದರು.

ಸುಸಜ್ಜಿತ ಮತ್ತು ಸುವ್ಯವಸ್ಥಿತ ಮಾರುಕಟ್ಟೆ (Market) ಇದಾಗಿದೆ. ಈ ಮಾರುಕಟ್ಟೆಯಿಂದ ದಶಕಗಳಿಂದ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವರಿಗೆ ಹಾಗೂ ಮಾರಾಟಗಾರರಿಗೆ ಬಹಳ ಅನುಕೂಲವಾಗಲಿದೆ.


ವ್ಯವಸ್ಥಿತವಾಗಿ ಮಾರುಕಟ್ಟೆ ಇಲ್ಲದೆ ರೈತರು ಮತ್ತು ಮಾರಾಟಗಾರರು, ತರಕಾರಿ, ಹಣ್ಣು, ಹೂವುಗಳನ್ನು ಮಾರಾಟ ಮಾಡುತ್ತಿದ್ದಾರೆ. ಹಾಗಾಗಿ ಇದಾನ ನಾವು ಸದುವಯೋಗ ಪಡೆದುಕೊಳ್ಳೋಣಾ ಎಂದು ತಿಳಿಸಿದರು.

(ಮಾರನಾಳ ತಾಂಡಾ) ರಾಮರಾವ್ ನಗರ ಕ್ರಾಸ್ ಬಳಿ ಸಿದ್ದವಾಗುತ್ತಿದೆ ತರಕಾರಿ ಮಾರುಕಟ್ಟೆ; ನಾರಾಯಣಪುರ ಮತ್ತು ಕೊಡೇಕಲ್ ನಡುವೆ, ನಾರಾಯಣಪುರ ಗ್ರಾಮದಿಂದ ಸುಮಾರು 7 ಕಿ.ಮೀ. ದೂರದಲ್ಲಿದೆ. ಹೊಸ ಮಾರುಕಟ್ಟೆಯು (ಮಾರನಾಳ ತಾಂಡಾ) ರಾಮರಾವ್ ನಗರ ಕ್ರಾಸ್ ಬಳಿ ನಿರ್ಮಿಸಲಾಗಿದೆ. ಇದರಿಂದ ಮಾರನಾಳ, ಯರಕಿಹಾಳ, ಮಾವಿನಗಿಡ್ ತಾಂಡಾ, ಜೋಕಾಂಡಭಾವಿ , ಗಡ್ಡದ ತಾಂಡಾ, ಬರದೇವನಾಳ, ರಾಯನಗೋಳ, ಜುಮಾಲಪುರ್ ದೊಡ್ಡ ತಾಂಡಾ, ಬೆಲ್ಲದಗಿಡ ತಾಂಡಾ, ಹಾಗೂ ಸುತ್ತಮುತ್ತಲಿನ ಗ್ರಾಮ ನಿವಾಸಿಗಳಿಗೆ ಅನುಕೂಲವಾಗಲಿದೆ.

ಮಾರುಕಟ್ಟೆಯಲ್ಲಿನ ಹೈಟೆಕ್ ಸೌಲಭ್ಯಗಳು ಇಲ್ಲದಿದ್ದರೂ ಸಹ ಹವಾಮಾನ ಪರಿಸ್ಥಿತಿಗಳಲ್ಲೂ ಯಾವುದೇ ತೊಂದರೆಯಿಲ್ಲದೆ. ತರಕಾರಿಗಳು, ಹಣ್ಣುಗಳು ಮತ್ತು ಹೂವುಗಳನ್ನು ಮಾರಾಟ ಮಾಡಬಹುದಾಗಿದೆ. ಗ್ರಾಮದ ಮಾರುಕಟ್ಟೆಯ ಸುತ್ತಲಿನ ಸಂಚಾರ ದಟ್ಟಣೆಯಿಂದ ಪ್ರಯಾಣಿಕರು ಮತ್ತು ಪಾದಚಾರಿಗಳು ಕಿರಿಕಿರಿ ಅನುಭವಿಸುತ್ತಾರೆ. ಸದ್ಯ ಮಾರನಾಳ ತಾಂಡದ ರಾಮರಾವ್ ನಗರ ಕ್ರಾಸ್ ಬಳಿ ನಿರ್ಮಿಸಲಾದ ಮಾರುಕಟ್ಟೆಯಲ್ಲಿ ತರಕಾರಿ ಮಾರಾಟ ಮಾಡುತ್ತಿರುವ 100ಕ್ಕೂ ಹೆಚ್ಚು ಮಾರಾಟಗಾರರು ಹೊಸ ಮಾರುಕಟ್ಟೆಗೆ ಬಂದಿದರು ಸಂತೋಷ ತರತಕ್ಕದು ಎಂದು ಮಾರಾಟಗಾರರು ಹರ್ಷ ವ್ಯಕ್ತಪಡಿಸಿದರು.

ಇದೆ ಸಂದರ್ಭದಲ್ಲಿ ನಾರಾಯಣಪುರ ಪಿ.ಎಸ್.ಐ. ರಾಜಶೇಖರ್ ರಾಠೋಡ್, ಬರದನಾಳ ಪಿ.ಡಿ.ಓ ಪ್ರೇಮಾ ರಾಠೋಡ್, ಚಂದು ಹರಾವತ, ಸೀತಾಬಾಯಿ ಪವಾರ, ಶೇಖರ್ ನಾಯಕ್, ಕೃಷ್ಣ ಜಾದವ . ಬಾಬು ಚವಾಣ್ . ಹರಿಕೃಷ್ಣ ಮೂಡ್ , ವಿನೋದ ಪವಾರ , ಜೈರಾಮ್ ರಾಠೋಡ, ತಿರುಪತಿ ಚವಾಣ್, ಹಾಗೂ ಗೋರ್ ಸೇನಾ ಗೋರ್ ಸಿಕವಾಡಿಯ ಹಲವಾರು ಪದಾಧಿಕಾರಿಗಳು. ಮತ್ತು ಗುರು ಹಿರಿಯರು ಉಪಸ್ಥಿತರಿದ್ದರು.

## ಮದಲಿಂಗನಾಳ ಸರಕಾರಿ ಶಾಲೆಗೆ ಎಸ್‌ಡಿಎಂಸಿ ಅಧ್ಯಕ್ಷರ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಕೊಡೇಕಲ್ ಮದಲಿಂಗನಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರು ವಾರ ಶಾಲಾ ಸುಧಾರಣೆ ಸಮಿತಿ ಪದಾಧಿ ಕಾರಿಗಳನ್ನು ಆಯ್ಕೆ ಮಾಡಲಾಯಿತು. ಚೆನ್ನಪ್ಪ ಬಸವರಾಜ್ ಹವಲ್ದಾರ್ ಡಿಎಂಸಿ ಅಧ್ಯಕ್ಷರಾಗಿ ಆಯ್ಕೆಯಾದರು. ಇದೇ ವೇಳೆ ಎಸ್‌ಡಿಎಂಸಿ ಮಾಜಿ ಅಧ್ಯಕ್ಷ ಬಸನಗೌಡ ನಾವದಗಿ ಮಾತನಾಡಿ, ಯಾವ ಸ್ಥಾನಮಾನಗಳು ಶಾಶ್ವತವಲ್ಲ. ಆದರೆ, ಒಂದು ಪ್ರಮುಖ ಸ್ಥಾನದಲ್ಲಿದ್ದಾಗ ಒಳ್ಳೆಯ ಕೆಲಸ ಮಾಡಿದರೆ ಮಾತ್ರ ಆ ಹುದ್ದೆಗೆ ಘನತೆ ಗೌರವ ಹೆಚ್ಚಲಿದೆ. ಎಂದರು. ಸಂಪನ್ಮೂಲ ಕುಮಾರ, ಈ ಸಂದರ್ಭದಲ್ಲಿ ವ್ಯಕ್ತಿಗಳಾದ ನವೀನ್ ಮುಖ್ಯಗುರು ಗ್ರಾಮದ ಮಲ್ಲಿಕಾರ್ಜುನ - ಕತ್ತಿ, ಪ್ರಮುಖರಾದ ಶರಣಪ್ಪ ಗುಡೇದ್ ಎಸ್, ಯಂಕನಗೌಡ ಪೊಲೀಸ್ ಪಾಟೀಲ್ ಸಾಹೇಬ್ ಗೌಡ ಪೊಲೀಸ್ ಪಾಟೀಲ್ ಸೋಮಲಿಂಗಪ್ಪ ಪೂಜಾರಿ, ಶರಣಪ್ಪ ರಕ್ಕಸಗಿ, ನಿಂಗಪ್ಪ ಬಿರಾದಾರ, ಶಿಕ್ಷಣ ಪ್ರೇಮಿಗಳಾದ ಚನ್ನಬಸಪ್ಪ ಹೊಸಮನಿ, ನಿಂಗಣ್ಣ ನಾಲ್ಡೋಡಿ, ಮಂಜು ಬಿಜೂರ, ಶಾಂತಗೌಡ ಪೊಲೀಸ್ ಪಾಟೀಲ್ ಸೇರಿ ಅನೇಕರಿದ್ದರು.

## ಇಂದು ಪಿಕೆಪಿಎಸ್ ಚುನಾವಣೆ, ಮತದಾನ ಮಾಡಲು:- ಚುನಾವಣಾಧಿಕಾರಿ ಕೆರೆಸಿದ್ದ ಮನವಿ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಇಲ್ಲಿಯ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕರ ಆಯ್ಕೆ ಚುನಾವಣೆಯ ಮತದಾನ ಇಂದು ನಡೆಯಲ್ಲಿದು. ಒಟ್ಟು 12 ನಿರ್ದೇಶಕರ ಆಯ್ಕೆಯ ಪೈಕಿ, ಪ್ರವರ್ಗ(ಎ) ಸ್ಥಾನದ ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇನ್ನು ಉಳಿದ 11 ನಿರ್ದೇಶಕರ ಆಯ್ಕೆ ನಿಮಿತ್ಯ ಒಟ್ಟು 21 ಜನ ನಾಮಪತ್ರ ಅರ್ಜಿ ಸಲ್ಲಿಸಿ ಚುನಾವಣೆ ಕಣದಲಿದ್ದಾರೆ ಎಂದು ಚುನಾವಣಾಧಿಕಾರಿ ಕೆರೆಸಿದ್ದ ಮೋರಟಗಿ ತಿಳಿಸಿದ್ದಾರೆ. ಸಾಮಾನ್ಯ ಕ್ಷೇತ್ರದಲ್ಲಿ(10) ಪರಿಶಿಷ್ಟ ಜಾತಿ(02) ಪರಿಶಿಷ್ಟ ಪಂಗಡ(02)(ಹಿಂದುಳಿದ ವರ್ಗ ಪ್ರವರ್ಗ(ಬಿ) (02) ಮಹಿಳಾ (03) ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರಕ್ಕೆ(02) ಒಟ್ಟು 21 ಜನ ನಾಮಪತ್ರ ಸಲ್ಲಿಸಿ ಚುನಾವಣೆ ಕಣದಲ್ಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



> ಇಂದು ಬೆಳಿಗ್ಗೆ 9 ಘಂಟೆಯಿಂದ ಸಾಯಂಕಾಲ 4 ಘಂಟೆ ವರೆಗೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಚುನಾವಣೆಯು ಮತದಾನವನ್ನು ಸರ್ಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ನಡೆಯಲಿದ್ದು, ಅರ್ಹ ಮತದಾರರು ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸಬೇಕು. ಜೊತೆಗೆ ಚುನಾವಣೆಗೆ ಸಹಕರಿಸಿ ಯಶಸ್ವಿಗೊಳಿಸಬೇಕು.
> **- ಕೆರೆಸಿದ್ದ ಮೋರಟಗಿ ಚುನಾವಣಾಧಿಕಾರಿ**

## ಸಮಗ್ರ ಶಿಕ್ಷಣ ಇಲಾಖೆ ಹಾಗೂ ಶಾಲಾ ಪೋಷಕರ ಸಭೆ



ಮಲ್ಲಮ್ಮ ನುಡಿ ವಾರ್ತೆ

ನಾಗಬೇನಾಳ ತಾಂಡ : ಶುಕ್ರವಾರದಂದು ಸಾಮಾಜಿಕ ಪರಿಶೋಧನೆ ನಿರ್ದೇಶನಾಲಯ ಬೆಂಗಳೂರು ಶಾಲಾ ಶಿಕ್ಷಣ ಇಲಾಖೆ ಮುದ್ದೇಬಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ನಾಗಬೇನಾಳ ತಾಂಡ ಇವರ ಸಹಯೋಗದಲ್ಲಿ ಸಮಗ್ರ ಶಿಕ್ಷಣ ಇಲಾಖೆಯ ಶಾಲಾ ಪೋಷಕರ ಸಭೆ ನಡೆಸಲಾಯಿತು.

ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕರಾದ ಚಿದಾನಂದ ಕೋಳ್ಹಾರಿ ಇವರು ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು ಕಾರ್ಯಕ್ರಮದಲ್ಲಿ ಪಾಲ್ಗೊಂಡ ಪಾಲಕರಿಗೆ ಸರಕಾರದ ಜೊತೆ ಕೈ ಸೇರಿಸಿ ಕೈಲಾದ ದಾನ ಮಾಡಿ ಅಭಿವೃದ್ಧಿ ಮಾಡುವುದು ಪಾಲಕರಿಂದ ಆದಾಗ ಮಾತ್ರ ಶಾಲಾ ಅಭಿವೃದ್ಧಿ ಕಾಣಲು ಸಾಧ್ಯ ಎಲ್ಲೋ ಮೂಲೆಯಲ್ಲಿರುವ ನಾಗಬೇನಾಳ ತಾಂಡಾ ಶಾಲೆ ಸಂಪನ್ಮೂಲ ಶಿಕ್ಷಕರ ಗುಣಮಟ್ಟದ ಕಲಿಕೆಯಿಂದ ಜಿಲ್ಲೆ ಮತ್ತು ರಾಜ್ಯ ಗುರುತಿಸುವಂತೆ ಮಾಡಿದೆ ಶಿಕ್ಷಕರ ಜೊತೆಗೂಡಿ ಉತ್ತಮ ಭವಿಷ್ಯ ರೂಪಿಸುವಲ್ಲಿ ಪಾಲಕರ ಪಾತ್ರ ಬಹುಮುಖ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಎಸ್ ಡಿ ಎಂ ಸಿ ಅಧ್ಯಕ್ಷ ಶಿವಾನಂದ ನಾಯಕ್ ಶಿಕ್ಷಣ ಪ್ರೇಮಿ ಮತ್ತು ಬಂಜಾರ ಸಮುದಾಯದ ಅಧ್ಯಕ್ಷರಾದ ಆನಂದ. ಟಿ. ನಾಯಕ್ ಗ್ರಾಮ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಶಂಕ್ರಮ್ಮ ಕುಂ-ಟೋಜಿ, ಹಿರಿಯರಾದ ಸೋಮಪ್ಪ ನಾಯಕ್, ಕೃಷ್ಣಪ್ಪ ರಾಥೋಡ್ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಟಿ. ಎಂ. ಕೋಲ್ಕಾರ್, ಮುಖ್ಯ ಗುರು ಮಾತೆ ಶ್ರೀಮತಿ ಎಸ್ ಎ ಗಂಗನಗೌಡರ್ ಉಪಸ್ಥಿತರಿದ್ದರು.

ಪವಿತ್ರ ಹಾಗೂ ಸಂಗಡಿಗರಿಂದ ಪ್ರಾರ್ಥನೆ ಮಾಡಲಾಯಿತು. ವೀರೇಶ್ ನವಲಿ ಶಿಕ್ಷಕರು ಸ್ವಾಗತಿಸಿದರು. ಶ್ರೀಮತಿ ಪ್ರಿಯಾ ಯರನಾಳ ಗುರುಮಾತೆಯರು ಪ್ರಾಸ್ತಾವಿಕ ನುಡಿ ಹೇಳಿದರು, ಅಕ್ಕಮಹಾದೇವಿ ಉಪನಾಳ ಗುರುಮಾತೆಯರು ವಂದಿಸಿದರು. ಪಾಲಕರ ಸಭೆಯಲ್ಲಿ ಸುಮಾರು 30 ಹೆಚ್ಚು ಪಾಲಕರು ಪಾಲ್ಗೊಂಡು ಶಿಕ್ಷಣ ಅಭಿವೃದ್ಧಿ ಬಗ್ಗೆ ಚರ್ಚಿಸಿದರು....

# ಉತ್ತಮ ಸರ್ಕಾರ ರಚನೆಗೆ ಪ್ರಧಾನಿ ವಾಜಪೇಯಿ ಹೆಸರುವಾಸಿ: ಶಿವಕುಮಾರ ಸ್ವಾಮಿ



ಮಲ್ಲಮ ನುಡಿ ವಾರ್ತೆ ಬೀದರ.ಜ. 04: ಉತ್ತಮ ಆಡಳಿತ ನೀಡುವಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಹೆಸರುವಾಸಿಯಾಗಿದ್ದಾರೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಹೇಳಿದರು.

ನಗರದ ಶರಣ ನಗರದಲ್ಲಿರುವ ಎಸ್ ವಿ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಸಪ್ತಗಿರಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಶನಿವಾರ ಭಾರತ ಸರ್ಕಾರದ ಯುವ ವ್ಯವಹಾರಗಳ ಹಾಗೂ ಕ್ರೀಡಾ ಸಚಿವಾಲಯದ ಇಲಾಖೆ ಆಗಿರುವ ನೆಹರು ಯುವ ಕೇಂದ್ರ ಬೀದರ್, ಮಂಗಲಾ ಮಹಿಳಾ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಾಗೂ ಸಪ್ತಗಿರಿ ಪದವಿ ಪೂರ್ವ ಮಹಾವಿದ್ಯಾಲಯಗಳ ಜಂಟಿ ಆಶ್ರಯದಲ್ಲಿ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನಾಚರಣೆ ಅಂಗವಾಗಿ ಜರುಗಿದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ, ಪ್ರಶಸ್ತಿ ಪತ್ರ ನೀಡಿ ಮಾತನಾಡಿದರು.

ಅಟಲ್ ಬಿಹಾರಿ ವಾಜಪೇಯಿ ಅವರು ಓರ್ವ ಪತ್ರಕರ್ತರಾಗಿಯೂ ಹಾಗೂ ಕವಿಗಳಾಗಿ ಮೊದಲು ಗುರುತಿಸಿಕೊಂಡವರು..ಜಯಪ್ರಕಾಶ ನಾರಾಯಣ ಹಾಗೂ ಶಾಮಾ ಪ್ರಸಾದ ಮುಖರ್ಜಿಯವರ ಮಾರ್ಗದರ್ಶನದಲ್ಲಿ ರಾಜಕೀಯ ರಂಗ ಪ್ರವೇಶಿಸಿದ ವಾಜಪೆಯ ಅವರು ಮೊದಲು ಜನ ಸಂಘದಲ್ಲಿ ಸಕ್ರಿಯ ರಾಜ-ಕಾರಣಿಯಾಗಿ, ನಂತರ ಭಾರತೀಯ ಜನತಾ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಗುರುತಿಸಿಕೊಂಡಿದ್ದರು. ಅವರು ಮೂರು ಸಲ ಈ ದೇಶದ ಪ್ರಧಾನಿಗಳಾಗಿ ಆಳುವ ಮೂಲಕ ಆಡಳಿತ ಕೌಶಲ್ಯವನ್ನು ಚುರುಕುಗೊಳಿಸಿದ್ದರು. 34 ಮಿತ್ರ ಪಕ್ಷಗಳೊಂದಿಗೆ ಕೂಡಿಕೊಂಡು ಸರ್ಕಾರವನ್ನು ಮುನ್ನಡೆಸಿಕೊಂಡು ಹೋಗಿರುವ ವಾಜಪೇಯಿ ಅವರು ಪೋಕ್ರಾನ್ ನಲ್ಲಿ ಅಣುಬಾಂಬ್ ಸ್ಫೋಟಿಸಿ ಭಾರತ ಒಂದು ಸುಭದ್ರ ಬಲಶಾಲಿ ಹಾಗೂ ಪರಮಾಣು ಹೊಂದಿದ ರಾಷ್ಟ್ರವೆಂಬುದನ್ನು ಸಾಬೀತುಪಡಿಸಿದರು. ವಾಜಪೇಯಿ ಅವರ ಈ ಒಂದು ದಿಟ್ಟತನಕ್ಕೆ ಜಗತ್ತಿನ ಅಭಿವೃದ್ಧಿಪರ ರಾಷ್ಟ್ರಗಳ ನಿದ್ದೆ ಗಳಿಸಿದರು. ಅವರ ಆಡಳಿತ ಕೌಶಲ್ಯ, ವಾಕ್ಚಾತುರ್ಯ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳು ಈ ದೇಶದ ಮನೆ ಮನಗಳಲ್ಲಿ ಇಂದಿಗೂ ಅಚ್ಚಳಿಯದೆ ಉಳಿದುಕೊಂಡಿವೆ ಎಂದರು. ಇಂದು ಪ್ರಧಾನಿ ನರೇಂದ್ರ ಮೋದಿಯವರು 10 ವರ್ಷಗಳು ಅಧಿಕಾರ ವಹಿಸಿ 11 ವರ್ಷಗಳನ್ನು ಪೂರೈಸುವ ಹಂತದಲ್ಲಿರುವ ಈ ಸಂದರ್ಭದಲ್ಲಿ ಉತ್ತರ ಭಾರತದ ನದಿಗಳನ್ನು ದಕ್ಷಿಣ ಭಾರತದ ನದಿಗಳೊಂದಿಗೆ ಜೋಡಿಸುವ ಮೂಲಕ ಈ ದೇಶವನ್ನು ಜಲಕ್ಷಾಮದಿಂದ ಮುಕ್ತ ಮಾಡಲು ಪಣ ತೊಟ್ಟಿದ್ದರು. ಗುಡ್ಡಗಾಡು ಪ್ರದೇಶಗಳಲ್ಲಿ ಸೌರ ವಿದ್ಯುತ್ ಸ್ಥಾಪಿಸುವ ಸಂಕಲ್ಪ, ಅನೇಕ ಹೊಸ ಹೊಸ ರೈಲ್ವೆ ಯೋಜನೆಗಳನ್ನು ವಿಸ್ತರಿಸುವ ಅವರ ದಿಟ್ಟತನ, ಅಭಿವೃದ್ಧಿಪರ ಬಜೆಟ್ ಮಂಡಿಸುವ ಕಾರ್ಯಕ್ರಮ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಂತಹ ಹೊಸ ಮಾದರಿಯ ಕಾರ್ಯಕ್ರಮಗಳನ್ನು ಈ ದೇಶಕ್ಕೆ ಪರಿಚಯಿಸುವ ಮೂಲಕ ಅಭಿವೃದ್ಧಿಯ ಹರಿಕಾರರಾಗಿ ಗುರುತಿಸಿಕೊಂಡಿದ್ದರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಗೋವಿಂದ ತಾಂಬಳೆ ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪ್ರೇರಣೆ ಬಹಳ ಮುಖ್ಯ. ಅವರ ಆದರ್ಶ ಬದುಕು, ಈ ದೇಶಕ್ಕೆ ಸಮರ್ಪಿಸಿದ ಅವರ ಸೇವೆ ಈ ದೇಶದ ಪ್ರತಿಯೊಬ್ಬ ವಿದ್ಯಾರ್ಥಿ ವಿದ್ಯಾರ್ಥಿಗಳು ಅನುಕರಿಸಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅತಿಥಿಗಳ ರೂಪದಲ್ಲಿ ಮಾತನಾಡಿರುವ ಮಂಗಲಾ ಮಹಿಳಾ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರು ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಕು.ಮಂಗಲಾ ಮರಕಲೆ ಮಾತನಾಡಿ, ಇಂದಿನ ಯುವತಿಯರಿಗೆ ಸಾವಿತ್ರಿಬಾಯಿ ಫುಲೆ, ಕಿತ್ತುರು ರಾಣಿ ಚೆನ್ನಮ್ಮ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಕಸ್ತೂರಿಬಾಯಿ ಹೇಮರೆಡ್ಡಿ ಮಲ್ಲಮ್ಮ ರಂತಹ ವೀರ ವನಿತೆಯರು ಈ ದೇಶಕ್ಕೆ ಸಮರ್ಪಿಸಿದವರ ತ್ಯಾಗಮಯ ಬದುಕು ನಮ್ಮೆಲ್ಲರಿಗೆ ಆದರ್ಶ ಪ್ರಾಯವಾಗಬೇಕು ಹಾಗೆ ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಉತ್ತೇಜನ ಕೊಡುವ ಕಾರ್ಯ ನಿರಂತರವಾಗಿ ನಡೆಯಬೇಕೆಂದು ಕರೆ ಕೊಟ್ಟರು ನೆಹರು ಯುವ ಕೇಂದ್ರದ ಯುವ ಪಡೆಯ ಕಾರ್ಯಕರ್ತ ಸೋಮನಾಥ ಪೂಜಾರಿ ವೇದಿಕೆಯಲ್ಲಿದ್ದರು.

ಈ ಸಂದರ್ಭದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ "ಗುಡ್ ಗವರನೆನ್ಸ್" ಎನ್ನುವ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿನಿಯರಾದ ಕು. ಮಂಜುಳಾ ರೇವಣಯ್ಯ, ಕು. ಗಾಯತ್ರಿ ಮಲ್ಲಪ್ಪ, ಕು.ಗ್ಲೋರಿ ತಂದೆ ರೋಷನ್ ಅವರಿಗೆ ಪ್ರಶಸ್ತಿ ಹಾಗೂ ಬಹುಮಾನ ವಿತರಿಸಲಾಯಿತು.

ಆರಂಭದಲ್ಲಿ ಕಾಲೇಜಿನ ಉಪನ್ಯಾಸಕ ಅನಿಲಕುಮಾರ ಜಾಧವ ಕಾರ್ಯಕ್ರಮ ನಿರೂಪಿಸಿ, ಕು.ಭಾಗ್ಯಶ್ರೀ ವಂದಿಸಿದರು.

# ಹೃದಯ ಆರೈಕೆಗೆ ಹೆಚ್ಚಿನ ಆದ್ಯತೆ ನೀಡಿ: ಡಾ.ಎಸ್.ಎಸ್ ಅಯ್ಯಂಗಾರ್



ಬಳ್ಳಾರಿ,ಜ.04: ಮನುಷ್ಯನ ಅವಯವಗಳಲ್ಲಿ ಹೃದಯದ ಪಾತ್ರ ಅತ್ಯಂತ ಪ್ರಮುಖವಾಗಿದೆ. ಹೃದಯದ ಆರೈಕೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಸದೃಢ ಆರೋಗ್ಯ ಹೊಂದಬೇಕು ಎಂದು ಹಿರಿಯ ಹೃದಯ ತಜ್ಞರು ಹಾಗೂ ನಿವೃತ್ತ ವಿಂಗ್ ಕಮಾಂಡರ್ ಡಾ.ಎಸ್.ಎಸ್ ಅಯ್ಯಂಗಾರ್ ಅವರು ತಿಳಿಸಿದರು.

ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಕಾರ್ಯಕ್ರಮಗಳಲ್ಲೊಂದಾದ ಡಾ.ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯ ಅಂಗವಾಗಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ವಿಭಾಗ ಮತ್ತು ಟ್ರೈಕಾಗ್ ಸಂಸ್ಥೆಯ ಸಹಕಾರದೊಂದಿಗೆ ಹೃದಯ ಕಾಯಿಲೆ ಆರಂಭದಲ್ಲಿಯೇ ಗುರ್ತಿಸಲು ಬಳ್ಳಾರಿ ಹಬ್ ಒಳಗೊಂಡಂತೆ ಸಿರುಗುಪ್ಪ, ಹಗರಿಬೊಮ್ಮನಹಳ್ಳಿ, ಕೂಡ್ಲಿಗಿ, ಹೊಸಪೇಟೆ, ಕುಷ್ಟಗಿ, ಯಲಬುರ್ಗಾ ಸಾರ್ವಜನಿಕ ಆಸ್ಪತ್ರೆಗಳ ತಜ್ಞವೈದ್ಯರು ಹಾಗೂ ಸಿಬ್ಬಂದಿಯವರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹೃದಯ ಸಂಬಂಧಿತ ಯಾವುದೇ ಸಮಸ್ಯೆಗಳನ್ನು ನಿರ್ಲಕ್ಷ ?? ಮಾಡದೇ ತಕ್ಷಣ ವೈದ್ಯಕೀಯ ಉಪಚಾರ ಪಡೆಯಬೇಕು. ಆರೋಗ್ಯವಂತ ಹೃದಯ ಕಾಪಾಡಿಕೊಂಡು ದೀರ್ಘಾಯುಷ್ಯ ಹೊಂದಲು ಜನತೆಗೆ ಕಾಳಜಿ ತೆಗೆದುಕೊಳ್ಳುವುದರ ಕುರಿತು ಜಾಗ್ರತೆ ನೀಡಬೇಕು ಎಂದರು.

ಹೃದಯ ಸಂಬಂಧಿತ ಕಾಯಿಲೆಗಳ ಲಕ್ಷಣಗಳಾಗಿರುವ ನಿದ್ರಾಭಂಗ, ತೀವ್ರ ಉಸಿರಾಟದ ತೊಂದರೆ, ಬೆನ್ನು ಅಥವಾ ದೇಹದ ಮೇಲ್ಭಾಗದಲ್ಲಿ ಅಸ್ವಸ್ಥತೆ ಎಡಗೈ ಸೇದುವುದು, ಕಾರಣವಿಲ್ಲದೆ ಬೆವರುವುದು, ವಾಕರಿಕೆ, ವಾಂತಿ ಮುಂತಾದವು ಕಂಡುಬಂದಲ್ಲಿ ಅಂತಹ ವ್ಯಕ್ತಿಗಳಿಗೆ ಆಸ್ಪತ್ರೆಗೆ ದಾಖಲಿಸುವ ಕುರಿತು ತಿಳಿ ಹೇಳಬೇಕು. ಬಳ್ಳಾರಿ ಹೃದಯಾಲಯ ಹಬ್ ಆಸ್ಪತ್ರೆಗೆ ತಕ್ಷಣವೇ ವೈದ್ಯಕೀಯ ಉಪಚಾರದೊಂದಿಗೆ ಕಳುಹಿಸುವ ಕಾರ್ಯ ಮಾಡಬೇಕು ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, ಹೃದಯಘಾತ ಹಾಗೂ ಹೃದಯ ಸಂಬಂಧಿ ಇತರೆ ಕಾಯಿಲೆಗಳನ್ನು ಗ್ರಾಮೀಣ ಭಾಗದಲ್ಲಿಯೇ ಗುರ್ತಿಸಿ ಚಿಕಿತ್ಸೆ ನೀಡುವ ಮೂಲಕ ವ್ಯಕ್ತಿಯನ್ನು ಉಳಿಸುವ ಮೂಲಕ ಕುಟುಂಬದ ಸಂತಸ ಸದಾ ಇರುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಡಾ.ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯಡಿ ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ಸಾರ್ವಜನಿಕ ಆಸ್ಪತ್ರೆ ಆಯ್ಕೆಯಾಗಿದ್ದು, ಮುಂದಿನ ಹಂತದಲ್ಲಿ ರಾಜ್ಯ ಸರ್ಕಾರವು ಇತರೆ ತಾಲ್ಲೂಕಗಳನ್ನು ಒಳಪಡಿಸುತ್ತಿದೆ ಎಂದು ತಿಳಿಸಿದರು.

# ಜ. 14 ರಂದು ಅರ್ಥಪೂರ್ಣವಾಗಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜ.04: ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅರ್ಥಪೂರ್ಣವಾಗಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಹೇಳಿದರು.

.ಶುಕ್ರವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜನವರಿ 14 ರಂದು ಮಧ್ಯಾಹ್ನ 12.30 ಗಂಟೆಗೆ ಡಾ.ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿಗಣ್ಯರನ್ನು ಆಹ್ವಾನಿಸಲು ವೇದಿಕೆ ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತದೆ ಎಂದರು.

ಕುಡಿಯುವ ನೀರಿನ ಸಭಾಂಗಣ ಸುತ್ತಮುತ್ತಲ್ಲಿನ ಸ್ವಚತೆ ಕುರಿತು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳಿಗ್ಗೆ 9 ಗಂಟೆಗೆ ಜಿಲ್ಲೆಯ ಎಲ್ಲ ಸರ್ಕಾರಿ ಅರೆ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಚೇರಿಗಳಲ್ಲಿ ಜಯಂತಿಯನ್ನು ಆಚರಿಸಬೇಕೆಂದರು. ಈ ಜಯಂತಿಯು ಜನವರಿ 14 ರಂದು ಆಚರಣೆಗೆ ಸಕಲ ಕ್ರಮಕೈಗೊಳ್ಳಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಸೂಚಿಸಿದರು.

ಅಂದು ನಡೆಯುವ ಕಾರ್ಯಕ್ರಮಕ್ಕೆ ಶಾಲಾ ಶಿಕ್ಷಣ ಇಲಾಖೆಯ ವಿದ್ಯಾರ್ಥಿಗಳನ್ನು ಕರೆ ತರಲು ಸೂಚಿಸಿದರು.

ಒಬ್ಬ ನುರಿತ ಉಪನ್ಯಾಸಕ ಒಬ್ಬ ಸಮಿತಿಯ ಅಧ್ಯಕ್ಷರನ್ನು ನೇಮಿಸಲು ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ವಿವಿಧ ಶಾಲೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು. ಸಿಬ್ಬಂದಿಗಳು ಆಯಾ ಸಮಾಜದ ಮುಖಂಡರು ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿಯನ್ನು ಯಶಸ್ವಿಗೊಳಿಸುವಂತೆ ಸಲಹೆ ಸೂಚನೆಗಳನ್ನ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ಜಿಲ್ಲಾ ಭೋವಿ (ವಡ್ಡರ) ಸಮಾಜದ ಜಿಲ್ಲಾಧ್ಯಕ್ಷ ಗುಂಡಪ್ಪ ಎಚ್ ಸಾಳಕೆ, ಪ್ರಧಾನ ಕಾರ್ಯದರ್ಶಿ ನಾಗೇಶ ಗೊಬ್ಬರು, ಖಜಾಂಚಿ ಮಲ್ಲಿಕಾರ್ಜುನ ಕುಸ್ತಿ, ಮಾಜಿ ಜಿಲ್ಲಾ ಅಧ್ಯಕ್ಷ ಸಿದ್ರಾಮ ದಂಡಗುಲಕಲ್, ಸಮಾಜ ಮುಖಂಡರಾದ ಲಿಂಗಣ್ಣ ದೇವಕಾಲ್ ಗುತ್ತೇದಾರ, ರಾಜು ಮೇಸ್ತ್ರಿ, ರಾಮಯ್ಯ ಉಪಸ್ಥಿತರಿದ್ದರು.

# ಉದ್ಯಮ ಆರಂಭಿಸಿ, ಉದ್ಯೋಗ ನೀಡಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಬಳ್ಳಾರಿ,ಜ.04: ಉದ್ಯೋಗ ಪಡೆದುಕೊಳ್ಳುವುದಷ್ಟೇ ಅಲ್ಲದೇ, ಉದ್ಯಮ ಸ್ಥಾಪನೆ ಮಾಡುವ ಮೂಲಕ ಉದ್ಯೋಗ ನೀಡುವಂತರಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾಡಳಿತ, ಕೌಶಲ್ಯಾಭಿವೃದ್ಧಿ-ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು, ಜಿಲ್ಲಾ ಕೌಶಲ್ಯ ಮಿಷನ್ ಇವರ ಸಂಯುಕ್ತಾಶ್ರಯದಲ್ಲಿ "ಕೌಶಲ್ಯ ಮತ್ತು ರೋಜ್‌ಗಾರ್ ಮೇಳ" ಅಡಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿ (ಸ್ವಾಯತ್ತ) ನಲ್ಲಿ ಶುಕ್ರವಾರ ಆಯೋಜಿಸಿದ್ದ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಸಮುದಾಯ ಕ್ರಿಯಾಶೀಲ ಮನೋಭಾವ, ಸ್ಪರ್ಧಾತ್ಮಕ ಮನಸ್ಸು ಹಾಗೂ ನಿರಂತರ ಪ್ರಯತ್ನದಿಂದ ಬದುಕು ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಬದುಕಿನಲ್ಲಿ ಉತ್ತಮ ಸಾಧಕರಾಗಲು ಕಠಿಣ ಪರಿಶ್ರಮ, ಸಂವಹನ ಕಲೆ, ಭಾಷೆಯ ಮೇಲೆ ಉತ್ತಮ ಹಿಡಿತ ಮತ್ತು ಸಾಧಿಸುವ ಗುಣಗಳನ್ನು ಮೈಗೂಡಿಸಿಕೊಳ್ಳುವುದು ಅವಶ್ಯಕವೆಂದು ತಿಳಿಸಿದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಾಣೇಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಿರುದ್ಯೋಗಿ ಯುವಕ ಯುವತಿಯರಿಗೆ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡಿ ಉದ್ಯೋಗ ಮೇಳಗಳನ್ನು ಆಯೋಜಿಸುವ ಮೂಲಕ ಉದ್ಯೋಗ ಪಡೆಯಲು ಅವಕಾಶ ಕಲ್ಪಿಸಿಕೊಡುವುದು ಇಲಾಖೆಯ ಉದ್ದೇಶವಾಗಿದ್ದು, ಉದ್ಯೋಗ ಮೇಳದಲ್ಲಿ ಭಾಗವಹಿಸಿದ ಎಲ್ಲಾ ಯುವಕ ಯುವತಿಯರು ಸದುಪಯೋಗಪಡಿಸಿಕೊಳ್ಳಲು ತಿಳಿಸಿದರು.

ಈ ವೇಳೆ ಸಸಅ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಮೋನಿಕಾ ರಂಜನ್, ಉದ್ಯೋಗಾಧಿಕಾರಿ ಹಟ್ಟಪ್ಪ, ಸಹಾಯಕ ನಿರ್ದೇಶಕ ವಿಶ್ವನಾಥ್, ಸಹಾಯಕ ಸಾಂಖ್ಯಿಕ ಅಧಿಕಾರಿಗಳಾದ ಚಂದ್ರಮ್ಮ, ಜಿಲ್ಲಾ ಅಭಿಯಾನ ವ್ಯವಸ್ಥಾಪಕ ಪ್ರಾಣೇಶ್, ದೇವರಾಜ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಉದ್ಯೋಗ ಮೇಳದಲ್ಲಿ ಒಟ್ಟು 41 ಉದ್ಯೋಗದಾತರು ಭಾಗವಹಿಸಿದ್ದರು. ನೋಂದಣಿಯಾದ ಸುಮಾರು 2634 ಅಭ್ಯರ್ಥಿಗಳಲ್ಲಿ 1695 ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಹಾಜರಾಗಿದ್ದರು. ಈ ಪೈಕಿ, 343 ಅಭ್ಯರ್ಥಿಗಳು ಆಯ್ಕೆಗೊಂಡಿ-ದ್ದು, 781 ಅಭ್ಯರ್ಥಿಗಳನ್ನು ಕಾಯ್ದಿರಿಸಲಾಗಿದೆ.

# ವಿದ್ಯಾರ್ಥಿಗಳು ಪರಿಸರದ ಮಹತ್ವ ಅರಿಯಬೇಕು: ಮಾಯಾಚಾರಿ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ.4: ಪ್ರತಿಯೊಬ್ಬ ವಿದ್ಯಾರ್ಥಿ ಪರಿಸರದ ಮಹತ್ವ ಅರಿತು ಅದನ್ನು ರಕ್ಷಿಸುವ ಜವಾಬ್ದಾರಿ ಬೆಳೆಸಿಕೊಳ್ಳಬೇಕು ಎಂದು ಶಿರೂರ ಪ್ರಾಥಮಿಕ ಆರೋಗ್ಯಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್. ಮಾಯಾಚಾರಿ ಹೇಳಿದ್ದಾರೆ.

ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಶಿರೂರ ಪ್ರಾಥಮಿಕ ಆರೋಗ್ಯಕೇಂದ್ರದ ಸಹಯೋಗದಲ್ಲಿ ತಾಲೂಕಿನ ನೀಲಾನಗರ ಹಾಗೂ ಮಲ್ಲಾಪೂರ ಎಚ್.ಪಿಎಸ್, ಶಿರೂರಿನ ಮುರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಗತ್ತಿನ ಎಲ್ಲ ಜೀವಿಗಳ ಉತ್ತಮ ಆರೋಗ್ಯಕ್ಕೆ ಪರಿಸರ ಪ್ರಾಮುಖ್ಯವಾಗಿದೆ. ಇದನ್ನು ನಾವುಗಳು ತಿಳಿದುಕೊಂಡು ಪರಿಸರ ಕೆಡದಂತೆ ರಕ್ಷಿಸಿಕೊಳ್ಳಬೇಕಿದೆ. ಪರಿಸರಸ್ನೇಹಿ ಸಂಪನ್ಮೂಲಗಳನ್ನು ಬಳಸಬೇಕಿದೆ. ನೀರು ಪೋಲಾಗುವುದನ್ನು ತಡೆಯಬೇಕಿದೆ. ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಿ, ತ್ಯಾಜ್ಯವನ್ನು ಸೂಕ್ತವಾಗಿ ನಿರ್ವಹಣೆ ಮಾಡಿ ಸ್ವಚ್ಛ ಹಾಗೂ ಸ್ವಸ್ಥ ಗ್ರಾಮ, ನಗರಗಳನ್ನು ರೂಪಿಸಬೇಕಾಗಿದೆ ಎಂದು ಮಾಯಾಚಾರಿ ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆ ಕುರಿತಾಗಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಎಸ್. ಎಸ್.ಮೇಣಸಗಿ, ಮುಖ್ಯಗುರು ಎಸ್.ಟಿ.ಕರಲಿಂಗನ್ನವರ, ಶಿಕ್ಷಕರಾದ ವಿ.ಜಿ.ಗೊಬ್ಬರಕರ, ವಿರೇಶ. ರುದ್ರಸ್ವಾಮಿ, ಎಸ್. ಆರ್.ಚೌಕಿಮಠ, ಎಮ್.ಎಮ್. ಕುರಿ, ಎಸ್.ಎಸ್. ಹಡಪದ, ಕೆ.ಡಬ್ಲ್ಯೂ.ಲಮಾಣಿ, ವಿಜಯಲಕ್ಷ್ಮಿ. ಬಿರಾದಾರ ಪಾಲ್ಗೊಂಡಿದ್ದರು.

# ಜ.6 ಅಂತಿಮ ಮತದಾರರ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜ.4-ಜಿಲ್ಲೆಯಲ್ಲಿ ಕೈಗೊಂಡ ಮತದಾರರ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2025ಕ್ಕೆ ಸಂಬಂಧಿಸಿದಂತೆ ಜನವರಿ 6 ರಂದು ಜಿಲ್ಲೆಯಾದ್ಯಂತ ಅಂತಿಮ ಮತದಾರರ ಪಟ್ಟಿಗಳನ್ನು ಸಂಬಂಧಪಟ್ಟ ಸ್ಥಳಗಳಲ್ಲಿ ಪ್ರಚುರಪಡಿಸಲಾಗುತ್ತಿದೆ. ಮತದಾರರು ತಮ್ಮ ಹೆಸರುಗಳು ಮತದಾರರ ಪಟ್ಟಿಗಳಲ್ಲಿ ಇರುವ ಬಗ್ಗೆ ಪರಿಶೀಲಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 1734 ಮತಗಟ್ಟೆಗಳಿದ್ದು, ಅಂತಿಮ ಮತದಾರರ ಪಟ್ಟಿಯನ್ವಯ ಜಿಲ್ಲೆಯಲ್ಲಿ ಒಟ್ಟು 16,35,518 ಮತದಾರರು ಇದ್ದು, ಇದರಲ್ಲಿ 8,06,564 ಪುರುಷ ಮತದಾರರು, 8,28,857 ಮಹಿಳಾ ಮತದಾರರು ಹಾಗೂ 97 ತೃತೀಯ ಲಿಂಗ ಮತದಾರರು ಇದ್ದಾರೆ. ಲಿಂಗಾನುಪಾತವಾರು ಪ್ರತಿ 1000 ಪುರುಷ ಮತದಾರರಿಗೆ 1028 ಮಹಿಳಾ ಮತದಾರರು ಇದ್ದಾರೆ. ಜನಸಂಖ್ಯಾವಾರು ಮತದಾರರ ಪ್ರಮಾಣ 100 ಜನರಿಗೆ 70.85 ಮತದಾರರು ಇದ್ದಾರೆ. ಕಳೆದ ವರ್ಷ ಅಂತಿಮ ಮತದಾರರ ಪಟ್ಟಿಗೆ ಹೋಲಿಸಿದರೆ ಈ ವರ್ಷ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2025ರ ಸಂದರ್ಭದಲ್ಲಿ ಹೊಸದಾಗಿ 44,310 ಮತದಾರರು ಮತದಾರರ ಪಟ್ಟಿಗಳಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

## ಇಂದು ಡಾ. ರಾಜಕುಮಾರ ಹೆಬ್ಬಾಳೆ ಅಭಿನಂದನ ಸಮಾರಂಭ



ಕ.ಸಾ.ಸಂಘದ ಟ್ರಸ್ಟ್ ಅಧ್ಯಕ್ಷ ಶಂಕ್ರೆಪ್ಪಾ ಹೊನ್ನಾ,ಕ.ಸಾ.ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ವಹಿಸಲಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ.03:–ರಾಷ್ಟ್ರೀಯ ಜನಪದಬುಡಕಟ್ಟುಕಲಾಪರಿಷತ್ತಿನ ಪ್ರಧಾನ ಕಾರ್ಯದರ್ಶಿಯಾಗಿ ಡಾ. ರಾಜಕುಮಾರ ಹೆಬ್ಬಾಳೆ ಆಯ್ಕೆಗೊಂಡ ಪ್ರಯುಕ್ತ ಇದೇ ತಿಂಗಳ 5ರಂದು ಭಾನುವಾರ ಬೆ. 11 ಗಂಟೆಗೆ ನಗರದ ಕರ್ನಾಟಕ ಸಾಹಿತ್ಯ ಸಂಘದ ಸಾಂಸ್ಕೃತಿಕ ಭವನದಲ್ಲಿ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಅಭಿನಂದನಾ ಸಮಿತಿಯ ಅಧ್ಯಕ್ಷ ಪ್ರೊ. ಎಸ್.ಬಿ.ಬಿರಾದಾರ ಹಾಗೂ ಪ್ರಧಾನಕಾರ್ಯದರ್ಶಿ ಡಾ.ಸುನಿತಾ ಕೂಡ್ಲಿಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು ಸಮಾರಂಭವನ್ನು ಲೋಕಸಭಾ ಸದಸ್ಯ ಸಾಗರ ಖಂಡ್ರೆ ಉದ್ಘಾಟಿಸಲಿದ್ದಾರೆ. ದಿವ್ಯ ಸಾನಿಧ್ಯವನ್ನು ಪೂಜ್ಯ ಶ್ರೀ ಡಾ. ಬಸವಲಿಂಗ ಪಟ್ಟದ್ದೇವರು ವಹಿಸಲಿದ್ದು,ಮುಖ್ಯ ಅತಿಥಿಗಳಾಗಿ ಬೀದರ ವಿ.ವಿ. ಕುಲಪತಿ ಪ್ರೊ. ಬಿ.ಎಸ್.ಬಿರಾದಾರ, ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಕಜಾಪ ಔರಾದ ತಾಲೂಕಾಧ್ಯಕ್ಷ ಡಾ. ಸಂಜೀವಕುಮಾರ ಜುಮ್ಮಾ, ಹಿರಿಯ ಸಾಹಿತಿ ಪ್ರೊ. ಎಸ್.ಎಸ್. ಯಾಳವಾರ ಆಗಮಿಸಲಿದ್ದಾರೆ. ಗೌರವ ಉಪಸ್ಥಿತಿಯನ್ನು

ಭಾನುವಾರ ಬೆಳಿಗ್ಗೆ 9 ಗಂಟೆಗೆ ನಗರದ ಬಸವೇಶ್ವರ ವೃತ್ತದಿಂದ ಕರ್ನಾಟಕ ಸಾಹಿತ್ಯ ಸಂಘದವರೆಗೆ ಡಾ.ರಾಜಕುಮಾರ ಹೆಬ್ಬಾಳೆ ಅವರ ಮೆರವಣಿಗೆ ಅಲಂಕೃತ ಸಾರೋಟಿನಲ್ಲಿ ಜರುಗಲಿದೆ. ಜಿಲ್ಲೆಯ ಹತ್ತಾರು ಜನಪದ ತಂಡಗಳು ಭಾಗವಹಿಸಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮೆರವಣಿಗೆಯನ್ನು ಮೆರವಣಿಗೆಗೆ ಸರ್ಕಾರಿ ನೌಕರರ ಸಂಘದ ನೂತನ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಚಾಲನೆ ನೀಡುವರು. ಇದೇ ವೇಳೆ ಪ್ರಮುಖರಾದ ಶಕುಂತಲಾ ಬೆಲ್ದಾಳೆ, ಪ್ರಶಾಂತ ದೊಡ್ಡಿ, ಡಾ. ರಜನೀಶ ವಾಲಿ, ಡಾ. ಗುರಮ್ಮಾ ಸಿದ್ದಾರೆಡ್ಡಿ, ದಿಲೀಪ ಡೊಂಗರಗೆ, ಕೆ. ಸತ್ಯಮೂರ್ತಿ ಭಾಗವಹಿಸಲಿದ್ದಾರೆ.

## ತಾಳಿಕೋಟಿ: ಅಯ್ಯಪ್ಪ ಸ್ವಾಮಿ ಮಹಾಪೂಜಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದಲ್ಲಿ ಶಬರಿಮಲೆ ಶ್ರೀ ಅಯ್ಯಪ್ಪಸ್ವಾಮಿ ಭಕ್ತಾದಿಗಳಿಂದ ಮಹಾಪೂಜೆ ಅಂಗವಾಗಿ ಶನಿವಾರ ವಿಶೇಷ ಪೂಜಾವಿಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಮಹಾಪೂಜೆ ಅಂಗವಾಗಿ ಮುಂಜಾನೆ 9 ಗಂಟೆಯಿಂದ ಗಂಗ ಸ್ಥಳದ ವಿಶೇಷ ಪೂಜಾ ಮೆರವಣಿಗೆ ಪಟ್ಟಣದ ಭೀಮನ ಬಾವಿಯಿಂದ ಆರಂಭಗೊಂಡು ಪ್ರಮುಖ ಬೀದಿಗಳಲ್ಲಿ ವಿವಿಧ ವಾದ್ಯ ಮೇಳ ಕೇರಳ ಚಂಡ ಹಾಗೂ ಕರಡಿ ಮಜಲುಗಳೊಂದಿಗೆ ಜರುಗಿತು ಮೆರವಣಿಗೆಯಲ್ಲಿ ನೂರಾರು ಮಾಲಾಧಾರಿ ಅಯ್ಯಪ್ಪ ಸ್ವಾಮಿ ಭಕ್ತರು ಜಯಘೋಷಗಳನ್ನು ಮೊಳಗಿಸಿ ಭಕ್ತಿ ಭಾವ ಮೆರೆದರು.

ಮಧ್ಯಾಹ್ನ 12 ಗಂಟೆಗೆ ಭಕ್ತಾದಿಗಳಿಗೆ ಮಹಾಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು. ನೂರಾರು ಭಕ್ತರು ಪ್ರಸಾದ ಸೇವಿಸಿ ಪುನೀತರಾದರು. ರಾತ್ರಿ 7 ಗಂಟೆಯಿಂದ ಜ್ಯೋತಿ ತರುವ ಕಾರ್ಯಕ್ರಮ ನಡೆಯಿತು. ಶ್ರೀ ನಗರೇಶ್ವರ ದೇವಸ್ಥಾನದಿಂದ ಮಹಾ ಸನ್ನಿಧಿಯವರಿಗೆ ಮೆರವಣಿಗೆ ಸಕಲವಾದ್ಯ ಮೇಳಗಳೊಂದಿಗೆ ನಡೆಯಿತು. ನಂತರ ಅಯ್ಯಪ್ಪಸ್ವಾಮಿ ಸನ್ನಿಧಿಯಲ್ಲಿ ನಿರ್ಮಾಣಗೊಂಡ ವೇದಿಕೆಯಲ್ಲಿ,ಗುಂಡಕನಾಳದ ಪರಮಪೂಜ್ಯ ಗುರುಲಿಂಗ ಶಿವಾಚಾರ್ಯರ ಸಾನಿಧ್ಯ ಹಾಗೂ ಗುರುಸ್ವಾಮಿಗಳ ನೇತೃತ್ವದಲ್ಲಿ ಮಾಹಾಪೂಜೆಯ ವಿಶೇಷ ಕಾರ್ಯಕ್ರಮಗಳು ಜರುಗಿದವು. ಕಾರ್ಯಕ್ರಮದಲ್ಲಿ ತಾಳಿಕೋಟಿ ತಾಲೂಕಿನ ಸುಮಾರು 300 ಮಾಲಧಾರಿ ಅಯ್ಯಪ್ಪ ಸ್ವಾಮಿಗಳು ಹಾಗೂ ಅಪಾರ ಭಕ್ತಾದಿಗಳು ಉಪಸ್ಥಿತರಿದ್ದರು.

## ಹೆತ್ತವರ ಹೆಸರಿನಲ್ಲಿ ಸತ್ಕಾರ್ಯ ಮಾಡುವುದು ಸಮಾಜಕ್ಕೆ ಮಾದರಿ– ಮರುಳಾರಾಧ್ಯ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕವಿತಾ ಮೀಡಿಯಾ ಸೋರ್ಸ್ ಪ್ರೈ.ಲಿ,ಮಹಿಳಾ ಧ್ವನಿ ಸಂಸ್ಥೆ ಕೊಪ್ಪಳ, ಯುವ ಧ್ವನಿ ಸಂಸ್ಥೆ ಮೋರನಹಳ್ಳಿ ಹಾಗೂ ಎಂ.ಎಂ.ಜೋಶಿ ಆಸ್ಪತ್ರೆ ಕೊಪ್ಪಳ ಇವರುಗಳ ಸಹಯೋಗದೊಂದಿಗೆ ಅಳವಂಡಿಯ ಶ್ರೀ ಸಿದ್ದೇಶ್ವರ ಸಮುದಾಯ ಭವನದಲ್ಲಿ ಗ್ರಾಮೀಣ ಜನರಿಗೆ ಉಚಿತ ನೇತ್ರ ತಪಾಸಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಷ.ಬ್ರ.108. ಶ್ರೀ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಚಾಲನೆ ನೀಡಿ ಮಾತನಾಡಿದರು. ಗ್ರಾಮೀಣ ಜನರಿಗೆ ಆರೋಗ್ಯದ ಸಲಹೆ ನೀಡುವುದರ ಜೊತೆಗೆ ಉಚಿತ ಶಿಬಿರದ ಮೂಲಕ ಚಿಕಿತ್ಸೆ ಒದಗಿಸುವುದು ಶ್ಲಾಘನೀಯ ಕಾರ್ಯ. ಹೆತ್ತವರ ಹೆಸರಿನಲ್ಲಿ ಸತ್ಕಾರ್ಯ ಮಾಡುವುದು ಸಮಾಜಕ್ಕೆ ಮಾದರಿ ಕೆಲಸ.ಮಹಿಳಾ ಧ್ವನಿ ಸಂಸ್ಥೆಯು ಗ್ರಾಮೀಣ ಜನರ ಅಭಿವೃದ್ಧಿಗಾಗಿ ಅನೇಕ ಕಾರ್ಯಕ್ರಮದ ಮೂಲಕ ಜನ ಸಾಮಾನ್ಯರ ಪ್ರೀತಿಗೆ ಪಾತ್ರವಾಗಿದೆ.ಉಚಿತ ನೇತ್ರ ತಪಾಸಣೆಯ ಮೂಲಕ ಕಣ್ಣಿನ ಆರೈಕೆಯ ಬಗ್ಗೆ ಆರೋಗ್ಯ ಸಲಹೆ ಒದಗಿಸಿದ್ದು ಶ್ಲಾಘನೀಯ ಎಂದರು.

ಬಿ.ಎನ್.ಹೊರಪೇಟಿ ಮಾತನಾಡಿ ದುಶ್ಚಟಗಳಿಗೆ ದುಂದುವೆಚ್ಚ ಮಾಡುವುದಕ್ಕಿಂತ ಸಾಮಾಜಿಕ ಕಾರ್ಯಗಳನ್ನು ಮಾಡುವುದರಿಂದ ಆತ್ಮತೃಪ್ತಿ ಮತ್ತು ನೆಮ್ಮದಿ ದೊರಕುತ್ತದೆ.ನಮ್ಮ ತಂದೆತಾಯಿಗಳ ಸ್ಮರಣಾರ್ಥವಾಗಿ ನೇತ್ರತಪಾಸಣೆ ಶಿಬಿರ ಆಯೋಜಿಸಿದ್ದು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಿ ಎಂದರು.

ಇದೇ ವೇಳೆ ದಿ.ಶಂಕ್ರಮ್ಮ ಹಾಗೂ ನಿಂಗಪ್ಪ ಹೊರಪೇಟೆಯವರ ಸ್ಮರಣಾರ್ಥವಾಗಿ ನೇತ್ರದಾನ ಜಾಗೃತಿ ಆಂದೋಲನ ಕಾರ್ಯಕ್ರಮ ಮಾಡಲಾಯಿತು. ಕಾರ್ಯಕ್ರಮದಲ್ಲಿ ಎಂ.ಎಂ.ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಕೊಪ್ಪಳ ಸಿಬ್ಬಂದಿಯ ವತಿಯಿಂದ ಸುಮಾರು 120 ಕ್ಕೂ ಹೆಚ್ಚು ಹಿರಿಯ ನಾಗರಿಕರ ನೇತ್ರತಪಾಸಣೆ ಮಾಡಿ ಆರೋಗ್ಯ ಮಾಹಿತಿ ನೀಡಿ ಹೆಚ್ಚಿನ ಚಿಕಿತ್ಸೆಗೆ ಸಲಹೆ ಒದಗಿಸಲಾಯಿತು.

ಕಾರ್ಯಕ್ರಮದಲ್ಲಿ ವಿಕಚೇತನರು ಹಾಗೂ ಹಿರಿಯ ನಾಗರಿಕ ಸಲಬಲಿಕರಣ ಇಲಾಖೆಯ ಜಿಲ್ಲಾ ಕಲ್ಯಾಣಾಧಿಕಾರಿಗಳಾದ ವೆಂಕಟೇಶ ದೇಶಪಾಂಡೆ,ಮಹಿಳಾ ಧ್ವನಿ ಸಂಸ್ಥೆ ಸಂಸ್ಥಾಪಕಿ ಪ್ರಿಯದರ್ಶಿನಿ ಮುಂಡರಗಿಮಠ,ಗ್ರಾಂ.ಪಂ.ಅಧ್ಯಕ್ಷರಾದ ಶಂಕ್ರಮ್ಮ ಜೋಗಿನ್,ಅನ್ವರ ಹುಸೇನ್ ಗಡಾದ,ರೇಣುಕಪ್ಪ ಹಳ್ಳಿಕೇರಿ,ಜಯಶ್ರೀ,ಜಗದೀಶ್ವರಿ,ಬಸಯ್ಯ,ಸಿದಿಂಗಯ್ಯ,ಗೀತಾ,ನಜೀರಭಾಷಾ ಮತ್ತಿರರು ಉಪಸ್ಥಿತಿ ಇದ್ದರು.

## ಸಾವಿತ್ರಿಬಾಯಿ ಪುಲೆ ಜನ್ಮದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಇಂಡಿ : ತಾಲ್ಲೂಕಿನ ಬಬಲಾದ ಗ್ರಾಮದ ಕಲಿಕಾ ಕೇಂದ್ರ ವತಿಯಿಂದ ದೇಶದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಪುಲೆ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ 194ನೇ ಜನ್ಮದಿನಾಚರಣೆ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಒಡಲ ದನಿ ಮಹಿಳಾ ಒಕ್ಕೂಟದ ಸದಸ್ಯ ಡಾ, ಭುವನೇಶ್ವರಿ ಕಾಂಬಳೆ ಅವರು ಮಾತನಾಡಿದ ಅವರು, ದೇಶದಲ್ಲಿ ಅಂದಿನ ದಿನಗಳಲ್ಲಿ ಮಹಿಳೆಯರಿಗಾಗಿ ಶಾಲೆಯನ್ನು ಪ್ರಾರಂಭಿಸುವ ಮೂಲಕ ಮಹಿಳೆಯರಲ್ಲಿ ಸಾಕ್ಷರತೆಯನ್ನು ಮೂಡಿಸುವಲ್ಲಿ ಸಾವಿತ್ರಿಬಾಯಿ ಪುಲೆ ರವರು ಪ್ರಮುಖ ಪಾತ್ರವನ್ನು ವಹಿಸಿ ಅಕ್ಷರದ ಅವ್ವ ಎಂದು ಹೆಸರನ್ನು ಪಡೆದಿದ್ದಾರೆ ಎಂದು ತಿಳಿಸಿದರು.

ಸಮಾನತೆ ಪಡೆಯಬೇಕಾದರೆ ಶಿಕ್ಷಣ ಮುಖ್ಯ ಎಂದು ಸಾವಿತ್ರಿಬಾಯಿ ಪುಲೆ ಜೀವನದ ಗುರಿಯಾಗಿ ಒಪ್ಪಿಕೊಂಡು ಸಮಾಜದ ಪ್ರತಿರೋಧದ ನಡುವೆ ಅಂದಿನ ಕಟ್ಟಳೆಗಳನ್ನು ಮೀರಿ ಹೆಣ್ಣು ಮಕ್ಕಳಿಗೆ ಶಾಲೆಯ ತೆರೆದು ತಮ್ಮ ಜೀವನವೇ ಮುಡುಪಾಗಿಟ್ಟು ಶಿಕ್ಷಣದ ಅರಿವು ಮೂಡಿಸಿದ ದಿಟ್ಟ ಮಹಿಳೆ ಸಾವಿತ್ರಿಬಾಯಿ ಪುಲೆ ಅವರು ವಿಚಾರಗಳು ಇಂದಿಗೂ ಪ್ರಸ್ತುತವಾಗಿ ಎಂದರು.

ಸಾವಿತ್ರಿಬಾಯಿ ಪುಲೆ ಕಲಿಕಾ ಕೇಂದ್ರದ ಶಿಕ್ಷಕಿ ಲಕ್ಷ್ಮಿ ದ್ರಾವಿಡ್ ಮಾತನಾಡಿ ಹೆಣ್ಣೊಂದು ಕಲಿತರೆ ಶಾಲೆ ಎಂದು ತೆರೆದಂತೆ ಎಂಬ ಮಾತಿಗೆ ಅನ್ವರ್ಥದಂತೆ ಸಾವಿತ್ರಿಬಾಯಿ ಪುಲೆ ಬದುಕಿ ತೋರಿಸಿದ್ದರು, ಅವರ ಜೀವನ ಇಂದಿಗೂ ಶಿಕ್ಷಕರಿಗೆ ಆದರ್ಶವಾಗಲಿದೆ. ಸಮುದಾಯದ ಎಲ್ಲಾ ಮಹಿಳಾ ವರ್ಗದ ಜನರಿಗೆ ಶಿಕ್ಷಣ ನೀಡಿದ ಮಹಾತಾಯಿ ಎಂದರು.

ಈ ಸಂದರ್ಭದಲ್ಲಿ ರಮಾಬಾಯಿ ಸ್ವ–ಸಹಾಯ ಸಂಘದ ಭೈಜಾಬಾಯಿ ಹರಿಜನ, ಹಿರಿಯರಾದ ಕಲ್ಲಪ್ಪ ಹರಿಜನ, ಸಿದ್ದರಾಮ ಕಾಂಬಳೆ ಸೇರಿದಂತೆ ಇನ್ನಿತರು ಇದ್ದರು.

## ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವಕ್ಕೆ ಅಗತ್ಯ ಮೂಲಸೌಕರ್ಯ ಒದಗಿಸಿ– ಸಚಿವ ಶಿವರಾಜ್ ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ದಕ್ಷಿಣ ಭಾರತದ ಕುಂಭ ಮೇಳ ಎಂದೇ ಪ್ರಸಿದ್ಧವಾದ ಶ್ರೀಗವಿಸಿದ್ದೇಶ್ವರ ಜಾತ್ರಾ ಮಹೋತ್ಸವಕ್ಕೆ ಕುಡಿವ ನೀರು, ವಾಹನ ಪಾರ್ಕಿಂಗ್ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ತಂಗಡಗಿ ಹೇಳಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ಪ್ರಯುಕ್ತ ಕರೆದ ಪೂರ್ವಸಿದ್ಧತೆ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯದ ವಿವಿಧ ಭಾಗಗಳಿಂದ ಲಕ್ಷ್ಯಾಂತರ ಭಕ್ತಾದಿಗಳು ಸೇರುವ ಶ್ರೀಗವಿಸಿದ್ದೇಶ್ವರ ಮಹಾರಥೋತ್ಸವ ಜನವರಿ 15ರಂದು ನಡೆಯಲಿದ್ದು,ಜಾತ್ರೆ ವ್ಯವಸ್ಥಿತವಾಗಿ ಜರುಗುವಂತೆ ನೋಡಿಕೊಳ್ಳಬೇಕು. ಮಹಾರಥೋತ್ಸದಿನದಂದು ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವುದರಿಂದ ಟ್ರಾಫಿಕ್ ಜಾಮ್ ಆಗದಂತೆ ಎಚ್ಚರ ವಹಿಸಬೇಕು. ವಾಹನಗಳಿಗೆ ಅಗತ್ಯ ಪಾಕಿಂರ್ಗ್ ವ್ಯವಸ್ಥೆ ಜೊತೆಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಭಕ್ತಾದಿಗಳಿಗೆ ಅನುಕೂಲವಾಗುವಂತೆ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಬೇಕು. ರಥೋತ್ಸವ ವೇಳೆ ಯಾವುದೇ ರೀತಿಯ ಅವಘಡಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಾತ್ರೋತ್ಸವ ಹಿನ್ನೆಲೆಯಲ್ಲಿ ನಿರಂತರವಾಗಿ ನಡೆಯಲಿರುವ ದಾಸೋಹಕ್ಕೆ ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆಯಾಗದಿರಲಿ. ಶುದ್ಧ ಕುಡಿಯುವ ನೀರು ಸರಬರಾಜು ಜೊತೆಗೆ ಸ್ವಚ್ಛತೆಯನ್ನು ಕಾಪಾಡಲು ನಗರಸಭೆಯಿಂದ ಕ್ರಮ ಕೈಗೊಳ್ಳಬೇಕು. ಜನರ ಆರೋಗ್ಯದ ಹಿತದೃಷ್ಟಿಯಿಂದ ಅಂಬ್ಯುಲೆನ್ಸ್ ವ್ಯವಸ್ಥೆ ಹಾಗೂ ಆರೋಗ್ಯ ತಂಡ ಕಾರ್ಯನಿರ್ವಹಿಸಬೇಕು. ಅಗ್ನಿಶಾಮಕ ವಾಹನಗಳನ್ನು ಕಾಯ್ದಿರಿಸಬೇಕು. ಶ್ರೀಗವಿಸಿದ್ದೇಶ್ವರ ಜಾತ್ರೆ ಅತ್ಯಂತ ವಿಜೃಂಭಣೆಯಿಂದ ಹಾಗೂ ವ್ಯವಸ್ಥಿತವಾಗಿ ನಡೆಸಲು ರಚಿಸಲ್ಪಟ್ಟ ಸಮಿತಿಗಳು ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಇದು ನಮ್ಮೆಲ್ಲರ ಜಾತ್ರೆಯಾಗಿರುವುದರಿಂದ ಸೇವಾ ಮನೋಭಾವದಿಂದ ಕೆಲಸ ಮಾಡಬೇಕು. ವಿಶೇಷಯವಾಗಿ ಜ. 14, 15 ಮತ್ತು 16 ರಂದು ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವುದರಿಂದ ಈ ಮೂರು ದಿನಗಳ ಕಾಲ ಅಧಿಕಾರಿಗಳು ಜಾಗೃತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್. ಎಲ್ ಅರಸಿದ್ದಿ, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸವರಗೋಳ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್ ಸೇರಿದಂತೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಗವಿಮಠಕ್ಕೆ ಭೇಟಿ: ಸಭೆಯ ನಂತರ ಜಿಲ್ಲಾ ಉಸ್ತುವಾರಿ ಸಚಿವರು ಶ್ರೀ ಗವಿಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿ ಜಾತ್ರಾ ವಿಷಯದ ಕುರಿತು ಶ್ರೀಗಳೊಂದಿಗೆ ಚರ್ಚಿಸಿದರು. ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್, ಡಿಸಿ ನಲಿನ್ ಅತುಲ್, ಸಿಇಓ ರಾಹುಲ್ ರತ್ನಂ ಪಾಂಡೇಯ ಹಾಗೂ ಇತರರ ಇದೇ ವೇಳೆ ಇದ್ದರು.

## ಕಲಬುರಗಿ: ಸಚಿವ ಪ್ರಿಯಾಂಕ್ ಖರ್ಗೆ ನಿವಾಸ ಮುತ್ತಿಗೆಗೆ ಯತ್ನ; ಹಲವು ಬಿಜೆಪಿ ನಾಯಕರು ಪೊಲೀಸರ ವಶಕ್ಕೆ!

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಬೀದರ್ ಮೂಲದ ಸಿವಿಲ್ ಗುತ್ತಿಗೆದಾರ ಸಚಿನ್ ಪಾಂಚಲ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷ ಬಿಜೆಪಿ ಶನಿವಾರ ನಗರದಲ್ಲಿ ಪ್ರತಿಭಟನೆ ನಡೆಸಿತು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮತ್ತು ವಿಧಾನ ಪರಿಷತ್ ಪ್ರತಿಪಕ್ಷನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಜಗತ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಮಂದಿ ಪಕ್ಷದ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡರು. ಪೊಲೀಸ್ ಬಿಗಿ ಭದ್ರತೆ ನಡುವೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಪ್ರಿಯಾಂಕ್ ಖರ್ಗೆ ನಿವಾಸಕ್ಕೆ ಮುತ್ತಿಗೆ ಹಾಕಲು ತೆರಳುತ್ತಿದ್ದಾಗ ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ನೇತೃತ್ವದಲ್ಲಿ ಬಿಜೆಪಿ ನಾಯಕರನ್ನು ವಶಕ್ಕೆ ಪಡೆಯಲಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಪ್ರಿಯಾಂಕ್ ಖರ್ಗೆ ಅವರ ನಿವಾಸದ ಹೊರಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಪ್ರತಿಭಟನೆಯಿಂದ ಸುಸ್ತಾಗಿ ಬರುವ ಬಿಜೆಪಿ ನಾಯಕರಿಗೆ ತೆಂಗಿನಕಾಯಿ, ಕಾಫಿ, ಟೀ, ಕುಡಿಯುವ ನೀರಿನ ಬಾಟಲಿ ನೀಡುವ ಮೂಲಕ ಉಪಚರಿಸಿದದ್ದು ವಿಶೇಷವಾಗಿ ಗಮನಸೆಳೆಯಿತು. ಕಾಂಗ್ರೆಸ್ ಪಾಪದ ಕೊಡ ತುಂಬಿದೆ; ಪ್ರಿಯಾಂಕ್ ಖರ್ಗೆಯಿಂದ ರಿಪಬ್ಲಿಕ್ ಆಫ್ ಕಲಬುರಗಿ ಆಗಿದೆ: ಛಲವಾದಿ ನಾರಾಯಣಸ್ವಾಮಿ

ಈ ಮಧ್ಯೆ ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿರುವ ಪ್ರಿಯಾಂಕ್ ಖರ್ಗೆ, ಪ್ರತಿಪಕ್ಷಗಳ ಬೇಡಿಕೆ ಮತ್ತು ಒತ್ತಡದ ತಂತ್ರಕ್ಕೆ ನಾನಾಗಲೀ ಅಥವಾ ಸರಕಾರವಾಗಲೀ ಮಣಿಯುವುದಿಲ್ಲ. ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ಸೇರಿದಂತೆ ಬಿಜೆಪಿ ನಾಯಕರ ವಿರುದ್ಧ ಹಲವು ಪ್ರಕರಣಗಳಿವೆ ಎಂದು ಹೇಳಿದರು.

ಡಿಸೆಂಬರ್ 26 ರಂದು ಬೀದರ್ ಜಿಲ್ಲೆಯಲ್ಲಿ ಗುತ್ತಿಗೆದಾರ ಸಚಿನ್ ಪಾಂಚಾಲ್ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದರು. ಪ್ರಿಯಾಂಕ್ ಖರ್ಗೆ ಅವರ ಆಪ್ತ ಸಹಾಯಕ ರಾಜು ಕಾಪನೂರ ಅವರು ಕಠಿಣ ಕ್ರಮ ಕೈಗೊಳ್ಳುವಂತೆ ಅವರು ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾರೆ ಎನ್ನಲಾಗಿದೆ.

ಕಪನೂರ ಅವರಿಗೆ ಒಂದು ಕೋಟಿ ರೂಪಾಯಿ ನೀಡುವಂತೆ ಕೊಲೆ ಬೆದರಿಕೆ ಹಾಕಲಾಗಿತ್ತು ಎಂದು ಅವರು ಆರೋಪಿಸಿದ್ದಾರೆ. ಡೆತ್ ನೋಟ್ ನಲ್ಲಿ ತಮ್ಮ ಹೆಸರು ಇಲ್ಲದ ಕಾರಣ ನನಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎನ್ನುತ್ತಿರುವ ಪ್ರಿಯಾಂಕ್ ಖರ್ಗೆ, ಈ ಪ್ರಕರಣದ ಸತ್ಯಾಸತ್ಯತೆ ಹೊರಬರಲು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

## ಜ.6ರಂದು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ದೀಪಧಾರೆ ರಕ್ತ ನಿಧಿ ಕೇಂದ್ರ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ:4:: ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಇದೇ ಜನೇವರಿ 6 ರಂದು ಬೆಳಿಗ್ಗೆ 10 ಗಂಟೆಗೆ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ 2024–25ನೇ ಸಾಲಿನ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ದೀಪಧಾರೆ ಮತ್ತು ಪ್ರತಿಜ್ಞಾವಿಧಿ ಸ್ವೀಕಾರ, ರಕ್ತ ನಿಧಿ ಕೇಂದ್ರ ಹಾಗೂ ಲಾಂಡ್ರಿ ಬ್ಲಾಕ್ ಕಟ್ಟಡ ಉದ್ಘಾಟಿಸುವರು.

ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆ ವಹಿಸುವರು. ಗುರಮಠಕಲ್ ಶಾಸಕ ಶರಣಗೌಡ ಕಂದಕೂರ, ಸುರಪುರ ಶಾಸಕ ವೇಣುಗೋಪಾಲ್ ನಾಯಕ, ಡಿಸಿ ಡಾ. ಸುಶೀಲ.ಬಿ,ಜಿ.ಪಂ ಸಿಇಓ ರವೀಶ್ ಒರಡಿಯಾ, ಎಸ್.ಪಿ. ಪೃಥ್ವಿಕ್ ಶಂಕರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಬಿರಾದಾರ, ನಗರಸಭೆ ಅಧ್ಯಕ್ಷ ಲಲಿತಾ ಅನಪುರ್,ನಗರಯೋಜನಾ ಪ್ರಾಧಿಕಾರ ಅಧ್ಯಕ್ಷ ವಿನಾಯಕ ಮಾಲಿಪಾಟೀಲ,ಮುದ್ನಾಳ್ ಗ್ರಾಂ.ಪಂ ಅಧ್ಯಕ್ಷ ವಿನೋದ್ ರಾಠೋಡ ಅವರು ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 04– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಎಸ್‌ಬಿಐ ಮತ್ತು ಇತರ ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೈಸೂರಿನ ಕೇಂದ್ರ ಕಚೇರಿಯಲ್ಲಿ 45 ದಿನಗಳ ತರಬೇತಿಯನ್ನು ನೀಡಲು ನಿರ್ಧರಿಸಿದೆ ಎಂದು ಕರಾಮುವಿ ಕುಲಸಚಿವ ಪ್ರೊ. ಕೆ.ಬಿ.ಪ್ರವೀಣ ಅವರು ತಿಳಿಸಿದ್ದಾರೆ. ಆಸಕ್ತರು 2025ರ ಜನವರಿ 8 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯ ಒಳಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ದೂ.ಸಂ.08212515944ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ:4–ಲೋಕೋಪಯೋಗಿ ಖಾತೆ ಸಚಿವರಾದ ಸತೀಶ ಜಾರಕಿಹೊಳಿ ಅವರು ಇದೇ ಜನವರಿ 6 ರಂದು ಮಧ್ಯಾಹ್ನ 12 ಗಂಟೆಗೆ ಯಾದಗಿರಿ ಜಿಲ್ಲೆಯ ಸೈದಾಪುರ ಗ್ರಾಮದಲ್ಲಿ ಮಹರ್ಷಿ ಶ್ರೀ ವಾಲ್ಮೀಕಿ ಪುತ್ಥಳಿ ಅನಾವರಣಗೊಳಿಸುವರು.ನಂತರ ಮಧ್ಯಾಹ್ನ 3 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡುವರು.

ಅಂದು ಸಂಜೆ 4 ಗಂಟೆಗೆ ಯಾದಗಿರಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಲೋಕೋಪಯೋಗಿ ವಿಭಾಗದ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ,ರಾತ್ರಿ 7 ಕ್ಕೆ ಸೇಡಂಗೆ ಪ್ರಯಾಣ ಬೆಳೆಸುವರು.

## ಕುಕನೂರ ಪಟ್ಟಣ ಪಂಚಾಯಿತಿಯ ಸಾಮಾನ್ಯ ಸಭೆ, ಸಭೆಯಲ್ಲಿ ಸಮಸ್ಯೆಗಳ ಸುರಿಮಳೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಆಯೋಜಿಸಿದ್ದ ಪಟ್ಟಣ ಪಂಚಾಯಿತಿ ಸಾಮಾನ್ಯಸಭೆಯಲ್ಲಿ ಸಮಸ್ಯೆಗಳ ಸುರಿಮಳೆ ಕಾಣಬಹುದಾಗಿದ್ದು ನೀರಿನ ಸಮಸ್ಯೆ, ಪೌರ ಕಾರ್ಮಿಕರ ಕೊರತೆ, ಶುಚಿತ್ವದ ಅಸಮರ್ಪಕ ನಿರ್ವಹಣೆ, ಸೇರಿದಂತೆ ಅನೇಕ ಸಮಸ್ಯೆಗಳನ್ನು ಸಭಾಧ್ಯಕ್ಷರು ಹಾಗೂ ಮುಖ್ಯ ಅಧಿಕಾರಿಗಳು ಎದುರಿಸಬೇಕಾಯಿತು.

ಶೌಚಾಲಯಗಳಿಗೆ ನೀರಿನ ಸರಬರಾಜು ಇಲ್ಲ ಎಂದು ಆರನೇ ವಾರ್ಡಿನ ಸದಸ್ಯ ಮಲ್ಲಿಕಾರ್ಜುನ ಚೌದರಿ ಮನವಿ ಮಾಡಿಕೊಳ್ಳುತ್ತಿದ್ದಂತೆಯೇ ಅಧ್ಯಕ್ಷರು ಹಾಗೂ ಮುಖ್ಯ ಅಧಿಕಾರಿಗಳು ಮಾತನಾಡಿ ಎರಡು ದಿನಗಳ ಒಳಗೆ ನೀರು ಸರಬರಾಜು ಆಗುವಂತೆ ಎಲ್ಲಾ ರೀತಿಯ ಸೂಕ್ತ ಕ್ರಮ ಕೈಗೊಳ್ಳುವಂತೆ ಮತ್ತು ಮುಂದೆಂದು ಈ ತರಹದ ಸಮಸ್ಯೆಗಳು ಎದುರಾಗದಂತೆ ನೋಡಿಕೊಳ್ಳಬೇಕೆಂದು ಸಿಬ್ಬಂದಿಗಳಿಗೆ ಖಡಕ್ ಸೂಚನೆ ನೀಡಿದರು.

ಇನ್ನು ಪಟ್ಟಣದಲ್ಲಿ ಸದಸ್ಯರನ್ನು ಗಮನಕ್ಕೆ ತೆಗೆದುಕೊಳ್ಳದೆ ಕಟ್ಟಡಗಳ ತೆರವು ಕಾರ್ಯಚರಣೆಗೊಳಿಸಿದ್ದಕ್ಕೆ ಕೆಲವು ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಅಧ್ಯಕ್ಷರು ಪ್ರತಿಯೊಬ್ಬ ಸದಸ್ಯರನ್ನು ಗಮನಕ್ಕೆ ತೆಗೆದುಕೊಂಡು ಯಾವುದೇ ವಿಷಯ ವಿರಲಿ ಎಲ್ಲರ ವಿಶ್ವಾಸ ಪಡೆದುಕೊಂಡ ನಂತರವೇ ಕಾರ್ಯಗತ ಆಗಬೇಕೆಂದು ತಿಳಿಸಿದರು.

ಸಭೆಯಲ್ಲಿ ಪಟ್ಟಣ ಪಂಚಾಯಿತಿಯ ಜೆಸಿಬಿ ಆಪರೇಟರ್ ಬಗ್ಗೆ ಗಂಭೀರ ಆರೋಪ ಕೇಳಿ ಬಂದಾಗ ಅಧಿಕಾರಿಗಳು ಸದಸ್ಯರನ್ನು ನೀವೇ ಸೂಕ್ತ ಆಪರೇಟರ್ ಅನ್ನು ತೋರಿಸಿ ಅವರನ್ನೇ ನೇಮಕ ಮಾಡಿಕೊಳ್ಳುತ್ತೇವೆ ಎಂದು ಹೇಳಿದಾಗ ಬೇರೆಯವರನ್ನು ಹುಡುಕುವ ಬದಲು ನಮ್ಮನ್ನೇ ನೇಮಿಸಿಕೊಂಡು ಬಿಡಿ ಎಂದು ಸದಸ್ಯರೊಬ್ಬರು ಆಕ್ರೋಶಭರಿತರಾಗಿ ಹೇಳಿದರು.



ಪಟ್ಟಣ ಪಂಚಾಯತಿಯ ಸಾಮಾನ್ಯ ಸಭೆಗಳು ಸೂಕ್ತ ಸಮಯಕ್ಕೆ ಜರುಗಿದೆ ವಿಳಂಬವಾಗುತ್ತಿವೆ ಎಂದು ಸದಸ್ಯ ಸಿದ್ಧಲಿಂಗಯ್ಯ ಉಳ್ಳಾಗಡ್ಡಿ ಧ್ವನಿ ಎತ್ತಿದ್ದು ಪ್ರತಿ ತಿಂಗಳು ಕಡ್ಡಾಯವಾಗಿ ಸಾಮಾನ್ಯ ಸಭೆಗಳು ಜರುಗಬೇಕೆಂದು ಹಾಗೂ ಎರಡು ಮೂರು ದಿನಗಳ ಮುಂಚೆ ಸಾಮಾನ್ಯ ಸಭೆ ನೋಟಿಸ್ ನೀಡುವ ಬದಲು ಕಡ್ಡಾಯವಾಗಿ ಏಳು ದಿನ ಮುಂಚೆ ಸದಸ್ಯರ ಗಮನಕ್ಕೆ ತರುವಂತೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹ ಪಡಿಸಿದರು.

ಪಟ್ಟಣದ ರಸ್ತೆ ಬದಿಗಳಲ್ಲಿ ನಡೆಯುತ್ತಿರುವ ವ್ಯಾಪಾರವಹಿವಾಟುದಾರರಿಗೆ ಬಾಡಿಗೆ ನಿಗದಿಪಡಿಸಿ ಪಂಚಾಯತಿಯ ಆದಾಯ ಹೆಚ್ಚಿಸಿಕೊಳ್ಳಬೇಕೆಂದು ಕೆಲಸರು ಸಭೆಗೆ ತಿಳಿಸಿದರು.

ಬೇಸಿಗೆ ಸಮೀಪಿಸುತ್ತಿದ್ದು ಕುಡಿಯುವ ನೀರು, ಸಮರ್ಪಕ ಪೂರೈಕೆಗೆ ಮುಂಜಾಗ್ರತಾ ಕ್ರಮ ವಹಿಸಿ ಎಂದು ತಿಳಿಸುತ್ತಾ ಚರ್ಚೆ ಹಾಗೂ ಕೆಲ ನಿರ್ಧಾರವನ್ನು ಸಹ ತೆಗೆದುಕೊಳ್ಳಲಾಯಿತು.

ಸಭೆಯಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಲಲಿತಮ್ಮ ಎಡಿಯಾಪುರ, ಉಪಾಧ್ಯಕ್ಷ ಪ್ರಶಾಂತ ಆರುಬೆರಳಿನ, ಸ್ಥಾಯಿ ಸಮಿತಿ ಅಧ್ಯಕ್ಷ ನೂರುದ್ದೀನಸಾಬ್ ಗುಡಿಹಿಂದಿಲ,ಮುಖ್ಯ ಅಧಿಕಾರಿ ರವೀಂದ್ರ ಬಾಗಲಕೋಟೆ ಸೇರಿದಂತೆ ಪಟ್ಟಣ ಪಂಚಾಯತಿ ಸರ್ವ ಸದಸ್ಯರು ಹಾಗೂ ಸಿಬ್ಬಂದಿಗಳ ಪಾಲ್ಗೊಂಡಿದ್ದರು.

## ಪತ್ರಿಕಾ ಕಚೇರಿಗಳಲ್ಲಿ ಇಂಟರ್ನ್‌ಶಿಪ್ ಯೋಜನೆ: ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.04:ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಮಹಿಳಾ ಅಭ್ಯರ್ಥಿಗಳಿಂದ ವಿವಿಧ ಪತ್ರಿಕಾಲಯಗಳಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ.ಒಟ್ಟು ಐವರು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶವಿದ್ದು,ಆಯ್ಕೆಯಾದ ಅಭ್ಯರ್ಥಿಗಳಿಗೆ ಎರಡು ತಿಂಗಳ ಅವಧಿಗೆ ವಿವಿಧ ಪತ್ರಿಕಾ ಕಚೇರಿಗಳಲ್ಲಿತರಬೇತಿಪಡೆಯಲು ಅವಕಾಶ ಕಲ್ಪಿಸಲಾಗುವುದು. ತರಬೇತಿ ಅವಧಿಯಲ್ಲಿ ಮಾಸಿಕ 20,000 ರೂ. ಶಿಷ್ಯವೇತನ ನೀಡಲಾಗುವುದು.ಅಭ್ಯರ್ಥಿಗಳು ರಾಜ್ಯದಯಾವುದೇಮಾನ್ಯತೆಪಡೆದ ವಿಶ್ವವಿದ್ಯಾಲಯದಿಂದಸ್ನಾತಕೋತ್ತರ ಪದವಿ ಪಡೆದಿರಬೇಕು.ವಯಸ್ಸು 28 ವರ್ಷ ಮೀರಿರಬಾರದು. ಅರ್ಹತಾ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಈ ಬಗ್ಗೆ ಹೆಚ್ಚಿನಮಾಹಿತಿಯನ್ನುಮುಂದಿನ ದಿನಗಳಲ್ಲಿ ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಜನವರಿ 20 ರ ಒಳಗಾಗಿ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ–ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಮಾಹಿತಿಯನ್ನು ಸ್ಕ್ಯಾನ್ ಮಾಡಿ karnataka-mediaacademy@gmail.comUÉ ಇ–ಮೇಲ್ ಮೂಲಕ ಕಳುಹಿಸಬಹುದಾಗಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

## ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ವಕ್ಫ್ ಸಂಸ್ಥೆಯ ದಾಖಲಾತಿ ನೋಂದಣಿ ಪ್ರಕ್ರಿಯೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.04: ಸಿರುಗುಪ್ಪ ಪಟ್ಟಣದ ವಕ್ಫ್ ಸಂಸ್ಥೆ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ಸಮಿತಿಯ ಸಾಮಾನ್ಯ ಸದಸ್ಯರ ದಾಖಲಾತಿ ನೋಂದಣಿ ಪ್ರಕ್ರಿಯೆಯು ಜನವರಿ 06 ರಿಂದ ಜನವರಿ 31 ರವರೆಗೆ ನಡೆಯಲಿದೆ ಎಂದು ಸಿರುಗುಪ್ಪ ಪಟ್ಟಣದ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ)ನ ಆಡಳಿತಾಧಿಕಾರಿ ತಿಳಿಸಿದ್ದಾರೆ.

ಜನವರಿ 06 ರಿಂದ ಜನವರಿ 20 ರವರೆಗೆ ಬೆಳಿಗ್ಗೆ 10:30 ಗಂಟೆಯಿಂದ ಮಧ್ಯಾಹ್ನ 2:30 ಗಂಟೆ ರ ಅವಧಿಯಲ್ಲಿ ಹೊಸ ಸದಸ್ಯರ ದಾಖಲಾತಿಗಾಗಿ ಅರ್ಜಿ ನಮೂನೆ ವಿತರಣೆ ಮಾಡಲಾಗುತ್ತದೆ.ಭರ್ತಿ ಮಾಡಿದ ಅರ್ಜಿ ನಮೂನೆಗಳೊಂದಿಗೆ 2 ಇತ್ತೀಚಿನ ಭಾವಚಿತ್ರಗಳು ಹಾಗೂ ರೂ.600/– ಶುಲ್ಕ ಹಾಗೂ ಅಧಿಕೃತ ವಿಳಾಸದ 02 ಗುರುತಿನ ಚೀಟಿಗಳೊಂದಿಗೆ ಜನವರಿ 20 ರೊಳಗೆ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ರ ಕಚೇರಿಗೆ ಸಲ್ಲಿಸಬೇಕು. ದಾಖಲಾದ ಸದಸ್ಯರ ಕರಡು ಪಟ್ಟಿಯನ್ನು ಜನವರಿ 25 ರಂದು ಪ್ರಕಟಿಸಲಾಗುತ್ತದೆ. ಕರಡು ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಹಾಗೂ ಸಲಹೆ–ಸೂಚನೆಗಳಿದ್ದಲ್ಲಿ ಜನವರಿ 27 ರಿಂದ ಜನವರಿ 28 ರವರೆಗೆ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2.30 ಗಂಟೆ ರೊಳಗೆ ಸಲ್ಲಿಸಬಹುದು. ಆಕ್ಷೇಪಣೆಗಳ ವಿಚಾರಣೆ ಜನವರಿ 29 ರಂದು ಬೆಳಿಗ್ಗೆ 10:30 ರಿಂದ ಮಧ್ಯಾಹ್ನ 2:30 ಗಂಟೆ ರೊಳಗೆ ನಡೆಸಲಾಗುತ್ತದೆ. ದಾಖಲಾದ ಸಾಮಾನ್ಯ ಸದಸ್ಯರ ಅಂತಿಮ ಪಟ್ಟಿಯನ್ನು ಜನವರಿ 31 ರಂದು ಮಧ್ಯಾಹ್ನ 3 ಗಂಟೆಗೆ ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ರ ಕಚೇರಿಯಲ್ಲಿ ಪ್ರಕಟಿಸಲಾಗುವುದು. ಈಗಾಗಲೇ 2019–20ರಲ್ಲಿ ಸದಸ್ಯತ್ವ ಪಡೆದಿರುವ ಸಾಮಾನ್ಯ ಸದಸ್ಯರು ಒಟ್ಟು ಶುಲ್ಕ ರೂ.1000 (ಒಂದು ಸಾವಿರ ರೂಪಾಯಿ), ಆಧಾರ್ ಕಾರ್ಡ್ ಪ್ರತಿ ಹಾಗೂ ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಕಡ್ಡಾಯವಾಗಿ ಸಲ್ಲಿಸಬೇಕು. ಮುಸ್ಲಿಂ ಈದ್ಗಾ ಮತ್ತು ಖಬರಸ್ತಾನ್(ಸುನ್ನಿ) ನೋಂದಣಿ ಅಧಿಕಾರಿಗಳ ಕಚೇರಿಯು ಸರ್ಕಾರಿ ರಜಾದಿನಗಳಲ್ಲಿಯೂ ಸಹ ಕಾರ್ಯನಿರ್ವಹಿಸಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಿ: ಸಹಾಯಕ ಆಯುಕ್ತ ಪ್ರಮೋದ್



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಜ.04:ಜಿಲ್ಲಾಡಳಿತದಿಂದ ಜ.15 ರಂದು ಶಿವಯೋಗಿ ಸಿದ್ದರಾಮೇಶ್ವರ ಜಯಂತಿ, ಜ.19 ರಂದು ಮಹಾಯೋಗಿ ವೇಮನ ಜಯಂತಿ ಹಾಗೂ ಜ.21 ರಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಹಾಯಕ ಆಯುಕ್ತ ಪ್ರಮೋದ್ ಅವರು ಹೇಳಿದರು.ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ವಿವಿಧ ಮಹನೀಯರ ಜಯಂತಿ ಆಚರಣೆ ಕುರಿತು ಶುಕ್ರವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ಬಾರಿ ವಿವಿಧ ಮಹನೀಯರ ಜಯಂತಿಯನ್ನು ವಿಜೃಂಭಣೆಯಿಂದ ನಡೆಸಲಾಗುತ್ತದೆ. ಜಯಂತಿಯಂದು ಅದ್ದೂರಿ ಮೆರವಣಿಗೆ ನಡೆಯಲಿದೆ. ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದರು. ಮೆರವಣಿಗೆ ನಂತರ ವೇದಿಕೆ ಕಾರ್ಯಕ್ರಮ ಇರಲಿದ್ದು, ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ಜಯಂತಿ ಕಾರ್ಯಕ್ರಮದಂದು ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಲಘು ಉಪಹಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಹೇಳಿದರು.ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.ಕಾರ್ಯಕ್ರಮದಲ್ಲಿ ಮಹನೀಯರ ಕುರಿತು ವಿಶೇಷ ಉಪನ್ಯಾಸ,ಆಯಾ ಸಮುದಾಯದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು ಎಂದರು.ಸಭೆಯಲ್ಲಿ ಸಮಾಜದ ಮುಖಂಡರುಗಳು ತಮ್ಮ ಸಲಹೆಗಳನ್ನು ನೀಡಿದರು.ಈ ಸಂಧರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೇಳುವ ಮುನ್ನ ಸಿ.ಟಿ.ರವಿ ರಾಜೀನಾಮೆ ಕೇಳಿ– ಕಿರದಳ್ಳಿ



**ಮಲ್ಲಮ್ಮ ನುಡಿ ವಾರ್ತೆ**

ಸುರಪುರ:ಬೀದರ ಜಿಲ್ಲೆಯ ಯುವ ಗುತ್ತಿಗೆದಾರ ಸಚಿನ್ ಪಾಂಚಾಳ ಅವರ ಆತ್ಮಹತ್ಯೆ ಪ್ರಕರಣದಲ್ಲಿ ಅರ್ಥಹೀನವಾಗಿ ಕರ್ನಾಟಕ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿಬಿಟಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆ ಕೇಳುವ ಬಿಜೆಪಿಯ ಚಲವಾದಿ ನಾರಾಯಣಸ್ವಾಮಿ,ಪಿ.ರಾಜೀವ್ ಸೇರಿದಂತೆ ಎಲ್ಲಾ ಬಿಜೆಪಿ ಮುಖಂಡರೆ ಮೊದಲು ಸದನದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಅವಮಾನಿಸುವ ಮೂಲಕ ಮಹಿಳಾ ಕುಲವನ್ನು ಅವಮಾನಿಸಿರುವ ನಿಮ್ಮ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ರಾಜೀನಾಮೆ ಕೇಳುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಸಂಘಟನೆಯ ಜಿಲ್ಲಾ ಸಂಚಾಲಕ ಮಾಳಪ್ಪ ಕಿರದಳ್ಳಿ ಆಗ್ರಹಿಸಿದರು.ಈ ಕುರಿತು ಪತ್ರಿಕಾ ಹೇಳಿಕೆ ನೀಡಿ,ಪ್ರಿಯಾಂಕ್ ಖರ್ಗೆ ಅವರಿಗೂ ಸಚಿನ್ ಪಂಚಾಳ ಆತ್ಮಹತ್ಯೆಗೂ ಯಾವುದೇ ಸಂಬಂಧವೇ ಇಲ್ಲ,ಆದರೂ ಪ್ರಿಯಾಂಕ್ ಖರ್ಗೆ ಅವರ ರಾಜೀನಾಮೆ ಕೇಳುವ ನಿಮಗೆ ಯಾವ ನೈತಿಕತೆ ಇದೆ.ಈ ಹಿಂದೆ ತಾವೇ ಮಲ್ಲಿಕಾರ್ಜುನ ಖರ್ಗೆ ಅವರಿಂದ ಏನೆಲ್ಲ ಸೌಲಭ್ಯ ಪಡೆದುಕೊಂಡಿದ್ದೀರಿ,ಎಲ್ಲೆಲ್ಲಿ ಸೈಟ್ ಪಡೆದಿದ್ದೀರಿ ಎನ್ನುವುದು ಎಲ್ಲರಿಗೂ ತಿಳಿದ ಸಂಗತಿಯಾಗಿದೆ. ಖರ್ಗೆ ಕುಟುಂಬ ಎನ್ನುವುದು ಆನೆ ಇದ್ದಂತೆ ನೀವು ರಾಜೀನಾಮೆ ಕೇಳಿದರೆ ನಿಮ್ಮ ಮಾತಿಗೆ ಕವಡೆ ಕಾಸಿನ ಕಿಮ್ಮತ್ತಿಲ್ಲ ಎನ್ನುವುದು ಮೊದಲು ಅರಿತುಕೊಳ್ಳಿ.ಪ್ರಿಯಾಂಕ್ ಖರ್ಗೆ ಅವರೆ ಸ್ವತಃ ತಮ್ಮ ಮೇಲೆ ಆರೋಪದ ಮಾತು ಕೇಳಿ ಬಂದಿದ್ದರಿಂದ ಪ್ರಕರಣ ಸಿಐಡಿ ಗೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿಕೊಂಡಿದ್ದಾರೆ.ಅಲ್ಲದೆ ಸಚಿನ ಪಂಚಾಳ ಎಲ್ಲಿಯೂ ಪ್ರಿಯಾಂಕ್ ಖರ್ಗೆ ಅವರ ಹೆಸರನ್ನು ಪತ್ರದಲ್ಲಿ ಉಲ್ಲೇಖಿಸಿಲ್ಲ,ಅಲ್ಲದೆ ಕೇವಲ ಪ್ರಿಯಾಂಕ್ ಖರ್ಗೆ ಅವರೊಂದಿಗೆ ರಾಜು ಕಪನೂರ ಇತರರು ಇರುವ ಫೋಟೊ ತೆ–ೂರಿಸಿ ರಾಜೀನಾಮೆ ಕೇಳುವ ನೀವು,ನಿಮ್ಮ ಪಕ್ಷದ ಶಾಸಕರ ಜೊತೆಗೆ ಇರುವ ಫೋಟೊಗಳು ಹೊರಬಂದಿವೆಯಲ್ಲಾ, ನಿಮ್ಮ ಶಾಸಕರ ರಾಜೀನಾಮೆ ಕೇಳದೆ ಇರುವ ನಿಮ್ಮ ಮಾತಿಗೆ ಬೆಲೆ ಇದೆಯೇ ಎಂದು ಪ್ರಶ್ನಿಸಿ,ಯಾವುದೇ ಕಾರಣಕ್ಕೂ ಪ್ರಿಯಾಂಕ್ ಖರ್ಗೆ ಅವರು ರಾಜೀನೆಮೆ ನೀಡುವ ಪ್ರಶ್ನೆಯೇ ಇಲ್ಲ,ಅವರೊಂದಿಗೆ ನಾಡಿನ ಜನರಿದ್ದೇವೆ,ಇದೇ ರೀತಿ ನೀವು ವಿನಾಕಾರಣ ಖರ್ಗೆ ಕುಟುಂಬದ ವಿರುದ್ಧ ಹೇಳಿಕೆ ನೀಡಿದರೆ ನಿಮ್ಮ ವಿರುದ್ಧವೇ ಪ್ರತಿಭಟನೆ ನಡೆಸಬೇಕಾಗಲಿದೆ ಎಂದು ಎಚ್ಚರಿಸಿದ್ದಾರೆ.

## ಇಪಿಎಫ್‌ಓ : ಜ.13 ರಂದು ಪಿಂಚಣಿ ಅದಾಲತ್

**ಮಲ್ಲಮ್ಮ ನುಡಿ ವಾರ್ತೆ**


ಬಳ್ಳಾರಿ,ಜ.04:ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಜ.13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ತಿಳಿಸಿದ್ದಾರೆ.ಬಳ್ಳಾರಿ, ವಿಜಯನಗರ,ಕೊಪ್ಪಳ,ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪವ ಹಾಗೂ ಇತ್ಯಾದಿಗಳನ್ನು ಜ.10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.07 ರಂದು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.04:ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಜನನ–ಮರಣ ನಾಗರಿಕ ನೋಂದಣಿ ಪದ್ಧತಿ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಹಾಗೂ ಇತರೆ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜ.07 ರಂದು ಸಂಜೆ 05 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಬಳ್ಳಾರಿ ಗ್ರಾಮೀಣ ವ್ಯಾಪ್ತಿಯ 220/110/ 11ಕೆ.ವಿ ಮಾರ್ಗದ ಎಫ್–37 ಮತ್ತು ಎಫ್–38 ಕೈಗಾರಿಕಾ ಫೀಡರ್‌ಗಳ ಹೆಚ್ಚುವರಿ ಭಾರವನ್ನು ಎಫ್–71 ಹರಗಿನದೋಣಿ ಎನ್‌ಜೆವೈ ಫೀಡರ್ ಮೇಲೆ ವರ್ಗಾಹಿಸುವ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಜ.05 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯವಾಗಲೀದೆ ಎಂದು ಜೆಸ್ಕಾಂನ ಗ್ರಾಮೀಣ ಉಪ ವಿಭಾಗದ ಕಾರ್ಯ ಮತ್ತು ಪಾಲನಾ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನಬಾಬು ತಿಳಿಸಿದ್ದಾರೆ.**ವಿದ್ಯುತ್ ವ್ಯತ್ಯವಾಗು ಪ್ರದೇಶಗಳು:** ಎಫ್–32 ಐಪಿ ಸೆಟ್ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ,ಜಾನೆಕುಂಟೆ ತಾಂಡ, ಹರಗಿನದೋಣಿ, ಅಲ್ಲೀಪುರ, ಆಲದಹಳ್ಳಿ, ಕೃಷಿ ಪ್ರದೇಶಗಳು. ಎಫ್–37 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಫೀಡರ್ ಮಾರ್ಗದ ಬೆಳಗಲ್ಲು ಗ್ರಾಮ, ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶಗಳು.ಎಫ್–38 ಬೆಳಗಲ್ಲು ತಾಂಡ ಕೈಗಾರಿಕೆ ಪ್ರದೇಶ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ,ಜಾನೆಕುಂಟೆ ತಾಂಡ, ಹರಗಿನದೋಣಿ ಗ್ರಾಮಗಳು. ಎಫ್–71 ಹರಗಿನದೋಣಿ ಎನ್‌ಜೆವೈ ಫೀಡರ್ ಮಾರ್ಗದ ಬೆಳಗಲ್ಲು, ಬೆಳಗಲ್ಲು ತಾಂಡ, ಜಾನೆಕುಂಟೆ, ಜಾನೆಕುಂಟೆ ತಾಂಡ, ಹರಗಿನದೋಣಿ, ಹೊನ್ನಳ್ಳಿ, ಹೊನ್ನಳ್ಳಿ ತಾಂಡ ಗ್ರಾಮ ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರಮ ಶಕ್ತಿ ಕಟ್ಟಡ ನಿರ್ಮಾಣ ಅಸಂಘಟಿತ ಕಾರ್ಮಿಕ ಯೂನಿಯನ್ ಉದ್ಘಾಟನೆ



**ಮಲ್ಲಮ್ಮ ನುಡಿ ವಾರ್ತೆ**

ಸುರಪುರ:ನಗರದ ರಂಗಂಪೇಟೆಯಲ್ಲಿ ನೂತನವಾಗಿ ಶ್ರಮ ಶಕ್ತಿ ಕಟ್ಟಡ ಮತ್ತು ಇತರೆ ನಿರ್ಮಾಣ ಅಸಂಘಟಿತ ಕಾರ್ಮಿಕ ಯೂನಿಯನ್ ಉದ್ಘಾಟನಾ ಕಾರ್ಯಕ್ರಮ ನಡೆಯಿತು.ಕಾರ್ಯಕ್ರಮದಲ್ಲಿ ಮೈಲಾರಲಿಂಗೇಶ್ವರ ಎಮ್.ಎಸ್.ಡಬ್ಲ್ಯೂ ಸ್ನಾತಕೋತ್ತರ ಮಹಾವಿದ್ಯಾಲಯದ ಪ್ರಾಂಶುಪಾಲ ಮಲ್ಲಿಕಾರ್ಜುನ ಕುಲಕರ್ಣಿ,ವಕೀಲ ಆನಂದರೆಡ್ಡಿ ಕೃಷ್ಣಾಪುರ,ಕರವೇ ಪ್ರವೀಣಶೆಟ್ಟಿ ಬಣದ ತಾಲೂಕ ಅಧ್ಯಕ್ಷ ನಿಂಗಪ್ಪ ನಾಯಕ ಬಿಜಾಸಪುರ,ಪತ್ರಕರ್ತ ಮಲ್ಲಿಕಾರ್ಜುನ ಗುಳಗಿ,ಮುಖಂಡ ಅಬೀದ್ ಹುಸೇನ್ ಪಗಡಿ,ಕಾರ್ಮಿಕ ಇಲಾಖೆಯ ರಮೇಶ ಕುಮಾರ,ಪ್ರಸನ್ನ ಹೆಡಗಿನಾಳ ಭಾಗವಹಿಸಿ ಉದ್ಘಾಟಿಸಿದರು.ಇದೇ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾಗಿ ಸಯ್ಯದ್ ಹಾಫೀಜುರರಹಮಾನ್(ಸರೋವರ) ಅಧ್ಯಕ್ಷ,ವಿರೇಶ ಕುಮಾರ ರುಮಾಲ ಉಪಾಧ್ಯಕ್ಷ,ಮಹ್ಮದ್ ಹುಸೇನ್ ಶಕ್ಲಿ ಪ್ರಧಾನ ಕಾರ್ಯದರ್ಶಿ,ಮಹ್ಮದ್ ರಿಯಾಜ್ ಖಜಾಂಚಿ,ತುರಬ್ ಅಲಿ ಸಂಘಟನಾ ಕಾರ್ಯದರ್ಶಿ ಹಾಗೂ ಮಹ್ಮದ್ ಹಸನ್,ವಿರೇಶ ಪುರತಗೇರಿ,ಶಶಿಧರ ವಿಭೂತೆ, ಅಶೋಕ ಕುಮಾರ,ಮಹ್ಮದ್ ಹಸನ ಪಟೇಲ್ ಸದಸ್ಯರಾಗಿ ನೇಮಕಗೊಳಿಸಲಾಯಿತು.

## ರನ್ನ ವೈಭವ–2025 ಆಚರಣೆಗೆ ಸಲಹೆ, ಅಭಿಪ್ರಾಯ ಸಲ್ಲಿಕೆ

**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ:ಜಿಲ್ಲೆಯ ಮುಧೋಳ ರನ್ನ ಕ್ರೀಡಾಂಗಣದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ನಡೆಯಲಿರುವ ರನ್ನ ವೈಭವ–2025 ಹಿನ್ನಲೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ಕವಿಗೋಷ್ಠಿ, ವಿಚಾರ ಗೋಷ್ಠಿ ಸೇರಿದಂತೆ ಇತರೆ ಹೊಸ ವಿಷಯಗಳ ಕುರಿತು ಸಾರ್ವಜನಕರು,ಸಾಹಿತಿಗಳು, ಕಲಾಸಕ್ತರು ಹಾಗೂ ಕಲಾವಿದರು ತಮ್ಮ ತಮ್ಮ ಅಭಿಪ್ರಾಯಗಳನ್ನು, ಸಲಹೆಗಳನ್ನು ಜನವರಿ 15 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಇವರಿಗೆ ಅಂಚೆ ಮೂಲಕ ಹಾಗೂ ರನ್ನವೈಭವ–2025 ಕಾರ್ಯಕ್ರಮದ ಇಮೇಲ್ ran-navaibhava2025@gmail.com ಮೂಲಕ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

## ಪ್ರತಿಯೊಂದು ದೇಶದಲ್ಲಿ ಸಾಂಪ್ರದಾಯಿಕ ಆರೋಗ್ಯದ ಸೂತ್ರಗಳಿವೆ: ಡಾ.ವೆಂಕಟ ನಾರಾಯಣ ಜೋಶಿ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ:ಪ್ರತಿ ದೇಶಕ್ಕೂ ತಮ್ಮದೇ ಆದ ಸಾಂಪ್ರದಾಯಿಕ ಆರೋಗ್ಯದ ಸೂತ್ರಗಳಿವೆ. 95ಕ್ಕೂ ಹೆಚ್ಚು ಪಶ್ಚಿಮ ದೇಶಗಳಲ್ಲಿ ವಿವಿಧ ಔಷಧ ದ್ರವ್ಯಗಳ ವ್ಯಾಪಾರ ವಹಿವಾಟು ನಡೆಯುತ್ತಿವೆ ಎಂದು ಲಂಡನ್ ಆಯುರ್ವೇದ ಅಕಾಡೆಮಿಯ ನಿರ್ದೇಶಕ ಡಾ.ವೆಂಕಟ ನಾರಾಯಣ ಜೋಶಿ ಅವರು ಹೇಳಿದರು.ತಾರಾನಾಥ ಹಳೆಯ ವಿದ್ಯಾರ್ಥಿಗಳ ಸಂಘ, ನಿಮಾ ಬಳ್ಳಾರಿ ಮತ್ತು ನಿಮಾ ಮಹಿಳಾ ವೇದಿಕೆ ಸಹಭಾಗಿತ್ವದಲ್ಲಿ ನಗರದ ತಾರಾನಾಥ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದ ಮಂಥನ ಹಾಲ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ "ಯುರೋಪ್ ಮತ್ತು ಯುಕೆಯಲ್ಲಿ ಆಯುರ್ವೇದ" ವಿಷಯದ ಮೇಲೆ ಒಂದು ದಿನದ "ತಜ್ಞರ ತರಬೇತಿ ಕಾರ್ಯಕ್ರಮ"ದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಪಶ್ಚಿಮ ದೇಶಗಳಲ್ಲಿ ಶಿವಲಿಂಗಿ ಮತ್ತು ಪುತ್ರಂಜೀವ ಬೀಜಗಳ ಸಂರಕ್ಷಣೆ ಮತ್ತು ಮಾರಾಟ ಮಾಡಲಾಗುತ್ತಿದೆ.ದೇವದಾರುವಿನ ಸುಗಂಧ ಸಾರವನ್ನು ಪುರುಷ ಬಂಜೆತನದಲ್ಲಿ ಉತ್ತರ ಬಸ್ತಿಯ ಚಿಕಿತ್ಸೆಗಾಗಿ ಬಳಸಲಾಗುತ್ತಿದೆ ಎಂದು ಅವರು ತಿಳಿಸಿದರು. ಅಮೃತ ಸತ್ವವು ಏಡ್ಸ್ ಚಿಕಿತ್ಸೆಯಲ್ಲಿ ಸಹಾಯಕವಾಗಿದೆ. ನಿರ್ಗುಂಡಿ, ಕಡಲ ಬೆಳ್ಳುಳ್ಳಿ ಮತ್ತು ಮರಿಚಾ ಇತ್ಯಾದಿ ಔಷಧೀಯ ಸಸ್ಯಗಳು ಯೂರೋಪ್‌ನಲ್ಲಿ ಲಭ್ಯವಿವೆ ಮತ್ತು ಯುನೈಟೆಡ್ ಕಿಂಗ್‌ಡಮ್‌ನಲ್ಲಿ ತಯಾರಿಸಲಾದ ಸ್ವಯಂ ಔಷಧಿಗಳು ಪರಿಣಾಮಕಾರಿಯಾಗಿವೆ ಎಂದರು.ಲಂಡನ್ ಮತ್ತು ಯುಕೆಯಲ್ಲಿ ಆಯುರ್ವೇದದ ವ್ಯಾಪ್ತಿ ಮತ್ತು ವಿಶ್ವಮಟ್ಟದ ಆರೋಗ್ಯ ಸೇವೆಗಳ ಭವಿಷ್ಯದ ಯೋಜನೆಗಳ ಕುರಿತು ವಿವರಿಸಿದರು.ಇದೇ ಸಂದರ್ಭದಲ್ಲಿ ಮಹಾವಿದ್ಯಾಲಯದಲ್ಲಿ ನೂತನವಾಗಿ ಅನುಸಂಧಾನ, ಹೊಸ ಪರಿಕಲ್ಪನೆ ಮತ್ತು ಉದ್ಯಮಶೀಲತೆ ಅಭಿವೃದ್ಧಿ ಕೇಂದ್ರವನ್ನು ಉದ್ಘಾಟಿಸಲಾಯಿತು.ಈ ವೇಳೆ ಆಯುಷ್ ಇಲಾಖೆಯ ಮಾಜಿ ಜಂಟಿ ನಿರ್ದೇಶಕ ಡಾ.ಎನ್.ಎ.ಮೂರ್ತಿ, ತಾರಾನಾಥ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲರಾದ ಡಾ.ಜಿ.ಆರ್. ವಸ್ತ್ರದ್, ತಾರಾನಾಥ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಮಾಧವ ದಿಗ್ಗಾವಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಸಿದ್ದೇಶ್ವರ ಶ್ರೀಗಳ ಪ್ರವಚನ ಅಮೃತಕ್ಕೆ ಸಮಾನ, ಮಡಿವಾಳಪ್ಪ ಹೆಗ್ಗಣ ದೊಡ್ಡಿ



**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ: ಸಿದ್ದೇಶ್ವರ ಶ್ರೀಗಳು ತಮ್ಮ ಜ್ಞಾನದ ಮಾತುಗಳ ಮೂಲಕ ವಿಶ್ವದ ಜನರಿಗೆ ಪ್ರೇರಕ ಶಕ್ತಿಯಾಗಿ, ನಡೆದಾಡುವ ದೇರಾಗಿದ್ದರು. ಅವರ ಮನಮುಟ್ಟುವ ಪ್ರವಚನವೇ ನಮ್ಮ ಮನಸನ್ನು ಪರಿವರ್ತಿಸುವ ಶಕ್ತಿಯಾಗಿದೆ ಎಂದು ಕೆಂಭಾವಿ ವಲಯ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಾಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ ಹೇಳಿದರು. ಗುರುವಾರದಂದು ಸುರಪುರದ ಕನ್ನಡ ಸಾಹಿತ್ಯ ಸಂಘದಲ್ಲಿ ಶ್ರೀ ಸಿದ್ದೇಶ್ವರ ಶ್ರೀಗಳ ಗುರುನಮನ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ಶ್ರೀಗಳಿಗೆ ಪ್ರವೇಶನವೇ ಸರ್ವಸ್ವ ಅವರ ಪ್ರವಚನ ಅಮೃತಕ್ಕೆ ಸಮಾನ. ಪ್ರವಚನದ ಮೂಲಕ ದೇಶ–ವಿದೇಶಗಳಲ್ಲಿ ಜ್ಞಾನದೀವಿಗೆ ಹಿಡಿದ ಸರಳತೆಯ ಸಾಕಾರಮೂರ್ತಿ,ಜಾತಿ, ಕುಲ, ಧರ್ಮ, ವರ್ಗ, ಲಿಂಗ ಭೇದ ಎನ್ನದೆ ಸರ್ವರ ಏಳಿಗೆಗೆ ಸಂದೇಶ ಸಾರಿದ ಸಿದ್ಧೇಶ್ವರ ಶ್ರೀಗಳು ಶತಮಾನ ಕಂಡ ಶ್ರೇಷ್ಠ ಸಂತರು ಸಂಸ್ಕೃತಿಯನ್ನು ತಮ್ಮ ಪ್ರವಚನಗಳ ಮೂಲಕ ಜಗತ್ತಿನ ಬೇರೆ ಬೇರೆ ದೇಶಗಳಿಗೆ ಪರಿಚಯ ಮಾಡಿಕೊಟ್ಟಿರುವ ಶ್ರೀಗಳು ಸಮಾಜಕ್ಕೆ ಜ್ಞಾನವನ್ನು ಹಂಚಿದ್ದಾರೆ.

ಶ್ರೀಗಳ ಜೀವನವೇ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ ಎಂದು ಹೇಳಿದರು ಸತ್ಯದರ್ಶನಗಳ ಪಾರಂಪರಿಕ ಹಾದಿಯನ್ನು ಹುಟ್ಟುಹಾಕಿ ಜನರನ್ನು ಅಧ್ಯಾತ್ಮಿಕತೆಯ ಕಡೆಗೆ ಪಯಣಿಸಲು ರಹದಾರಿ ನಿರ್ಮಿಸಿ ತಾವೂ ಸಹ ಅಧ್ಯಾತ್ಮಿಕತೆಯ ಮೇರುಗಿರಿಯನ್ನು ಏರಿದವರು ಪೂಜ್ಯ ಸಿದ್ದೇಶ್ವರ ಶ್ರೀಗಳು ಎಂದು ಹೇಳಿದರು. ಬಣಗಾರ ಪೌಂಡೇಷನ್ ಜಾಗೃತಿ ಸಮಾಜ ಸೇವಾ ಕೇಂದ್ರ ಹಾಗೂ ಕನ್ನಡ ಸಾಹಿತ್ಯ ಸಂಘ ಸುರುಪುರರವರ ಜಂಟಿ ಆಶ್ರಯದಲ್ಲಿ ಹಮ್ಮಿಗೊಂಡಿದ್ದ ಪೂಜ್ಯ ಸಿದ್ದೇಶ್ವರ. ಶ್ರೀಗಳ ಗುರುನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ನಂತರ ಅತಿಥಿಗಳಾಗಿ ಅಗಮಿಸಿದ್ದ ಜಿಲ್ಲಾ ಗಮಕ ಸಾಹಿತ್ಯ ಪರಿಷತ್ತಿನ ಅದ್ಯಕ್ಷರಾದ ಶ್ರೀ ನಿವಾಸ ಜಾಲವಾದಿ ಅವರು ಪೂಜ್ಯ ಶ್ರೀ ಗಳು ಅದ್ಯಾತ್ಮ ಕ್ಷೇತ್ರದಲ್ಲಿ ತುತ್ತತುದಿಗೇರಿದ್ದ ಅವರು ಯಾವುದೇ ಆಸೆ ಆಕಾಂಕ್ಷೆಗಳಿಲ್ಲದ ನಿರಾಕಾರ ಸ್ವರೂಪಿಗಳಾಗಿದ್ದರು ಎಂದು ಅವರು ಹೇಳಿದರಸತ್ಯ ದರ್ಶನಗಳ ಪಾರಂಪರಿಕ ಹಾದಿಯನ್ನು ಹುಟ್ಟುಹಾಕಿ ಜನರನ್ನು ಅಧ್ಯಾತ್ಮಿಕತೆಯ ಕಡೆಗೆ ಪಯಣಿಸಲು ರಹದಾರಿ ನಿರ್ಮಿಸಿ ತಾವೂ ಸಹಅಧ್ಯಾತ್ಮಿಕತೆಯ ಮೇರುಗಿರಿಯನ್ನು ಏರಿದವರು ಪೂಜ್ಯ ಸಿದ್ದೇಶ್ವರ ಶ್ರೀಗಳು ಹೇಳಿದರು.ಅವರು ಬಣಗಾರ ಪೌಂಡೇಷನ್ ಜಾಗೃತಿ ಸಮಾಜ ಸೇವಾ ಕೇಂದ್ರ ಹಾಗೂ ಕನ್ನಡ ಸಾಹಿತ್ಯಸಂಘ ಸುರುಪುರರವರ ಜಂಟಿ ಆಶ್ರಯದಲ್ಲಿ ಹಮ್ಮಿಗೊಂಡಿದ್ದ ಪೂಜ್ಯ ಸಿದ್ದೇಶ್ವರ,ಶ್ರೀಗಳ ಗುರುನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಂತರ ಅತಿಥಿಗಳಾಗಿ ಅಗಮಿಸಿದ್ದ ಜಿಲ್ಲಾ ಗಮಕ ಸಾಹಿತ್ಯ ಪರಿಷತ್ತಿನ ಅದ್ಯಕ್ಷರಾದ ಶ್ರೀನಿವಾಸ ಜಾಲವಾದಿ ಅವರು ಪೂಜ್ಯ ಶ್ರೀ ಗಳು ಅದ್ಯಾತ್ಮ ಕ್ಷಿತಿಜದ ತುತ್ತತುದಿಗೇರಿದ್ದ ಅವರು ಯಾವುದೇ ಆಸೆ ಆಕಾಂಕ್ಷೆಗಳಿಲ್ಲದ ನಿರಾಕಾರ ಸ್ವರೂಪಿಗಳಾಗಿದ್ದರು ಎಂದು ಅವರು ಹೇಳಿದರು

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಭೀಮರಾಯನಗುಡಿ ವಲಯ ಕಸಾಪ ಅಧ್ಯಕ್ಷರಾದ ಶರಣಬಸವ ಪೋಲೀಸ ಬಿರಾದಾರ ಮಾತನಾಡಿ,'ಶ್ರೀಗಳು ಆಧ್ಯಾತ್ಮದ ಅಂತರಂಗದ ಖಣಿ, ಅವರು ಅತ್ಯಂತ ಸರಳರಾಗಿದ್ದರು. ಅವರಿಂದ ಲಕ್ಷಾಂತರ ಜನ ಪ್ರೇರಣೆ ಪಡೆದಿದ್ದಾರೆ' ಎಂದು ಹೇಳಿದರು.ಶರಣಬಸಪ್ಪಯಾಳವಾರ ಅಧ್ಯಕ್ಷರು ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಸುರಪುರ ಬಸವರಾಜ್ ಜಮಾದರಖಾನಿ ಅಧ್ಯಕ್ಷರು ಕನ್ನಡ ಸಾಹಿತ್ಯ ಸಂಘ ಸಿದ್ದೇಶ್ವರ ಮಹಾಸ್ವಾಮಿಗಳು ಕುರಿತು ಮಾತನಾಡಿದರು ಶಂಕ್ರಪ್ಪ ಬಣಗಾರ ಸಮಾಜದ ಹಿರಿಯ ಮುಖಂಡರು ಜಯಲಲಿತಾ ಪಾಟೀಲ್ ಉಪಾಧ್ಯಕ್ಷರು ಕನ್ನಡ ಸಾಹಿತ್ಯ ಸಂಘ ಚಂದ್ರಕಾಂತ್ ಮಾರ್ಗೇಲ್ ಅಧ್ಯಕ್ಷರು ಜಾಗತಿ ಸಮಾಜ ಸೇವಾ ಸಂಘ ವಸಂತ್ ಕುಮಾರ್ ಬಣಗಾರ್ ಅಧ್ಯಕ್ಷರು ಬಣಗಾರ್ ಫೌಂಡೇಶನ್ ಸೋಮರೆಡ್ಡಿ ಮಂಗ್ಯಾಳ, ಜಿಲ್ಲಾ ಸರ್ಕಾರಿ ನೌಕರರ ಖಜಂಚಿ ವೇದಿಕೆ ಮೇಲೆ ಇದ್ದರು. ಮಹೇಂದ್ರ ಅಂಗಡಿ, ಸಜ್ಜನ್ ಕುಮಾರ್ ಕಲ್ಯಾಣ ಶೆಟ್ಟಿ,ರಾಜೇಶ್ ಮಸ್ಕಿ ,ಜಗದೀಶ್ ಮಾನು , ಸೋಮಶೇಖರ್ ಶಾಬಾದಿ ರಾಜು ಪು ಲ್ಸೆ ಮಾಂತೇಶ್ ಪಂಚಾಮತ, ರಮೇಶ್ ನರಸಿಂ ಬಾಡಿಯಳ್,ಅನ್ವರ್ ಜಮಾದಾರ್, ನಬಿಲಾಲ್ ಮಕಂದಾರ, ಕನಕಪ್ಪ ವಾಗಣಿಗೇರಿ, ನಂದ ರೆಡ್ಡಿ , ಶ್ರೀಶೈಲ ಯಂಕಂಚಿ, ಮಾಂತೇಶ್ ಶಾಪುರಕರ,ರಾಘವೇಂದ್ರ ಗಂಗಾಧರ ರುಮಾಲ್, ಸಿದ್ದಯ್ಯ ಹಿರೇಮಠ ,ಶರಣಗೌಡ ಪಾಟೀಲ ಜೈನಾಪುರ, ಶಕುಂತಲಾ ಜಾಲವಾದಿ, ರಾಮಕೃಷ್ಣ ಬಿಳವಾರ್ ಬಾಬು ಗುಜನೂರು ಅಶೋಕ್ ಬಾಬು ಮೋಟಗಿ ಇದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಅಂಬರೀಶ್ ಚಿಲ್ಲಾಳ್ ಮಾಡಿದರು ಪ್ರಾರ್ಥನೆಯನ್ನು ದೀಪಿಕಾ ಡಿ ಹಾಡಿದರು ಮಲ್ಲಿಕಾರ್ಜುನ ಉದ್ದಾರ್ ಸ್ವಾಗತ ಮಾಡಿದರು ಸಾಹೇಬ್ರೆಡ್ಡಿ ಇಟಗಿ ಪ್ರಾಸ್ತಾವಿಕ ನುಡಿಗಳನ್ನಾಡಿದರು ವಂದನಾರ್ಪಣೆ ಎಚ್ ರಾಥೋಡ್ ಮಾಡಿದರು.

# ಕೆಕೆಆರ್‌ಡಿಬಿ ಕಾಮಗಾರಿಗಳನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸಿ–ಸಚಿವ ಈಶ್ವರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಜನವರಿ.04:–ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಬೀದರ ಜಿಲ್ಲೆಯಲ್ಲಿ ಕೈಗೊಂಡ ಎಲ್ಲ ಕಾಮಗಾರಿಗಳನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಎಲ್ಲ ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಬೀದರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಮ್ಮಿಕೊಂಡ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ 2018–19 ರಿಂದ 2023 ರವರೆಗೆ ವಿವಿಧ ಇಲಾಖೆಗಳಲ್ಲಿ ಕೆಕೆಆರ್‌ಡಿಬಿ ಕಾಮಗಾರಿಗಳು ಅಪೂರ್ಣ ಹಂತದಲ್ಲಿವೆ. ಮೆಕ್ರೋ ಹಾಗೂ ಮೈಕ್ರೋ ಯೋಜನೆಯ ಎಲ್ಲ ಕಾಮಗಾರಿಗಳನ್ನು ಸಂಬಂಧಿಸಿದ ಅಧಿಕಾರಿಗಳು ಈ ಮಾರ್ಚ ಒಳಗಾಗಿ ಪೂರ್ಣಗೊಳಿಸುವಂತೆ ಸಚಿವರು ಖಡಕ್ ಸೂಚನೆ ನೀಡಿದರು.

ಈವರೆಗೆ ಒಟ್ಟು 3564 ಕಾಮಗಾರಿಗಳು ಪೂರ್ಣಗೊಂಡಿದ್ದು, 708 ಕಾಮಗಾರಿಗಳು ಪ್ರಗತಿಯಲ್ಲಿವೆ. 436 ಇನ್ನು ಆರಂಭಿಸಬೇಕಿದೆಯೆಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಎಲ್ಲ ಕಾಮಗಾರಿಗಳ ಗುಣಮಟ್ಟ ಥರ್ಡ ಪಾರ್ಟಿ ಮೂಲಕ ಪರೀಕ್ಷೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಅವರಿಗೆ ಸಚಿವರು ಸೂಚಿಸಿದರು.

ವೈದ್ಯಕೀಯ ನಿರ್ದೇಶನಾಲಯಕ್ಕೆ 2020 ರಲ್ಲಿಯೇ 11 ಕೋಟಿ ನೀಡಿದ್ದು ಈವರೆಗೆ ಖರ್ಚು ಮಾಡದೇ ಇದ್ದು ಹಣ ಮರಳಿಸಲು ಪತ್ರ ಬರೆಯುವಂತೆ ಸಚಿವರು ಸೂಚಿಸಿದರು. ನಿರ್ಮಿತಿ ಕೇಂದ್ರದಿಂದ 118 ಅಂಗನವಾಡಿ ಕಾಮಗಾರಿಗಳು ಪೂರ್ಣಗೊಂಡಿದ್ದು ಉಳಿದವುಗಳು ಪ್ರಗತಿಯಲ್ಲಿವೆ.



ಶಿಕ್ಷಣ ಇಲಾಖೆಗೆ ಮೈಕ್ರೋ ಯೋಜನೆಯಡಿ 2023 ರಲ್ಲಿ 37 ಕಾಮಗಾರಿಗಳಿಗೆ 4.65 ಕೋಟಿ ರೂ. ನೀಡಲಾಗಿದ್ದು ಪೂರ್ಣಗೊಳಿಸುವಂತೆ ಸಚಿವರು ಸೂಚಿಸಿದರು.

ಜಿಲ್ಲೆಯಲ್ಲಿ ಫ್ಲೋರೈಡ್ ಹಾಗೂ ನೈಟ್ರೇಟ್ ರಸಾಯನ ಅಂಶಗಳು ಹೆಚ್ಚಿರುವ ಗ್ರಾಮಗಳ ಪಟ್ಟಿ ಮಾಡಿ ವರದಿ ಪಡೆಯುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚಿಸಲಾಯಿತು. ಅಗತ್ಯವಿದ್ದಲ್ಲಿ ಆರ್.ಓ.ಪ್ಲಾಂಟ್ ಅಳವಡಿಸಿ ಈ ರಸಾಯನಿಕ ಅಂಶಗಳು ಹೆಚ್ಚಿನ ಪ್ರಮಾಣದಲ್ಲಿದ್ದರೆ ಮಾತ್ರ ಆರ್.ಓ.ಪ್ಲಾಂಟ್‌ಗಳನ್ನು ಹಾಕಬಹುದು. ಈ ಬಗ್ಗೆ ಆರೋಗ್ಯ ಇಲಾಖೆಯಿಂದ ವರದಿ ತರಿಸಿಕೊಳ್ಳುವಂತೆ ಸಚಿವರು ಸೂಚಿಸಿದರು.

ಆರೋಗ್ಯ ಇಲಾಖೆಗೆ 11 ಅಂಬುಲೆನ್ಸಗಳನ್ನು ಒದಗಿಸಲಾಗಿದ್ದು, 11 ಚಾಲಕರನ್ನು ಸಹ ಕೆ–ಕೆಆರ್‌ಡಿಬಿ ಅಡಿ ಒದಗಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಚಿವರು ತಿಳಿಸಿದರು. ಎಲ್ಲ ಕೆಕೆಆರ್‌ಡಿಬಿ ಕಾಮಗಾರಿಗಳನ್ನು ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸುವಂತೆ ಸಚಿವರು ಸೂಚಿಸಿದರಲ್ಲದೇ ಜಿಲ್ಲಾಧಿಕಾರಿಗಳು ಹಾಗೂ ಸಿಇಓ ಈ ಕಾಮಗಾರಿಳ ಗುಣಮಟ್ಟ ಪರೀಕ್ಷಿಸುವಂತೆ ತಿಳಿಸಿದರು. ಎಸ್.ಎಸ್.ಎಲ್.ಸಿ. ಫಲಿತಾಂಶ ಹೆಚ್ಚಿಸುವ ಕ್ರಮ: ಇದೇ ಮಾರ್ಚ.21 ರಂದು ರಾಜ್ಯಾದ್ಯಂತ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಜರುಗಲಿದ್ದು, ವಿದ್ಯಾರ್ಥಿಗಳ ಫಲಿತಾಂಶ ಹೆಚ್ಚಿಸಲು ಹಾಗೂ ಜಿಲ್ಲೆಯ ರ್‍ಯಾಂಕ್ ಹೆಚ್ಚಳಕ್ಕೆ ಅಧಿಕಾರಿಗಳು ವಿಶೇಷ ಕಾಳಜಿ ವಹಿಸಿ ವಿಶೇಷ ಕಾರ್ಯಾಗಾರ ತರಬೇತಿ ತರಗತಿ ಹಮ್ಮಿಕೊಂಡ ಬಗ್ಗೆ ವಿವರಣೆ ಕೇಳಿದರು. ಡಿಡಿಪಿಐ ಮಾತನಾಡಿ ಈಗಾಗಲೇ ಎಲ್ಲ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ದಿನಕ್ಕೆರಡು ವಿಶೇಷ ತರಗತಿ, ಕಾರ್ಯಾಗಾರ ಹಮ್ಮಿಕೊಂಡು ಅಗತ್ಯವಿರುವ ಎಲ್ಲ ಪರೀಕ್ಷೆಗಳನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದರು. ಎಲ್ಲ ಉಪವಿಭಾಗಾಧಿಕಾರಿಳು ಹಾಗೂ ತಹಸೀಲ್ದಾರರು ತಮ್ಮ ವ್ಯಾಪ್ತಿಯ ಪ್ರೌಢ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವಂತೆ ಸಚಿವರು ಸೂಚಿಸಿದರು.

ಬಸವಕಲ್ಯಾಣದಲ್ಲಿ ಗೋಶಾಲೆ ನಿರ್ಮಾಣಕ್ಕೆ ಸರಕಾರವು 50 ಲಕ್ಷ ಅನುದಾನ ನೀಡಿದ್ದು ಆರಂಭಿಸುವಂತೆ ಪಶು ಸಂಗೋಪನಾ ಇಲಾಖೆ ಉಪ ನಿರ್ದೇಶಕರಿಗೆ ಸೂಚಿಸಲಾಯಿತು.

ಜಿಲ್ಲಾ ಪಂಚಯತ, ತಾಲ್ಲೂಕು ಪಂಚಾಯತ, ಗ್ರಾಮ ಪಂಚಾಯತಗಳಲ್ಲಿ 2023–24ನೇ ಸಾಲಿನ ಎಲ್ಲಾ ಯೋಜನಾ ಕಾರ್ಯಕ್ರಮಗಳನ್ನು ತಪ್ಪದೇ ಮಾರ್ಚ ಒಳಗಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸದರು. ಜಿಲ್ಲಾ ಪಂಚಾಯತನಲ್ಲಿ ಯಾವುದೇ ಕ್ರೀಯಾ ಯೋಜನೆ ಬಾಕಿ ಉಳಿಯದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳಿಗೆ ಸೂಚಿಸಿದರು. ಇಲ್ಲವಾದಲ್ಲಿ ಅಧಿಕಾರಿಗಳನ್ನೆ ಜವಾಬ್ದಾರರನ್ನಾಗಿ ಮಾಡಲಾಗುವುದೆಂದು ಸಚಿವರು ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾಇ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ವಾನತಿ ಎಂ.ಎಂ., ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಬೀದರ ಸಹಾಯಕ ಆಯುಕ್ತರಾದ ಎಂ.ಡಿ.ಶಕೀಲ್, ಬಸವಕಲ್ಯಾಣ ಸಹಾಯಕ ಆಯುಕ್ತರಾದ ಮುಕುಲ್ ಜೈನ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಡಿತರ ಆಹಾರ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 04–ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆಯ 2025ರ ಜನವರಿ ಮಾಹೆಯಲ್ಲಿ ಯಾದಗಿರಿ ಜಿಲ್ಲೆಯ ಎಎವೈ 29,136 ಪಡಿತರ ಚೀಟಿಗಳಿದ್ದು, ಪ್ರತಿ ಪಡಿತರ ಚೀಟಿಗಳಿಗೆ 21 ಕೆಜಿ ಅಕ್ಕಿ ಮತ್ತು 14 ಕೆಜಿ ಜೋಳ ಹಾಗೂ ಬಿಪಿಎಲ್ 9,13,440 ಪಡಿತರ ಸದಸ್ಯರಿದ್ದು, ಪ್ರತಿ ಪಡಿತರ ಸದಸ್ಯರಿಗೆ 3 ಕೆಜಿ ಎನ್‌ಎಫ್‌ಎಸ್‌ಎ ಅಕ್ಕಿ ಮತ್ತು 2 ಕೆಜಿ ಜೋಳ ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ಅನಿಲಕುಮರ ಡವಳಗಿ ಅವರು ತಿಳಿಸಿದ್ದಾರೆ.

2025ರ ಜನವರಿ ಮಾಹೆಯ ಆಹಾರಧಾನ್ಯ ಪಡೆಯಲು ಇಚ್ಚೆಯನ್ನು ವ್ಯಕ್ತಪಡಿಸಿರುವ ಆದ್ಯತೇತರ ಎಪಿಎಲ್ 4971 ಪಡಿತರ ಚೀಟಿಗಳಿದ್ದು, ಸದರಿ ಎಪಿಎಲ್ ಪಡಿತರ ಚೀಟಿಯ ಫಲಾನುಭವಿಗಳ ಪೈಕಿ ಏಕ ಸದಸ್ಯರ ಪಡಿತರ ಚೀಟಿಗಳಿಗೆ 5 ಕೆಜಿ ಅಕ್ಕಿ ಹಾಗೂ ಎರಡು ಮತ್ತು ಹೆಚ್ಚಿನ ಸದಸ್ಯರ ಪಡಿತರ ಚೀಟಿಗಳಿಗೆ 10 ಕೆಜಿ ಅಕ್ಕಿ ಯನ್ನು ಪ್ರತಿ ಕೆಜಿಗೆ 15ರೂ.ಗಳ ರಂತೆ ನೀಡಿ ಆಹಾರಧಾನ್ಯವನ್ನು ಪಡೆದುಕೊಳ್ಳಬೇಕು. ಜಿಲ್ಲೆಯ ಎಲ್ಲಾ 403 ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರ ಕುಟುಂಬದ ಒಬ್ಬ ಸದಸ್ಯರ ಬೆರಳಚ್ಚನ್ನು, ಬಯೋಮೆಟ್ರಿಕ್ ಪಡೆದು ಅಥವಾ ಓ.ಟಿ.ಪಿ ಮುಖಾಂತರ ಪಡಿತರ ವಿತರಿಸಲು (Point of Sale POS Shop Module) ವ್ಯವಸ್ಥೆ ಮಾಡಲಾಗಿದೆ ಕುಟುಂಬದ ಸದಸ್ಯರಿಗೆ ಲಭ್ಯವಾಗಿರುವ ಅರ್ಹತಾ ಪಡಿತರ ಚೀಟಿ ಪ್ರಕಾರ ಆಹಾರ ಧಾನ್ಯ ಪಡೆದುಕೊಳ್ಳಬೇಕು, ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆಯ ಅಡಿಯಲ್ಲಿ ಪಡಿತರ ಪಡೆದುಕೊಳ್ಳಲು ಯಾವುದೇ ದೂರು ಇದ್ದಲ್ಲಿ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕಿನ ತಹಸೀಲ್ದಾರರಿಗೆ ಹಾಗೂ ಜಿಲ್ಲಾ ಮಟ್ಟದಲ್ಲಿ ಜಿಲ್ಲೆಯ ಉಪ ನಿರ್ದೇಶಕರ ಕಛೇರಿ ದೂ.ಸಂ.08473253707 ಅಥವಾ ಸಹಾಯವಾಣಿ ಸಂ.1967 ದೂರನ್ನು ದಾಖಲಿಸಲು ಕೋರಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಣ್ಣಿನ ಉಚಿತ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ ಇಂದು

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ಸಮೀಪದ ಮೂಕಿಹಾಳ ಗ್ರಾಮದಲ್ಲಿ ಹಜರತ್ ಲಾಡ್ಲೆ ಮಶ್ಯಾಕ್ ದರ್ಗಾ ಉರುಸು ಅಂಗವಾಗಿ ಹಮ್ಮಿಕೊಂಡ ಕಣ್ಣಿನ ಉಚಿತ ತಪಾಸಣಾ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ ಇಂದು(ಜ.5) ನಡೆಯಲಿದೆ. ಅನುಗ್ರಹ ಕಣ್ಣಿನ ಆಸ್ಪತ್ರೆ ವಿಜಯಪುರ, ಅನುಗ್ರಹ ವಿಷನ್ ಫೌಂಡೇಶನ್ ಟ್ರಸ್ಟ್ ಮತ್ತು ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ ವಿಜಯಪುರ ಸಹಯೋಗದಲ್ಲಿ ಮುಂಜಾನೆ 10–00 ಘಂ–ಟೆಗೆ ಮೂಕಿಹಾಳ ಗ್ರಾಮದಲ್ಲಿ ನಡೆಯಲಿರುವ ಈ ಶಿಬಿರದಲ್ಲಿ ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ (ಚಬನೂರ) ಇವರು ಕಣ್ಣಿನ



ರೋಗಿಗಳ ತಪಾಸಣೆ ನಡೆಸಿ ಅಗತ್ಯ ಔಷಧೋಪಚಾರ ಮಾಡುವರು ಹಾಗೂ ಶಸ್ತ್ರ ಚಿಕಿತ್ಸೆ ಅಗತ್ಯವಿರುವ ರೋಗಿಗಳಿಗೆ ವಿಜಯಪುರದ ತಮ್ಮ ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಉಚಿತವಾಗಿ ಶಸ್ತ್ರಚಿಕಿತ್ಸೆ ನಡೆಸುವರು. ಈ ಶಿಬಿರದ ಸದುಪಯೋಗವನ್ನು ಸಾರ್ವಜನಿಕರು ಮಾಡಿಕೊಳ್ಳಬೇಕೆಂದು ಹಜರತ್ ಲಾಡ್ಲೆ ಮಶ್ಯಾಕ್ ಉರುಸು ಕಮೀಟಿ ಪ್ರಕಟಣೆ ತಿಳಿಸಿದೆ.

# ಶಿಕ್ಷಕರು ಮಕ್ಕಳನ್ನು ತಾಯಿ ಹೃದಯದಿಂದ ಕಾಣಿ–ವಿವೇಕಾನಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4–ಶಿಕ್ಷಕರು ಮಕ್ಕಳನ್ನು ತಾಯಿ ಹೃದಯದಿಂದ ಕಂಡಾಗ ಮಾತ್ರ ಅವರ ಕಲಿಕೆ ಪ್ರಗತಿದಾಯಕವಾಗಿರುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ ಹೇಳಿದ್ದಾರೆ.

ನಗರದ ವಿದ್ಯಾಗಿರಿಯ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ನಡೆದ ಸಾವಿತ್ರಿಬಾಯಿ ಪುಲೆ ಜಯಂತಿ ಹಾಗೂ ಶ್ರೀನಿವಾಸ ರಾಮಾನುಜನ್ ಅವರು ಗಣಿತ ಕ್ಷೇತ್ರಕ್ಕೆ ನೀಡಿದ ಗಮನಾರ್ಹ ಕೊಡುಗೆ ಸ್ಮರಿಸುವ ಕಾರ‍್ಯಕ್ರಮದಲ್ಲಿ ಸಾವಿತ್ರಿಬಾಯಿ ಫುಲೆ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಶಾಲೆಗಳಿಗೆ ಭೇಟಿ ನೀಡುವುದೆಂದರೆ ತೀರ್ಥ ಕ್ಷೇತ್ರಗಳಿಗೆ ಭೇಟಿ ನೀಡಿದ ಅನುಭವವಾಗಿ ಮನಸ್ಸಿಗೆ ಸಂತಸವುಂಟಾಗುತ್ತದೆ ಎಂದ ವಿವೇಕಾನಂದ, ವಿದ್ಯಾರ್ಥಿಗಳು ನಿಜವಾದ ದೇವರು. ಅವರನ್ನು ಕಾಣುವುದೇ ಒಂದು ಸೌಭಾಗ್ಯ. ಶಿಕ್ಷಕರು ಉತ್ತಮ ಸಮಾಜ ನಿರ್ಮಾಣದ ಗುರಿ ಸಾಧಿಸಲು ಕಟಿಬದ್ಧರಾಗಿ ಕಾರ್ಯನಿರ್ವಹಿಸಬೇಕು ಎಂದರು.

ಶಿಕ್ಷಕಿ ರಶ್ಮಿ ದೇಶಪಾಂಡೆ, ಗಣಿತ ವಿಷಯಕ್ಕೆ ಸಂಬಂಧಿಸಿದ ಕ್ಷೇತ್ರಗಳಲ್ಲಿ ವೃತ್ತಿ ಜೀವನವನ್ನು ಮುಂದುವರಿಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು. ಮಕ್ಕಳಲ್ಲಿ ಗಣಿತದ ಬಗ್ಗೆ ಇರುವ ಭಯ ಹೋಗಲಾಡಿಸಲು ಚಟುವಟಿಕೆಯುಕ್ತ ಮೇಳಗಳ ಆಯೋಜನೆ ಅವಶ್ಯಕವಾಗಿದೆ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಕ್ಷೇತ್ರ ಸಮನ್ವಯಾಧಿಕಾರಿ ಎಚ್.ಕೆ.ಗುಡೂರ, ನಗರಸಭೆ ಸದಸ್ಯ ವಿ.ವಿ.ಸಿರಗನ್ನವರ, ಜಿಲ್ಲಾ ಎಸ್ಸಿ,ಎಸ್.ಟಿ.ನೌಕರರ ಸಂಘದ ಅಧ್ಯಕ್ಷ ಲಕ್ಷ್ಮಣ ಯಂಕಂಚಿ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾ ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ, ಇ.ಸಿ.ಓ ಪಿ.ಬಿ.ಪಾಟೀಲ, ಶಾಲೆಯ ಮುಖ್ಯಗುರು ಶರಣಪ್ಪ ಬೇವೂರ, ಪ್ರೌಢಶಾಲಾ ಮುಖ್ಯಗುರುಮಾತೆ ಗೀತಾ ಕೋತ, ಬಿಆರ್‌ಪಿ ಆರ್.ಆರ್.ದೇಸಾಯಿ, ಸಿಆರ್‌ಪಿ ಮುತ್ತು ಬಳ್ಳಾ, ಬಿ.ಟಿ.ಡಿ.ಎ ಶಾಲೆಯ ಮಕ್ಕಳು, ಪೋಷಕರು. ಎಸ್.ಡಿ.ಎಂ.ಸಿ. ಅಧ್ಯಕ್ಷರು. ಸದಸ್ಯರು ಉಪಸ್ಥಿತರಿದ್ದರು.

# ಫೆ.22ರಿಂದ ಮೂರು ದಿನ ರನ್ನ ವೈಭವ ಆಚರಿಸಲು ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4–ಹಲವು ವರ್ಷಗಳಿಂದ ಸ್ಥಗಿತಗೊಂಡಿ–ದ್ದ ಮುಧೋಳ ರನ್ನ ವೈಭವ–2025ನ್ನು ಇದೇ ಫೆಬ್ರವರಿ 22, 23 ಹಾಗೂ 24 ಮೂರು ದಿನಗಳ ಕಾಲ ಹಮ್ಮಿಕೊಳ್ಳಲು ಜಿಲ್ಲಾಡಳಿತ ನಿರ್ಧರಿಸಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರನ್ನ ವೈಭವ ಆಚರಣೆ ಕುರಿತಂತೆ ಶನಿವಾರ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರನ್ನ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿಯಾಗಿ ರನ್ನ ವೈಭವ–2025ನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದೆ. ಕಾರ್ಯಕ್ರಮದ ರೂಪುರೇಷೆ ತಯಾರಿಸಲು ವಿವಿಧ ರೀತಿಯ ಸಮಿತಿಗಳನ್ನು ರಚಿಸಲಾಗುತ್ತಿದ್ದು, ಪ್ರತಿಯೊಂದು ಸಮಿತಿಯವರು ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸಲು ತಿಳಿಸಿದರು.

ರನ್ನ ವೈಭವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ಕ್ರೀಡೆಗಳನ್ನು ಸಹ ಆಯೋಜನೆ ಮಾಡಲಾಗುತ್ತಿದೆ. ಅಧಿಕಾರಿಗಳು ತಮಗೆ ಯಾವುದರ ಮೇಲೆ ಆಸಕ್ತಿ ಇರುವುದು ಅಂತಹ ಸಮಿತಿಗಳಲ್ಲಿ ತೊಡಗಿಸಿಕೊಂಡು ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಲು ಸನ್ನದ್ದರಾಗಬೇಕು. ಆಚರಣೆ ಸಂಬಂಧಿಸಿದಂತೆ ಸಾಂಸ್ಕೃತಿಕ ಕಾರ್ಯಕ್ರಮ, ಕವಿಗೋಷ್ಠಿ, ವಿಚಾರಗೋಷ್ಠಿ ಸೇರಿದಂತೆ ಇತರೆ ವಿಷಯಗಳ ಕುರಿತು ಸಾರ್ವಜನಿಕರು, ಕಲಾ ಆಸಕ್ತರು, ತಮ್ಮ ಅಭಿಪ್ರಾಯಗಳನ್ನು ತಿಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಾನಕಿ ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಜಶೇಖರ ಪಟ್ಟಣಶೆಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಆಯಾ ತಾಲೂಕಿನ ತಹಶೀಲ್ದಾರರು ಉಪಸ್ಥಿತರಿದ್ದರು.

# ಪ್ರಾರ್ಥನಾ ಮಂದಿರ ಕಟ್ಟಡ ಪರವಾನಿಗೆ ರದ್ದುಗೊಳಿಸಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4–ನವನಗರದ ಸೆಕ್ಟರ್ ನಂ.16 ರಲ್ಲಿ ಜನವಸತಿ ಪ್ರದೇಶದಲ್ಲಿ ಅಕ್ರಮವಾಗಿ ನಿರ್ಮಾಣಗೊಳ್ಳುತ್ತಿರುವ ಪ್ರಾರ್ಥನಾ ಮಂದಿರದ ಕಟ್ಟಡ ಪರವಾನಿಗೆಯನ್ನು ರದ್ದುಗೊಳಿಸಬೇಕೆಂದು ಹಿಂದು ಜಾಗರಣಾ ವೇದಿಕೆ ಆಗ್ರಹಿಸಿದೆ.

ಶನಿವಾರ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಕಚೇರಿ ಎದುರು ಪ್ರತಿಭಟನೆ ನಡೆಸಿದ ವೇದಿಕೆಯ ಕಾರ್ಯಕರ್ತರು, ಜನವಸತಿ ಪ್ರದೇಶದಲ್ಲಿ ವಸತಿ ಉದ್ದೇಶಕ್ಕಾಗಿ ಹಂಚಿಕೆಯಾಗಿರುವ ಸ್ಥಳದಲ್ಲಿ ಅಕ್ರಮವಾಗಿ ಪ್ರಾರ್ಥನಾ ಮಂದಿರ ಆರಂಭಿಸಿದ್ದು ತಕ್ಷಣವೇ ಅದರ ಪರವಾನಿಗೆಯನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು.

ಇದರಿಂದ ಸೆಕ್ಟರ್ ನಂ.16 ರ ನಿವಾಸಿಗಳಿಗೆ ತೊಂದರೆಯಾಗಲಿದೆ. ಅಲ್ಲಿಯ ನಿವಾಸಿಗಳು ಈಗಾಗಲೇ ಪ್ರಾಧಿಕಾರಕ್ಕೆ ತಿಳಿಸಿದ್ದು ತಕ್ಷಣವೇ ಎಲ್ಲ ಕೆಲಸಗಳನ್ನು ಸ್ಥಗಿತಗೊಳಿಸಬೇಕು. ನಿವಾಸಿಗಳಿಗೆ ತೊಂದರೆ ಉಂಟಾಗದಂತೆ ಪ್ರಾಧಿಕಾರವು ನೋಡಿಕೊಳ್ಳಬೇಕು. ಒಂದು ವೇಳೆ ಪ್ರಾರ್ಥನಾ ಮಂದಿರ ನಿರ್ಮಾಣವಾದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾ ಗುವುದು ಎಂದು ಎಚ್ಚರಿಸಿದರು.

ಬಿಟಿಡಿಎ ಮುಖ್ಯ ಇಂಜನಿಯರಿಗೆ ಮನವಿ ಪತ್ರ ಸಲ್ಲಿಸಿದರು. ಈ ವೇಳೆ ವೇದಿಕೆಯ ಪ್ರಮುಖರಾದ ಕುಮಾರಸ್ವಾಮಿ ಹಿರೇಮಠ, ಮನೋಜ ಅಗರವಾಲ್, ನಾಗೇಶ ಅಂಬಿಗೇರ, ನಗರಸಭೆ ಸದಸ್ಯ ಶಿವಬಸಪ್ಪ ಬಳ್ಳಾರಿ, ಚಂದ್ರು ರಾಮೋಡಗಿ, ಶಿವಾಜಿ ಪವಾರ, ಪಂಕಜ ನಿಕ್ಕಂ, ಹಣಮಂತ ಲೋಕಾಪೂರ, ಪ್ರಜ್ವಲ್ ಸಣ್ಣಕ್ಕಿ, ಪ್ರಶಾಂತ ನಾಯಕ ಸೇರಿದಂತೆ ಅನೇಕರು ಇದ್ದರು.

# ಎಲ್ಲಾ ಸೇವೆಗಳಿಗಿಂತ ಶಿಕ್ಷಕ ವೃತ್ತಿ ಸಾರ್ಥಕ ಸೇವೆ:ಡಿಡಿಪಿಐ ಪ್ರಸನ್ನಕುಮಾರ



ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)

ಕಮಲನಗರ:ಎಲ್ಲಾ ಸೇವೆಗಳಿಗಿಂತ ಶಿಕ್ಷಕ ವೃತ್ತಿ ಸಾರ್ಥಕ ಸೇವೆ, ಈ ಸೇವೆಯಿಂದ ನಾವು ಒಂದು ಜನಾಂಗವನ್ನು ಉತ್ತಮ ಶಿಕ್ಷಣ ನೀಡಿ ಅವರ ಜೀವನವನ್ನು ರೂಪಿಸುತ್ತೇವೆ ಎಂದು ಎಸ. ಎಲ್. ಪ್ರಸನ್ನ ಕುಮಾರ (ಡಿ.ಡಿ.ಪಿ.ಐ) ಉಪನಿರ್ದೇಶಕರು ಶಾ.ಶಿ ಮತ್ತು ಸಾ.ಇ ಬೀದರ, ಅವರು ಹೇಳಿದರು.

ತಾಲೂಕಿನ ಖತಗಾಂವ ಗ್ರಾಮದ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಸೂರ್ಯಕಾಂತ ಮಹಾಜನ ಅವರ ಸೇವಾ ನಿವೃತ್ತಿ ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದರು.

ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಅರೆತು ಕಾರ್ಯ ಮಾಡಿದರೆ. ಸಮಾಜಕ್ಕೆ ಒಂದು ದೊಡ್ಡ ಕಾಣಿಕೆ ನೀಡಬಹುದು. ಏನು ಇಲ್ಲಾದವನ್ನ ಏನೆಲ್ಲಾ ಮಾಡುವ ಶ್ರೇಷ್ಠ ವೃತ್ತಿ ಶಿಕ್ಷಕರ ವೃತ್ತಿ ಎಂದು ಹೇಳಿದರು.

ಗುರುಬಸವ ಪಟ್ಟದ್ದೇವರು ದಿವ್ಯಾ ನೇತೃತ್ವ ವಹಿಸಿ ಮಾತನಾಡಿದರು, ಮಕ್ಕಳ ಅಂಕು ಡೊಂಕುಗಳನ್ನು ತಿದ್ದು ಸನ್ಮಾರ್ಗದಲ್ಲಿ ಕೊಂಡೋಯುವ ಕ್ಷೇತ್ರ ಯಾವುದಾದರು ಇದ್ದರೆ ಇದು ಶಿಕ್ಷಣಕ್ಷೇತ್ರ ಮಾತ್ರ ಎಂದು ಹೇಳಿದರು. ಅನೇಕ ಉದಾಹರಣೆಗಳ ಮೂಲಕ ಶಿಕ್ಷಕರ ಮಹತ್ವ ಮತ್ತು ಘನತೆ ಬಗ್ಗೆ ಹೇಳಿದರು.

ಗ್ರಾಮದ ಬೀದಿ ಬೀದಿಗಳ ಮೂಲಕ ಭಜಾ ಭಜಂತ್ರಿ, ಮಕ್ಕಳ ಲೇಜಿಮ್, ಡೆಮಬಲ್ಸ್ ಕುಣಿತ ಜೊತೆ ಗ್ರಾಮಸ್ಥರು ತಮ್ಮೂರಿನಲ್ಲಿ 13 ವರ್ಷ (ಒಟ್ಟು 26 ವರ್ಷ) ಸೇವೆ ನೀಡಿರುವ ಶಿಕ್ಷಕನಿಗೆ ಅತುನ್ನತ ಗೌರವ ನೀಡಿದರು. ನಂತರ ಶಾಲೆಯಲ್ಲಿ ಆಯೋಜನೆ ಮಾಡಿದ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಕಾರ್ಯಕ್ರಮದಲ್ಲಿ ಶಿಕ್ಷಣಕ್ಷೇತ್ರ ಅಧಿಕಾರಿಗಳು ಮತ್ತು ತಾಲೂಕಿನ ಅನೇಕ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರ ಬಂದು, ತಮ್ಮ ವೃತ್ತ ಬಂದಾವರ ನಿವೃತ್ತಿಗೆ ಗೌರವ ಸನ್ಮಾನ ಮಾಡಿ ತಮ್ಮ ಆತ್ಮೀಯತೆ ಎತ್ತಿ ತೋರಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ತುರೆ ಉಪನ್ಯಾಸಕರು ಡಯಟ್ ಬೀದರ, ಗೋವಿಂದ ರೆಡ್ಡಿ ಉಪನ್ಯಾಸಕರು ಡಯಟ್ ಬೀದರ, ಕುಶಾಲ್ ರಾವ ಯರನಾಳೆ ಉಪನ್ಯಾಸಕರು ಡಯಟ ಬೀದರ, ಸುನಿಲಕುಮಾರ ಕಸ್ತೂರೆ ಅಧ್ಯಕ್ಷರು ಸರಕಾರಿ ನೌಕರರ ಸಂಘ ಕಮಲನಗರ, ಬಸವರಾಜ ಪಾಟೀಲ, ರಾಮ್ ರಾವ ತೆಗಂಪುರೆ, ರಮೇಶ ಬಿರಾದಾರ, ಸಂಗೀತ ಸಜ್ಜನಶೆಟ್ಟಿ, ರಾಜಕುಮಾರ ಹಲಮಂಡಗೆ, ರಾಜಕುಮಾರ ವಡಗಾಂವೆ, ರೇಖಾ ಮಹಾಜನ, ಮಹಾದೇವ ಮಡಿವಾಳ, ಕೇದಾರನಾಥ, ಮಹಾದೇವ ಬಿರಾದಾರ, ಹಿರಿಯರಾದ ಮಲ್ಲಿಕಾರ್ಜುನ ಧರಣೆ ಸೇರಿದಂತೆ ಅನೇಕರು ಇದ್ದರು.

# ಸಂಗೋಳಗಿ ಪಿಕೆಪಿಎಸ್ ಚುನಾವಣೆಯಲ್ಲಿ ವಿಜೇತರಿಗೆ ಪ್ರಮಾಣ ಪತ್ರ ಹಾಗೂ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್ ಜ 04: ಬೀದರ್ ತಾಲೂಕಿನ ಸಂಗೋಳಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ಆಡಳಿತ ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಯ ವಿಜೇತರಾದವರಿಗೆ ಅಭ್ಯರ್ಥಿಗಳಿಗೆ ಗುರುವಾರ ಸಂಘದ ಕಛೇರಿಯಲ್ಲಿ ಸನ್ಮಾನಿಸಿ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಈ ಚುನಾವಣೆಯಲ್ಲಿ 12 ಸ್ಥಾನಗಳಲ್ಲಿ ಸಾಲಗಾರರ ಮತ ಕ್ಷೇತ್ರ ಎಸ್ ಸಿ ಕ್ಷೇತ್ರದಲ್ಲಿ ವೈಜಿನಾಥ ದಳಪತಿ, ಎಸ್ ಟಿಯಲ್ಲಿ ಈರಮ್ಮ ಗಂಡ ಲಕ್ಷ್ಮಣ ಅಲ್ಲುರೆ, 2ಎ ಯಲ್ಲಿ ಮಹೇಬುಬ್ ಸಾಬ್ ಬಂಬುಳಗಿ, ಸಾಮಾನ್ಯ ಮಹಿಳೆಯ ಎರಡು ಸ್ಥಾನಗಳಲ್ಲಿ ಮಹಾದೇವಿ ಗಂಡ ಶಾಮರಾವ್ ಮಂಡಗಿ, ಮಂಜುಳಾ ಗಂಡ ಭಾನುದಾಸ್ ಮಳೆಗಾರ, ಹಾಗೂ ಸಾಮಾನ್ಯ ಪುರುಷರಲ್ಲಿ ಐದು ಸ್ಥಾನಗಳಲ್ಲಿ ಭಿಮಣ್ಣಾ ಬಸವಣಪ್ಪಾ ಗುತ್ತಿ, ವಿಶ್ವನಾಥ ತಂದೆ ವೀರಭದ್ರಪ್ಪಾ ಮುಸ್ತರಿ, ಸಿದ್ದಪ್ಪಾ ತಂದೆ ರಾಚಪ್ಪಾ ಕಟಗಿ, ಬಸಪ್ಪಾ ಅಣ್ಣೆಪ್ಪಾ ಬಾವಗಿ, ವಿಶ್ವನಾಥ ತಂದೆ ವೀರಭದ್ರಪ್ಪಾ ಬಿರಾದಾರ ನೆಲವಾಡ, ಹಾಗೂ ಸಾಮಾನ್ಯ 3ಬಿ ಯಲ್ಲಿ ರಾಜಕುಮಾರ ತಂದೆ ಕಾಶಿನಾಥ್ ಬಾವಗಿ ಅವಿರೋಧವಾಗಿ ಆಯ್ಕೆ ಆಗುವ ಮೂಲಕ ಅಭೂತಪೂರ್ವ ಗೆಲವು ಪಡೆದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸದಸ್ಯರಾಗಿದ್ದಾರೆ, ಅದೇ ರೀತಿಯಾಗಿ ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದ ಒಂದು ಸ್ಥಾನದಲ್ಲಿ ಶಿವಕುಮಾರ ತಂದೆ ಶೇಶಿಧರ ಹಿಂದಾ ಗೆಲುವು ಪಡೆದು–ಕೊಂಡಿದ್ದಾರೆ, ಇವರೆಲ್ಲರಿಗೂ ಚುನಾವಣಾಧಿಕಾರಿಗಳಾದ ಶಿಲ್ಪಾ ಬಸವರಾಜ ಹಾಗೂ ಕಾರ್ಯದರ್ಶಿ ರಾಮಲಿಂಗ್ ಸನ್ಮಾನಿಸಿ ಪ್ರಮಾಣ ಪತ್ರ ವಿತರಣೆ ಮಾಡಿದರು.

# ಪ್ರೊ. ಬಿ. ಕೃಷ್ಣಪ್ಪನವರ ಸ್ಥಾಪಿಸಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಶಹಾಪುರ ಸಾವಿತ್ರಿಬಾಯಿ ಫುಲೆ ಜಯಂತೋತ್ಸವ.

ಮಲ್ಲಮ್ಮ ನುಡಿ ವಾರ್ತೆ

ಶಾಹಪೂರ: ಅಕ್ಷರದ ಬೀಜ ಬಿತ್ತಿದ ದೇವತೆ ಆ ತಾಯಿಗೆ ಶುಭಾಶಯಗಳನ್ನು ಕೋರುತ್ತಾ, ಭಾರತದ ಮೊದಲ ಮಹಿಳಾ ಶಿಕ್ಷಕಿ ಮತ್ತು ಸಮಾಜ ಸುಧಾರಕಿ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನವನ್ನು

ಸಮಾಜದ ಎಲ್ಲಾ ವರ್ಗದ ಜನರಿಗೆ, ವಿಶೇಷವಾಗಿ ಮಹಿಳೆಯರಿಗೆ ಮತ್ತು ಹಿಂದುಳಿದ ವರ್ಗದ ಜನರಿಗೆ ಶಿಕ್ಷಣದ ಬೆಳಕನ್ನು ತೋರಿಸಿದ ಮಹಾನ್ ವ್ಯಕ್ತಿತ್ವ ಇವರು. ಬಾಲ್ಯ ವಿವಾಹ, ಸತಿ ಸಹಗಮನ ಮುಂತಾದ ಕುರಿತು ಜಾಗೃತಿ ಮೂಡಿಸಿ, ಸಮಾಜದಲ್ಲಿ ಸಮಾನತೆಯನ್ನು ಸ್ಥಾಪಿಸಲು ಅವಿರತವಾಗಿ ಶ್ರಮಿಸಿದರು.



ಸಾವಿತ್ರಿಬಾಯಿ ಫುಲೆ ಅವರು ಸ್ಥಾಪಿಸಿದ ಶಾಲೆಗಳು ಅನೇಕ ಮಹಿಳೆಯರ ಜೀವನವನ್ನು ಬದಲಾಯಿಸಿದವು. ಅವರ ಕೊಡುಗೆಯನ್ನು ನೆನಪಿಸಿಕೊಂಡು, ನಾವೆಲ್ಲರೂ ಶಿಕ್ಷಣದ ಮಹತ್ವವನ್ನು ಅರಿತುಕೊಳ್ಳಬೇಕು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಶಹಪುರ್ ತಾಲೂಕ ಸಂಚಲಕರಾದ ಬಸವರಾಜ ನಾಟೆಕಾರ್ ರವರು ಮಾತನಾಡಿದರು. ಈ ಸಂದರ್ಭದಲ್ಲಿ ದಲಿತ ಸೇನೆ ವಿದ್ಯಾರ್ಥಿ ಒಕ್ಕೂಟ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಟಿ ರಂಗನಾಥ್ ಗುಂಡಗುರ್ಕಿ ಮತ್ತು ದಲಿತ ಸಂಘರ್ಷ ಸಮಿತಿ ಯಾದಗಿರಿ ಜಿಲ್ಲಾ ಸಂಚಾಲಕರಾದ ಹಂಪಮ್ಮ ಹುಲಿಮನಿ ಶಹಪುರ್ ಸಂಘಟನಾ ಸಂಚಾಲಕರಾದ ಶರಣಪ್ಪ ಮದ್ರಿಕಿ ಭೀಮರಾಯ ಸೈದಾಪುರ್ ಭೀಮರಾಯ ರಾಜಪುರ್ ಕರ್ನಾಟಕ ದಲಿತ ಸಂಘಟ ಸಮಿತಿ ಇನ್ನೂ ಕಾರ್ಯಕರ್ತರು ಭಾಗವಹಿಸಿದ್ದರು

# ಕಾರ್ಮಿಕರ ಕಲ್ಯಾಣಕ್ಕಾಗಿ ವಿವಿಧ ಯೋಜನೆ:ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4:ಬಡ ಕಟ್ಟಡ ಕಾರ್ಮಿಕರು ಸೇರಿದಂತೆ ಅಸಂಘಟಿತ ಕಾರ್ಮಿಕರ ಅಭ್ಯುದಯಕ್ಕೆ ಸರ್ಕಾರ ಅನೇಕ ಯೋಜನೆಗಳನ್ನು ರೂಪಿಸಿ ಅವರ ಬದುಕಿಗೆ ಆಸರೆ ನೀಡುತ್ತಿದೆ ಎಂದು ಶಾಸಕ ಎಚ್.ವಾಯ್.ಮೇಟಿ ಹೇಳಿದ್ದಾರೆ.

ತಾಲೂಕಿನ ಶಿರೂರ ಪಟ್ಟಣದಲ್ಲಿನೂತನವಾಗಿಅಸ್ತಿತ್ವಕ್ಕೆ ಬಂದಿರುವ ಸಿದ್ಧಲಿಂಗೇಶ್ವರ ಕಟ್ಟಡ ಮತ್ತು ಇತರೆ ನಿರ್ಮಾಣ ಹಾಗೂ ಅಸಂಘಟಿತ ಕಾರ್ಮಿಕರ ಸಂಘವನ್ನು ಉದ್ಘಾಟಿಸಿ ಮಾತನಾಡಿದ ಅವರು,ಈಗಾಗಲೇ ರಾಜ್ಯದ ಅನೇಕ ಕಾರ್ಮಿಕರಿಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಅನೇಕ ಯೋಜನೆಗಳನ್ನು ನೀಡುವ ಮೂಲಕ ಅವರ ಜೀವನಕ್ಕೆ ನೆರವಾಗಿದೆ. ಕಾರ್ಮಿಕರು ಸಂಘದಲ್ಲಿ ಜೀವಾತಾವಧಿವರೆಗೆ ಸದ್ಯಸತ್ವ ಪಡೆದು ಸರಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಅತಿಥಿಯಾಗಿ ಮಾತನಾಡಿದ ಕಾರ್ಮಿಕ ನಿರೀಕ್ಷಕ ರಮೇಶ ಸಿಂದಗಿ, ಈಗಾಗಲೇ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅರ್ಹತೆ ಪ್ರಕಾರ ಧನಸಹಾಯ ನೀಡಲಾಗುತ್ತಿದ್ದು, ಪಿಂಚಣಿ, ಕುಟುಂಬ ಪಿಂಚಣಿ, ಹೆರಿಗೆ ಸೌಲಭ್ಯ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ,ಮದುವೆ ಸಹಾಯಧನ, ತಾಯಿ ಮಗು ಸಹಾಯ ಹಸ್ತದ ಸೌಲಭ್ಯಗಳನ್ನು ನೋಂದಯಿತ ಫಲಾನುಭವಿಗಳಿಗೆ ನೀಡಲಾಗುತ್ತಿದ್ದು ಕಾರ್ಮಿಕರು ಕಡ್ಡಾಯವಾಗಿ ನೊಂದಣಿ ಮಾಡಿ ಯೋಜನೆಗಳನ್ನು ಪಡೆದುಕೊಳ್ಳಬೇಕೆಂದರು.

ಸಾನ್ನಿಧ್ಯವಹಿಸಿ ಮಾತನಾಡಿದ ಶಿವಯೋಗಾಶ್ರಮದ ಸಿದ್ಧಲಿಂಗ ಸ್ವಾಮೀಜಿ, ಕಟ್ಟಡ ಕಾರ್ಮಿಕರು ನಿತ್ಯ ಶ್ರಮಜೀವಿಗಳಾಗಿ ತಮ್ಮ ಕಾಯಕವನ್ನು ನಿಷ್ಠೆಯಿಂದ ನಿರ್ವಹಿಸುವ ಮೂಲಕ ಮತ್ತೊಬ್ಬರಿಗೆ ಆಶ್ರಯಧಾತರಾಗಿದ್ದಾರೆ.ಕಾರ್ಮಿಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್‌ಕಾರ್ಡ್ ಹಾಗೂ 7 ಜನ ಬಡಕಾರ್ಮಿಕರ ಮಕ್ಕಳಿಗೆ 60 ಸಾವಿರ ರೂಪಾಯಿ ಸಹಾಯಧನದ ಪ್ರಮಾಣ ಪತ್ರವನ್ನು ಶಾಸಕರು ವಿತರಿಸಿದರು.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಮಾಜಿ ಅಧ್ಯಕ್ಷ ರಂಗಪ್ಪ ಮಳ್ಳಿ, ಪಟ್ಟಣ ಪಂಚಾಯತಿ ನಾಮನಿರ್ದೇಶಿತ ಸದಸ್ಯರಾದ ಜಗದೀಶ ದೇಸಾನಿ, ಹನಮಂತ ಆಡಿನ, ಸಿದ್ದಪ್ಪ ಗಾಳಿ, ಚಂದ್ರಶೇಖರ ಪಾತ್ರೋಟಿ, ಪಿಕೆಪಿಎಸ್ ಅಧ್ಯಕ್ಷ ಮುದುಕಪ್ಪ ಬಿಲ್ಲಾರ, ತಾ.ಪಂ ಮಾಜಿ ಸದಸ್ಯ ಸಿದ್ದಪ್ಪ ಕೋಟಿಕಲ್, ಬಸವರಾಜ ಕೊಣ್ಣೂರ, ಸಂಘದ ಹನಮಂತ ಅಂಬಿಗೇರ, ಮಲ್ಲಪ್ಪ ಗಿಡ್ಡಪ್ಪನವರ, ಮೈಬೂಸಾಬ ಮುಲ್ಲಾ, ಶೇಖಪ್ಪ ಹೂಗಾರ ಸೇರಿದಂತೆ ಸರ್ವ ಪದಾಧಿಕಾರಿಗಳು ಇದ್ದರು.

# ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಲಿ; ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಜ.4:ಕ್ಷೇತ್ರದ ಎಲ್ಲ ಶಾಲೆಗಳಿಗೆ ಸಿಸಿಟಿವಿ, ಎಲ್‌ಇಡಿ ಟಿವಿ, ಶುದ್ಧ ಕುಡಿಯುವ ನೀರಿನ ಘಟಕ, ಆಟದ ಸಾಮಗ್ರಿಗಳು ಹಾಗೂ ಎಲ್ಲ ರೀತಿಯ ಸೌಕರ್ಯಗಳನ್ನು ಕಲ್ಪಿಸುತ್ತಿದ್ದೇನೆ ಆದರೆ ಮಕ್ಕಳ ದಾಖಲಾತಿ ಏಕೆ ಹೆಚ್ಚುತ್ತಿಲ್ಲ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಕಳವಳ ವ್ಯಕ್ತಪಡಿಸಿದರು.

ಅಧಿಕಾರಿಗಳ ತಂಡದೊಂದಿಗೆ ಜ.4ರಂದು ಔರಾದ(ಬಿ) ತಾಲ್ಲೂಕಿನ ಇಟಗ್ಯಾಳ, ನಾಗನಪಲ್ಲಿ, ಚಿಂತಾಕಿ, ಬೆಲ್ದಾಳ, ಗುಡಪಳ್ಳಿ, ಮೆಡಪಳ್ಳಿ, ಸುಂಕನಾಳ, ಉಜನಿ ಹಾಗೂ ಚಿಕ್ಲಿ(ಜೆ)ನಲ್ಲಿ ಗ್ರಾಮ ಸಂಚಾರ ನಡೆಸಿ ಶಾಲೆ, ಅಂಗನವಾಡಿ ಕೇಂದ್ರ, ಸರ್ಕಾರಿ ಆಸ್ಪತ್ರೆಗಳನ್ನು ಪರಿಶೀಲಿಸಿದರು.

ಶಾಸಕರು ಭೇಟಿ ನೀಡಿದ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಸಂಖ್ಯೆ ಮತ್ತು ಹಾಜರಾತಿ ವಿವರಗಳನ್ನು ಪಡೆದರು. ಬಹುತೇಕ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಿರುವುದು ಕಂಡು ತೀವ್ರ ಬೇಸರಗೊಂಡರು. ಶಿಕ್ಷಕರು ಸರಿಯಾಗಿ ಕೆಲಸ ಮಾಡಬೇಕು. ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ಪ್ರಯತ್ನಿಸಬೇಕು. ಪಠ್ಯ ಚಟುವಟಿಕೆಗಳು ಸರಿಯಾಗಿ ನಡೆಯಬೇಕು. ಶಿಕ್ಷಣ ಸರಿಯಿದ್ದಲ್ಲಿ ಹಾಜರಾತಿ ಹೆಚ್ಚಳ ಸಾಧ್ಯ. ಹಾಗಾಗಿ ಶಿಕ್ಷಕರು ಜವಾಬ್ದಾರಿಯಿಂದ ಕೆಲಸ ಮಾಡಬೇಕೆಂದು ನಿರ್ದೇಶನ ನೀಡಿದರು.

ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ, ಆಟದ ಸಾಮಗ್ರಿಗಳ ಬಗ್ಗೆ ಮಾಹಿತಿ ಪಡೆದರು. ಕೆಲವು ಶಾಲೆಗಳಲ್ಲಿ ಎ???ಡಿ ಟಿವಿ, ವಾಟರ್ ಫಿಲ್ಟರ್, ಆಟದ ಸಾಮಗ್ರಿ ಬಂದಿಲ್ಲ ಎನ್ನುವ ಉತ್ತರ ಬಂದಾಗ ಶಿಕ್ಷಣ ಅಧಿಕಾರಿಗಳ ವಿರುದ್ದ ಶಾಸಕರು ಕೆರಳಿದರು.

ಡಿಜಿಟಲ್ ಟಿವಿ ಹಾಗೂ ಮತ್ತಿತರರ ಸಾಮಗ್ರಿಗಳು ಇನ್ನು ಎಲ್ಲ ಶಾಲೆಗಳಿಗೆ ಏಕೆ ಹೋಗಿಲ್ಲವೆಂದು ಅಧಿಕಾರಿಗಳಿಗೆ ಪ್ರಶ್ನಿಸಿದರು. ಗುತ್ತಿಗೆದಾರರು ಕಳಪೆ ಸಾಮಗ್ರಿ ಪೂರೈಸುವ ಸಾಧ್ಯತೆ ಇರುವುದರಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುತುವರ್ಜಿ ವಹಿಸಿ ಕೆಲಸ ಮಾಡಬೇಕು. ಕಲಿಕಾ ಸಾಮಗ್ರಿ ಎಷ್ಟು ಶಾಲೆಗಳಿಗೆ ತಲುಪಿವೆ ? ಎಷ್ಟು ಶಾಲೆಗಳು ಉಳಿದಿವೆ ಎನ್ನುವ ಮಾಹಿತಿ ಪಡೆದು ಗುಣಮಟ್ಟದ ಸಾಮಗ್ರಿ ಪೂರೈಕೆಯಾಗುವಂತೆ ನೋಡಿಕೊಳ್ಳಬೇಕೆಂದು ನಿರ್ದೇಶನ ನೀಡಿದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಿದ್ದು, ಉತ್ತಮ ಕಟ್ಟಡ, ಕಂಪೌಂಡ್ ಗೋಡೆ, ಆಟದ ಮೈದಾನ, ವಾಟರ್ ಫಿಲ್ಟರ್, ಡಿಜಿಟಲ್ ಟಿವಿ, ಸೋಲಾರ್ ಪೆನಲ್, ಕಂಪ್ಯೂಟರ್ ಸೇರಿದಂತೆ ಎಲ್ಲ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ. ಇನ್ನು ಬೇಡಿಕೆಗಳಿದ್ದಲ್ಲಿ ಪೂರೈಸುವೆ. ಆದರೆ ಶಿಕ್ಷಣದ ಅಭಿವೃದ್ಧಿಗೆ ಶ್ರಮಿಸಬೇಕೆಂದು ಶಿಕ್ಷಕರಿಗೆ ತಿಳಿಸಿದರು.

ಆಹಾರ ಸಾಮಗ್ರಿ ಪರಿಶೀಲನೆ: ಮೆಡಪಳ್ಳಿ ಹಾಗೂ ಮತ್ತಿತರೆ ಗ್ರಾಮಗಳಲ್ಲಿನ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ನೀಡಲಾಗುತ್ತಿರುವ ಆಹಾರ ಸಾಮಗ್ರಿಗಳನ್ನು ಪರಿಶೀಲಿಸಿದರು. ಕಳಪೆ ಮಟ್ಟದ ಅಕ್ಕಿ, ಬೆಲ್ಲವನ್ನು ಕಂಡು ಸಣ್ಣ ಪುಟ್ಟ ಮಕ್ಕಳಿಗೆ ಇಂತಹ ಆಹಾರ ತಿನ್ನಿಸುತ್ತೀರಾ ? ಎಂದು ಸಿಡಿಪಿಓಗೆ ಪ್ರಶ್ನಿಸಿದರು. ಅಂಗನವಾಡಿಗಳಿಗೆ ಸರಿಯಾದ ಆಹಾರ ಪೂರೈಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಶಾಸಕರು ಎಲ್ಲ ಗ್ರಾಮಗಳಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಕೆಲವು ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿದರು. ಗ್ರಾಮಸ್ಥರು ಸಲ್ಲಿಸಿದ ಬೇಡಿಕೆಗಳನ್ನು ಆದ್ಯತೆಗೆ ಅನುಗುಣ ಹಂತ ಹಂತವಾಗಿ ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಆರೋಗ್ಯ ತಪಾಸಣೆ: ಚಿಂತಾಕಿ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ವೇಳೆ ಶಾಸಕರು ರಕ್ತದೊತ್ತಡ ತಪಾಸಣೆ ಮಾಡಿಸಿಕೊಂಡು ಗಮನ ಸೆಳೆದರು. ಇದೇ ವೇಳೆ ಆಸ್ಪತ್ರೆಯ ಎಲ್ಲ ವಿಭಾಗಗಳಲ್ಲಿ ಸಂಚರಿಸಿ ರೋಗಿಗಳಿಗೆ ಸರಿಯಾಗಿ ಸ್ಪಂದಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಲಶೆಟ್ಟಿ ಚಿದ್ರೆ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸುಭಾಷ, ಜೆಸ್ಕಾಂ ಎಇಇ ರವಿ ಕಾರಬಾರಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಕೃಷಿ ಇಲಾಖೆಯ ಧೂಳಪ್ಪ, ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ವೆಂಕಟರಾವ ಶಿಂಧೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ರವೀಂದ್ರ ಕಲ್ಯಾಣ, ಸಿಡಿಪಿಓ ಇಮಲಪ್ಪಾ, ಮುಖಂಡರಾದ ವಸಂತ ಬಿರಾದಾರ, ಕಿರಣ ಪಾಟೀಲ, ಶಿವರಾಜ ಅಲ್ಮಾಜೆ, ಖಂಡೋಬಾ ಕಂಗಟೆ, ಪ್ರದೀಪ ಪವಾರ, ರವೀಂದ್ರ ರೆಡ್ಡಿ, ಖಾಜಾಮಿಯ್ಯಾ, ಸಂಜು ವಡೆಯರ್, ರಾಮರೆಡ್ಡಿ ಪಾಟೀಲ, ದಯಾನಂದ ಘೂಳೆ, ರಾಜು ಪೋಕಲವಾರ, ರಾವಸಾಬ ಪಾಟೀಲ, ಶರಣಪ್ಪ ಇಟಗ್ಯಾಳ, ಜಗದೀಶ ಪಾಟೀಲ ಸೇರಿದಂತೆ ಇತರರಿದ್ದರು.

# ಜ.6ರಿಂದ ಬಾದಾಮಿ ಬನಶಂಕರಿದೇವಿ ಜಾತ್ರೆ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.4–ದಕ್ಷಿಣ ಭಾರತದಲ್ಲಿಯೇ ಸುಪ್ರಸಿದ್ಧ ಜಾತ್ರೆ ಎನಿಸಿಕೊಂಡಿರುವ ಜಿಲ್ಲೆಯ ಬಾದಾಮಿ ತಾಲೂಕಿನ ಸುಕ್ಷೇತ್ರ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವ ಜನೇವರಿ 6 ರಿಂದ ಆರಂಭಗೊಳ್ಳಲಿದೆ.

ಜ.6 ಸೋಮವಾರ ನವರಾತ್ರಿ ಆರಂಭ, ಘಟಸ್ಥಾಪನೆ, ಧ್ವಜಾರೋಹಣ, ಜ.9 ಬುಧವಾರ ರಿಂದ 12 ರವಿವಾರದವರೆಗೆ ಹೋಮ ಹವನಾದಿಗಳು, ವಾಹನೋತ್ಸವ ಮತ್ತು ಅಷ್ಟಾವಧಾನ, ಜ.12 ರಂದು ರವಿವಾರ ಪೌಶ್ಯ ಶುದ್ದ ಚತುರ್ದಶಿ ಪಲ್ಲೇದಹಬ್ಬ, ಜ.13 ಸೋಮವಾರ ಪೌಷ್ಯ ಶುದ್ಧ ಪೌರ್ಣಿಮೆ ಸಾಯಂಕಾಲ 5 ಗಂಟೆಗೆ ಮಹಾ ರಥೋತ್ಸವ ಜರುಗಲಿದೆ.

ಜ.17 ರಂದು ಶುಕ್ರವಾರ ಸಾಯಂಕಾಲ 5 ಗಂಟೆಗೆ ಕಳಸ ಇಳಿಯುವುದು. ಈ ರೀತಿ ವಿವಿಧ ಕಾರ್ಯಕ್ರಮಗಳು ಜರುಗಲಿದ್ದು, ಭಕ್ತರು ದೇವಿಯ ದರ್ಶನ ಪಡೆದು ಪುನೀತರಾಗ ಬೇಕೆಂದು ಬನಶಂಕರಿ ದೇವಸ್ಥಾನ ಟ್ರಸ್ಟ್ ಕಮಿಟಿ ಚೇರಮನ್ ವೆಂಕಟಭಟ್ ಪೂಜಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜ.6 ದೇವಿಯ ದರ್ಶನ ಇಲ್ಲ: ಬನಶಂಕರಿದೇವಿ ಜಾತ್ರೆಯ ನಿಮಿತ್ತ ಜ.6 ರಂದು ಸೋಮವಾರ ಜಾತ್ರಾ ಘಟಸ್ಥಾಪನೆ ಇರುವುದರಿಂದ ಬೆಳಿಗ್ಗೆ 6.30 ರಿಂದ 9.30 ರ ವರೆಗೆ ಧರ್ಮ ದರ್ಶನಕ್ಕೆ ಅವಕಾಶವಿದೆ. ಬೆಳಿಗ್ಗೆ 9.30 ರಿಂದ ಸಾಯಂಕಾಲ 4.30 ರ ವರೆಗೆ ಧರ್ಮ ದರ್ಶನ ಮತ್ತು ಯಾವುದೇ ಸೇವೆಗಳು ಲಭ್ಯವಿರುವುದಿಲ್ಲ. ಧರ್ಮ ದರ್ಶನ ಮತ್ತು ವಿಶೇಷ ಸೇವೆಗಳು ಸಾಯಂಕಾಲ 4.30 ರ ನಂತರ ಪ್ರಾರಂಭವಾಗುತ್ತವೆ. ಭಕ್ತಾಧಿಗಳು ಸಹಕರಿಸಬೇಕೆಂದು ಟ್ರಸ್ಟ್ ಕಮಿಟಿ ಚೇರಮನ್



ವೆಂಕಟಭಟ್ ಪೂಜಾರ ತಿಳಿಸಿದ್ದಾರೆ.

ನಾಟಕಗಳ ಪ್ರದರ್ಶನ:ಬನಶಂಕರಿ ದೇವಿ ಜಾತ್ರೆಯಲ್ಲಿ ಹಲವಾರು ನಾಟಕ ಕಂಪನಿಗಳು ಅನೇಕ ನಾಟಕಗಳನ್ನು ಪ್ರದರ್ಶಿಸಲಿವೆ. ಒಂದು ತಿಂಗಳ ಪರ್ಯಂತ ನಡೆಯುವ ನಾಟಕಗಳು ಜನರನ್ನು ಆಕರ್ಷಿಸಲಿದ್ದು, ಬನದ ಹುಣ್ಣಿಮೆಯಿಂದ ಭಾರತ ಹುಣ್ಣಿಮೆಯವರೆಗೂ ನಾಟಕಗಳ ಪ್ರದರ್ಶನವಿರುತ್ತದೆ.

ಈ ಬಾರಿಯ ಜಾತ್ರೆಯಲ್ಲಿ ನಡೆಯುವ ನಾಟಕಗಳಲ್ಲಿ ರಂಗಭೂಮಿಯ ಖ್ಯಾತ ನಟರಲ್ಲದೇ ಕಾಮಿಡಿ ಕಿಲಾಡಿಯ ಅನೇಕ ಜನ ಹಾಸ್ಯ ಕಲಾವಿದರೂ ಸಹ ಪಾತ್ರ ನಿರ್ವಹಿಸಿ ಗಮನ ಸೆಳೆಯಲಿದ್ದಾರೆ. ಚಿತ್ತರಗಿಯ ಕುಮಾರ ವಿಜಯ ನಾಟಕ ಸಂಘದವರ 'ಬಂಪರ್ ಬಂಗಾರಿ ಸೂಪರ್ ಸಿಂಗಾರಿ', ಕಲ್ಲೂರು ಗುರು ಮಲ್ಲಿಕಾರ್ಜುನ ನಾಟ್ಯ ಸಂಘದ 'ಸುಮ್ನಿರ ಸುಂದ್ರಿ', ಮಂಡಲಗಿರಿಯ ಗುರು ಸಿದ್ದಲಿಂಗೇಶ್ವರ ನಾಟ್ಯ ಸಂಘದವರ 'ನೀ ಹೂ ಅಂ–ದ್ರ ಗಿಚ್ಚ ಆಕ್ಕೆನಿ ಇಲ್ಲಂದ್ರ ಹುಚ್ಚಿಕ್ಕೆನಿ', ತಾಳಿಕೋಟಿಯ ಗುರು ಖಾಸ್ಗತೇಶ್ವರ ನಾಟ್ಯ ಸಂಘದಿಂದ ಜೈನಿ ಮಾಡಾಕ ರೊಕ್ಕ ಬೇಕು ಪ್ರೀತಿ ಮಾಡಾಕ ದಿಲ್ ಬೇಕು', ಗುಳೇದಗುಡ್ಡದ ಸಂಗಮೇಶ್ವರ ನಾಟ್ಯ ಸಂಘದವರ 'ಜಂಪ್ ಹೊಡಿತಾಳ ಕೆಂಪಿ', ಗದಗ ಗುರು ಪುಟ್ಟರಾಜ ನಾಟ್ಯ ಸಂಘದವರ 'ರೊಕ್ಕಿನಾವ ನಾ ಅಲ್ಲಾ, ಸೊಕ್ಕಿನಾವ ನಾ ಅಲ್ಲಾ'

# ವಿದ್ಯಾರ್ಥಿಗಳ ಸುಪ್ತ ಪ್ರತಿಭೆ ಗುರುತಿಸಿ, ಪ್ರೋತ್ಸಾಹಿಸಿ:ಶಾಸಕ ಚನ್ನಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜ.04: ವಿದ್ಯಾರ್ಥಿಗಳಲ್ಲಿನ ಪ್ರತಿಭೆಗಳನ್ನು ಪ್ರೋತ್ಸಾಹಿಸಿ ಅವರ ಭವಿಷ್ಯ ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದ್ದು, ಹಿಂದುಳಿದ ಜಿಲ್ಲೆಯವರು ಎಂಬುವ ವಿದ್ಯಾರ್ಥಿಗಳಲ್ಲಿನ ಮನಸ್ಥಿಯನ್ನು ಬದಲಾಯಿಸಲು ಪ್ರಯತ್ನಿಸುವಂತೆ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಅವರು ಶಿಕ್ಷಕರಿಗೆ ಕರೆ ನೀಡಿದರು.

ನಗರದ ತಿಮ್ಮಣ್ಣ ಹೆಡಗಿಮದ್ರಿ ಇಂಟರ್‌ನ್ಯಾಷನಲ್ ಸ್ಕೂಲ್, ಜಿಲ್ಲಾ ಪಂಚಾಯತ, ಉಪನಿರ್ದೇಶಕರ ಕಾರ್ಯಾಲಯ, ಶಾಲಾ ಶಿಕ್ಷಣ ಇಲಾಖೆ ಯಾದಗಿರಿ, ಇವರ ಸಂಯುಕ್ತ ಆಶ್ರಯದಲ್ಲಿ 2024–25 ನೇ ಸಾಲಿನ ,ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ಭಾಗದ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಮುಂದೆ ಬರಬೇಕು. ಪರೀಕ್ಷೆಗಳಲ್ಲಿ ಫಲಿತಾಂಶ ಹೆಚ್ಚಳಕ್ಕೆ ವಿಶೇಷ ತರಬೇತಿ ನೀಡಿ ಮುಂದೆ ಬರುವಂತೆ ನೋಡಿಕೊಳ್ಳಲು ಶಿಕ್ಷಕರು ಹಾಗೂ ಪಾಲಕರಿಗೆ ಕರೆ ನೀಡಿದ ಅವರು ವಿದ್ಯಾರ್ಥಿಗಳೂ ಸಹ ಅಧ್ಯಯನದಲ್ಲಿ ವಿಶೇಷ ಗಮನ ನೀಡುವಂತೆ ಸಲಹೆ ನೀಡಿದರು. ಶಿಕ್ಷಕರು ವಿದ್ಯಾರ್ಥಿಗಳಿಗೆ ದೀಪದ ಕರ್ಪುರದಂತೆ ನೆರವಾಗಬೇಕು. ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಶೇ.90 ರಷ್ಟು ಅಂಕ ಪಡೆಯುವ ದಿಸೆಯಲ್ಲಿ ಸನ್ನದ್ಧಗೊಳಿಸಿ ಪ್ರೋತ್ಸಾಹಿಸಬೇಕು. ವಿದ್ಯಾರ್ಥಿಗಳ ಪ್ರತಿಭೆಗಳಿಗೆ ಪ್ರೋತ್ಸಾಹಿಸಲು ಸರ್ಕಾರ ಸದಾ ನೆರವಾಗಿ ನಿಂತಿದ್ದು, ಅಕ್ಷರಜ್ಞಾನ ಹೆಚ್ಚಿಸಲು ಮತ್ತು ಪ್ರೋತ್ಸಾಹಿಸಲು ಈ ಭಾಗದ ಎಲ್ಲ ಜನಪ್ರತಿನಿಧಿಗಳು ಸಹ ಸಹಕಾರ ನೀಡುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ ಒರಡಿಯಾ ಮಾತನಾಡಿ, ಈ ಭಾಗದ ವಿದ್ಯಾರ್ಥಿಗಳಲ್ಲಿನ ಹಿಂದುಳಿದ ಭಾಗದವರು ಎಂಬ ಮನಸ್ಥಿತಿ ಹೋಗಬೇಕು. ಇಲ್ಲಿ ನಡೆಯುತ್ತಿರುವ ಇಂತಹ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳ ಪ್ರತಿಭೆ ಗುರುತಿಸಬೇಕು. ವಿದ್ಯಾರ್ಥಿಗಳೂ ಸಹ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಜಿಲ್ಲೆಯ ಕೀರ್ತಿ ಹೆಚ್ಚಿಸಿ, ಸಾಧನೆ ತೋರುವಂತೆ ಕರೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ. ಸಿ.ಎಸ್. ಮುದೋಳ್ ಮಾತನಾಡಿ. ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಇನ್ನೂ ಕೇವಲ 74 ದಿನಗಳು ಉಳಿದಿವೆ. ಕಾರಣ ಹೈಸ್ಕೂಲ್ ಶಿಕ್ಷಕರಿಗೆ ಬೇರೆ ಯಾವ ಕೆಲಸಗಳನ್ನು ಹಚ್ಚುವುದು ಬೇಡ ಎಂದು ಹೇಳಿ, ದಿನನಿತ್ಯ ವಿದ್ಯಾರ್ಥಿಗಳ ಪ್ರತಿಭೆ, ಫಲಿತಾಂಶ ಸುಧಾರಣೆಗೆ ಗಮನ ನೀಡಲು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರಾದ ಜಿ.ಎಂ.ವೃಷಬೆಂದ್ರಯ್ಯ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ವಿನಾಯಕ ಮಾಲಿ ಪಾಟೀಲ್, ಕರ್ನಾಟಕ ರಾಜ್ಯ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಅಶೋಕ ಕುಮಾರ ಕೆಂಭಾವಿ, ತಾಲೂಕು ಅಧ್ಯಕ್ಷ ಶರಣಗೌಡ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಹಣಮಂತ ಹೊಸಮನಿ, ಲಿಪಿಕ ನೌಕರರ ಸಂಘದ ಅಧ್ಯಕ್ಷ ಆದೆಪ್ಪ ಬಾಗ್ಲಿ, ತಿಮ್ಮಣ್ಣ ಹೆಡಗಿಮದ್ರಿ ಇಂಟರ್‌ನ್ಯಾಷನಲ್ ಸ್ಕೂಲ್ ಅಧ್ಯಕ್ಷ ಅನೀಲ ಕುಮಾರ ಹೆಡಗಿಮದ್ರಿ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಬಿ ಪಾಟೀಲ್, ಶಿಕ್ಷಣ ಸಂಯೋಜಕ ಕಿಶನ್ ಪವಾರ್, ವಿಷಯ ಪರಿವಿಕ್ಷಕ ಬಸನಗೌಡ, ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಚಿತ್ರಶೇಖರ, ಸ್ಥಳೀಯ ಸಿಆರ್‌ಪಿ ರವಿಚಂದ್ರ ನಾಯ್ಕಲ್, ಮುಖ್ಯಗುರುಗಳಾದ ಪುಷ್ಪಾಂಜಲಿ ಮಹಾಬಳೆಶ್ವರ, ಸಾನೀಯಾ ಸೈಯದ್ ಸೇರಿದಂತೆ ವಿವಿಧ ಶಾಲೆಯ ಮಕ್ಕಳು ಉಪಸ್ಥಿತರಿದ್ದರು.

# ಬಿಜೆಪಿ ಗೂಂಡಾಗಿರಿ; ನಮ್ಮ ಗಾಂಧಿಗಿರಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.4:ಸಚೀನ ಪಾಂಚಾಳ ಆತ್ಮಹತ್ಯೆ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ ಖರ್ಗೆ ರಾಜೀನಾಮೆಗೆ ಒತ್ತಾಯಿಸಿ ಭಾರತೀಯ ಜನತಾ ಪಕ್ಷದ ಮುಖಂಡರು ಸಚಿವ ಪ್ರಿಯಾಂಕ್ ಖರ್ಗೆ ಕಲಬುರಗಿ ನಿವಾಸಕ್ಕೆ ಮುತ್ತಿಗೆ ಹಾಕಲು ಧಾವಿಸಿದಾಗ ಅವರಿಗೆ ಖಡಕ್ ಕೌಂಟರ್ ನೀಡಲು ಕಾಂಗ್ರೆಸ್ ಮುಖಂಡರು ಪಾನೀಯ ವ್ಯವಸ್ಥೆ ಮಾಡಿದ್ದರು.

ಕಾಂಗ್ರೆಸ್ ಯುವಮುಖಂಡರಾದ ಪ್ರವೀಣ ಹರವಾಳ್, ರಾಜು ಜಾನೆ, ಸಚಿನ್ ಶಿರವಾಳ, ಬ್ಲಾಕ್ ಅಧ್ಯಕ್ಷ ಶಿವು ಹೊನಗುಂಟಿ ಇನ್ನಿತರರ ನೇತೃತ್ವದಲ್ಲಿ ಪ್ರಿಯಾಂಕ್ ನಿವಾಸದ ಎದುರು ಬಿಜೆಪಿ ಮುಖಂಡರಿಗಾಗಿ ಎಳನೀರು, ಚಹಾ ಸೇರಿದಂತೆ ಇತರ ಪಾನೀಯಗಳನ್ನು ಇಟ್ಟು ಆತಿಥ್ಯ ನೀಡುವ ವ್ಯವಸ್ಥೆ ಮಾಡಿಕೊಂಡಿದ್ದರು.

# ಗಂಗಾ ಪೂಜೆ: ಗಮನ ಸೆಳೆದ ರಾಚೋಟೇಶ್ವರ ಮಠ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜ.4: ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠ ಗಂಗಾ ಪೂಜೆಯಿಂದಾಗಿ ಗಮನ ಸೆಳೆಯುತ್ತಿದೆ.

ಮಠದಲ್ಲಿ ಪ್ರತಿ ವರ್ಷ ಹಮ್ಮಿಕೊಳ್ಳಲಾಗುವ 11 ದಿನಗಳ ಸಿದ್ಧರಾಮೇಶ್ವರ ನಮ್ಮೂರ ಜಾತ್ರಾ ಮಹೋತ್ಸವದಲ್ಲಿ ಗಂಗಾ ಪೂಜೆ ನಡೆಸಿಕೊಂಡು ಬರಲಾಗುತ್ತಿದೆ. ಈ ಬಾರಿಯ ಜಾತ್ರೆಯಲ್ಲೂ ನಿತ್ಯ ಗಂಗಾ ಪೂಜೆ ನೆರವೇರುತ್ತಿದೆ.

ಹಿಂದೆ ಬರದಿಂದಾಗಿ ಹಲಬರ್ಗಾ ಗ್ರಾಮದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿತ್ತು. ಆಗ ಮಠದ ಎರಡನೇ ಪೀಠಾಧಿಪತಿ ಸಿದ್ಧರಾಮೇಶ್ವರರು ತಮ್ಮ ಕೈಯ್ಯಾರೆ 22 ಅಡಿ ಆಳದ ಬಾವಿ ತೋಡಿ ಜನರ ಬಾಯಾರಿಕೆ ನೀಗಿಸಿದ್ದರು. ಬಾವಿಯ ನೀರಿನ ಸೆಲೆ ಇಂದಿಗೂ ಬತ್ತಿಲ್ಲ. ಹೀಗಾಗಿ ಜಾತ್ರೆಯಲ್ಲಿ ಬಾವಿಯ ಗಂಗೆಗೆ ಪ್ರತಿ ವರ್ಷ ಪೂಜೆ ಸಲ್ಲಿಸುತ್ತ ಬರಲಾಗುತ್ತಿದೆ ಎಂದು ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ತಿಳಿಸಿದರು.

ದೇಶದಲ್ಲೇ ಕಾಶಿ ಗಂಗಾ ಪೂಜೆಗೆ ಹೆಸರಾಗಿದೆ. ಜಿಲ್ಲೆಯಲ್ಲಿ ಗಂಗಾ ಪೂಜೆ ನಡೆಯುವುದು ಹಲಬರ್ಗಾ ಮಠದಲ್ಲಿ ಮಾತ್ರ ಎಂದು ಹೇಳಿದರು.

ಜನವರಿ 1 ರಿಂದ ಆರಂಭವಾದ ಜಾತ್ರೆ 11 ರ ವರೆಗೆ ನಡೆಯಲಿದೆ. ನಿತ್ಯ ಸಂಜೆ ನೂರಾರು ಮುತ್ತೈದೆಯರು ಬಾಯಾರಿಕೆ ನೀಗಿಸುವ ಗಂಗಾ ಮಾತೆಗೆ ಪೂಜೆ ಸಲ್ಲಿಸುತ್ತಿದ್ದಾರೆ. ಜಾತ್ರೆ ಮುಕ್ತಾಯದವರೆಗೂ ಗಂಗಾ ಪೂಜೆ ಜರುಗಲಿದೆ ಎಂದು ತಿಳಿಸಿದರು. ಅನ್ನ, ನೀರು ಹಾಗೂ ಜ್ಞಾನ ಅಮೂಲ್ಯ ರತ್ನಗಳು. ನೀರಿಲ್ಲದೆ ಭುವಿಯ ಮೇಲೆ ಜೀವ ಸಂಕುಲ ಬದುಕಲು ಸಾಧ್ಯವಿಲ್ಲ. ಹೀಗಾಗಿ ನೀರಿನ ಮಹತ್ವ ಅರಿಯಬೇಕು. ನೀರನ್ನು ಹಿತ ಮಿತವಾಗಿ ಬಳಸಬೇಕು. ಗಂಗಾ ಮಾತೆಗೆ ಕೃತಜ್ಞತೆ ಸಲ್ಲಿಸಬೇಕು ಎಂದು ಹೇಳಿದರು.

Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy, Office Ph. No: +91 9449732000.